ಸಂಪುಟ: 06 ಸಂಚಿಕೆ: 111 ಪುಟಗಳು: 08 ಶನಿವಾರ 04 ಜುಲೈ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ತಪ್ಪು ಎನ್ನುವುದು ಜೀವನದ ಒಂದು ಪುಟ ಅಷ್ಟೇ, ಆದರೆ ಸಂಬಂಧ ಎನ್ನುವುದು ಒಂದು ಪುಸ್ತಕವಿದ್ದಂತೆ. ಒಂದು ಪುಟಕ್ಕಾಗಿ ಇಡೀ ಪುಸ್ತಕವನ್ನು ಕಳೆದುಕೊಳ್ಳಬಾರದು.

## ಡೇ ಕೇರ್‌ನಲ್ಲಿ ಮಕ್ಕಳ ಮೇಲೆ ದೌರ್ಜನ್ಯ ಪ್ರಕರಣ ಮಹಿಳೆ ಬಂಧನ, ಉಳಿದ ಆರೋಪಿಗಳಿಗೆ ಶೋಧ

• ಉದಯವಾಹಿನಿ, ಬೆಂಗಳೂರು

ನಗರದ ಪ್ರತಿಷ್ಠಿತ ಐಟಿ ಸಂಸ್ಥೆಯಾದ ಕ್ಯಾಪ್ಜೆಮಿನಿ ಆವರಣದಲ್ಲಿರುವ ಡೇಕೇರ್ ಕೇಂದ್ರದಲ್ಲಿ ಪುಟ್ಟ ಮಕ್ಕಳ ಮೇಲೆ ನಡೆದಿದೆ ಎನ್ನಲಾದ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ, ಹೆಚ್‌ಎಎಲ್ ಠಾಣೆ ಪೊಲೀಸರು ಮಹಿಳೆಯೊಬ್ಬರನ್ನು ಬಂಧಿಸಿ ತನಿಖೆಯನ್ನು ಚುರುಕುಗೊಳಿಸಿದ್ದಾರೆ. ಬಂಧಿತ ಮಹಿಳೆಯನ್ನು ವಿಜಯಲಕ್ಷ್ಮಿ ಎಂದು ಗುರುತಿಸ ಲಾಗಿದೆ. ದಾಖಲಾಗಿರುವ ಎಫ್‌ಐಆರ್‌ನಲ್ಲಿ ಇವರನ್ನು ಎರಡನೇ ಆರೋಪಿ ಎಂದು ಉಲ್ಲೇಖಿಸಲಾಗಿದೆ. ಲೆಮರೆಸಿಕೊಂಡಿರುವ ಉಳಿದ ಆರೋಪಿಗಳ ಬಂಧನಕ್ಕೆ ಶೋಧ ಕಾರ್ಯ ಮುಂದುವರೆದಿದೆ. ತನಿಖಾಧಿಕಾರಿಗಳು ಡೇಕೇರ್ ಕೇಂದ್ರದ ಸಿಸಿಟಿವಿ ದೃಶ್ಯಾವಳಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ, ದೌರ್ಜನ್ಯದಲ್ಲಿ ವಿಜಯಲಕ್ಷ್ಮಿಯ ಪಾತ್ರವಿರುವುದು ದೃಢಪಟ್ಟಿದೆ. ಇದರ ಬೆನ್ನಲ್ಲೇ ಆಕೆಯನ್ನು ಬಂಧಿಸಿದ್ದಾರೆ. ಆರೋಪಿಯ ಮೇಲೆ ಭಾರತೀಯ ನ್ಯಾಯ ಸಂಹಿತೆ ಮತ್ತು ಬಾಲಾಪರಾಧಿ ನ್ಯಾಯ ಕಾಯ್ದೆಯ ಕಠಿಣ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಪ್ರಕರಣದಲ್ಲಿ ಶಾಮೀಲಾದ ಇತರ ಮೂವರು ಆರೋಪಿಗಳಿಗೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಲಾಗಿದೆ.

## ಮಾಜಿ ಸಿಎಂ ಸಿದ್ದರಾಮಯ್ಯ ಮನೆಗೆ ಡಿಕೆಶಿ ಕುಟುಂಬ ಭೇಟಿ, ಉಪಾಹಾರ ಕೂಟ

• ಉದಯವಾಹಿನಿ, ಬೆಂಗಳೂರು

ಮಹತ್ವದ ಬೆಳವಣಿಗೆ ಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕುಟುಂಬ ಸಮೇತರಾಗಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಉಪಾಹಾರ ಕೂಟ ನಡೆಸಿದ್ದಾರೆ. ನಾಯಕತ್ವ ಬದಲಾದ ಬಳಿಕ ಡಿ.ಕೆ.ಶಿವಕುಮಾರ್ ಕುಟುಂಬ ಮತ್ತು ಸಿದ್ದರಾಮಯ್ಯ ಅವರ ಮೊದಲ ಭೇಟಿ ಇದಾಗಿದೆ. 8 ವರ್ಷ ಕಾಲ ಮುಖ್ಯಮಂತ್ರಿ ಯಾಗಿದ್ದ ಸಿದ್ದರಾಮಯ್ಯ ಅವರು ಯಾವುದೇ ತಗಾದೆ ಇಲ್ಲದೇ ನಿರಾಳವಾಗಿ ಮುಖ್ಯಮಂತ್ರಿ ಸ್ಥಾನವನ್ನು ಡಿ.ಕೆ.ಶಿವಕುಮಾರ್ ಅವರಿಗೆ ಬಿಟ್ಟುಕೊಟ್ಟಿದ್ದರು.

ಅಧಿಕಾರ ಹಸ್ತಾಂತರಕ್ಕೂ ಮುನ್ನ ರಾಜ್ಯದಲ್ಲಿ ಈ ವಿಚಾರಗಳ ಕುರಿತು ಭಾರೀ ಚರ್ಚೆಗಳು ನಡೆಯುತ್ತಿದ್ದವು. ಆ ಸಂದರ್ಭದಲ್ಲಿ ಕಾಂಗ್ರೆಸ್ ಹೈಕಮಾಂಡ್ ಮಿತಿ ದಾಟದಂತೆ ಇಬ್ಬರು ನಾಯಕರಿಗೂ ಸೂಚನೆ ನೀಡಿತ್ತು. ಒಂದು ಹಂತದಲ್ಲಿ ಹೈಕಮಾಂಡ್ ಸೂಚನೆ ಮೇರೆಗೆ ಡಿ.ಕೆ.ಶೀವಕುಮಾರ್, ಸಿದ್ದರಾಮಯ್ಯ ಅವರ ಮನೆಗೆ, ಸಿದ್ದರಾಮಯ್ಯ ಅವರು ಡಿ.ಕೆ.ಶಿವಕುಮಾರ್ ಅವರ ಮನೆಗೆ ಭೇಟಿ ನೀಡಿ ಉಪಾಹಾರ ಕೂಟ ನಡೆಸಿದ್ದರು.

ಆ ವೇಳೆ ನಾಯಕತ್ವ ಬದಲಾವಣೆ ವಿಚಾರವಾಗಿ ಹೈಕಮಾಂಡ್ ನೀಡುವ ಸೂಚನೆಗೆ ಬದ್ಧರಾಗಿ ನಡೆದುಕೊಳ್ಳುವುದಾಗಿ ಇಬ್ಬರು ನಾಯಕರೂ ಹೇಳಿದ್ದರು.ಅಧಿಕಾರ ತ್ಯಾಗದ ಬಳಿಕ ಸಿದ್ದರಾಮಯ್ಯ ಅವರನ್ನು ಕಡೆಗಣಿಸಲಾಗುತ್ತಿದೆ ಎಂಬ ಸಣ್ಣ ಮಟ್ಟದ ಅಪಸ್ವರಗಳು ಅಲ್ಲಲ್ಲಿ ಕಂಡು ಬರುತ್ತಿದೆ. ಇದನ್ನು ತೊಡೆದು ಹಾಕುವ ನಿಟ್ಟಿನಲ್ಲಿ ಡಿ.ಕೆ.ಶಿವಕುಮಾರ್ ಮಹತ್ವದ ಹೆಜ್ಜೆ ಇಟ್ಟಿದ್ದಾರೆ.

## ಬೆಂಗಳೂರಲ್ಲಿ ಸಚಿವ ಕೃಷ್ಣಭೈರೇಗೌಡ ಸಿಟಿ ನೈಟ್ ರೌಂಡ್ಸ್, ಅಧಿಕಾರಿಗಳಿಗೆ ಛೀಮಾರಿ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಭೈರೇಗೌಡ ನಿನ್ನೆ ತಡ ರಾತ್ರಿ ನಗರದಲ್ಲಿ ಗಸ್ತು ತಿರುಗುವ ಮೂಲಕ ಸ್ವಚ್ಛತೆ, ಸಂಚಾರ ದಟ್ಟಣೆ, ವಿವಿಧ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು.

ಸಚಿವರ ನೈಟ್ ರೌಂಡ್ಸ ವೇಳೆ ಅಧಿಕಾರಿಗಳ ಕಳ್ಳಾಟ ಪತ್ತೆಯಾಗಿದ್ದು ಕೆಲವರನ್ನು ಸ್ಥಳದಲ್ಲೇ ತರಾಟೆಗೆ ತೆಗೆದುಕೊಳ್ಳಲಾಯಿತು. ಸಿಲ್ಕ್ ಬೋರ್ಡ್ ಜಂಕ್ಷನ್‌ನಿಂದ ಬೈಯ್ಯಪ್ಪನಹಳ್ಳಿ ಮೆಟ್ರೋ ನಿಲ್ದಾಣದವರೆಗೆ ರಸ್ತೆ ಸಮಗ್ರ ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವ ಸಂಬಂಧ, ಲೋರಿ ಜಂಕ್ಷನ್‌ನಿಂದ ಇಬ್ಲೂರು ಜಂಕ್ಷನ್‌ವರೆಗೆ ಸಚಿವರು ಸ್ಥಳ ಪರಿಶೀಲನೆ ನಡೆಸಿದರು. ಇದೇ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೊರ ವರ್ತುಲ ರಸ್ತೆ ಸಮಗ್ರ ಅಭಿವೃದ್ಧಿ ಯೋಜನೆಯ ವಿನ್ಯಾಸವನ್ನು ಸ್ಥಳೀಯ ನಾಗರಿಕರೊಂದಿಗೆ ಸಮಾಲೋಚನೆ ನಡೆಸಿ ಅಂತಿಮಗೊಳಿಸಲಾಗುವುದು ಎಂದರು.

ನಗರದ ಅತ್ಯಂತ ಸಂಚಾರ ದಟ್ಟಣೆ ಹೊಂದಿರುವ ರಸ್ತೆಗಳಲ್ಲಿ ಹೊರ ವರ್ತುಲ ರಸ್ತೆಯೂ ಒಂದಾಗಿದೆ. ಈ ರಸ್ತೆಯನ್ನು ಸುಮಾರು 450 ಕೋಟಿ ರೂ. ವೆಚ್ಚದಲ್ಲಿ ಪುನರ್ ನಿರ್ಮಿಸಿ ಅಭಿವೃದ್ಧಿಪಡಿಸಲು ಮುಖ್ಯ ಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಉದ್ದೇಶಿಸಿದ್ದಾರೆ. ಆದರೆ, ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವ ಮೊದಲು ಸಂಚಾರ ದಟ್ಟಣೆ ಸಮಸ್ಯೆಗೆ ಸೂಕ್ತ ಪರಿಹಾರ ಕಂಡುಹಿಡಿಯುವುದು ಅಗತ್ಯವೆಂದು ಹೇಳಿದರು.

## ಸರ್ಕಾರದ ಕ್ರಮಕ್ಕೆ ಕಂಗಾಲಾದ ವಯೋವೃದ್ಧ ಪಿಂಚಣಿದಾರರು: ಕಚೇರಿಗೆ ಅಲೆದಾಟ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ಕೇಂದ್ರದ ಸಹಕಾರದೊಂದಿಗೆ ಸಾಮಾಜಿಕ ಭದ್ರತೆಯಡಿ ಪಿಂಚಣಿಗಳನ್ನು ನೀಡುತ್ತದೆ. 60 ವರ್ಷ ವಯಸ್ಸಾದವರು, ವಿಧವೆಯರು ಸೇರಿದಂತೆ ಅನೇಕರಿಗೆ ಮಾಸಿಕ ಪಿಂಚಣಿ ನೀಡುತ್ತದೆ. ಆದರೆ ಗ್ಯಾರಂಟಿ ಯೋಜನೆಗಳ ಅನರ್ಹ ಫಲಾನುಭವಿಗಳನ್ನು ತೆಗೆದುಹಾಕಲು ಪರಿಷ್ಕರಣೆ ಜೊತೆಗೆ ಇದೀಗ ಪಿಂಚಣಿ ಫಲಾನುಭವಿಗಳ ಪರಿಷ್ಕರಣೆ ಕೂಡ ಮಾಡಲಾಗುತ್ತಿದೆ. ಪಿಂಚಣಿ ಪಡೆಯುತ್ತಿರುವವರಲ್ಲಿ ಶಂಕಾಸ್ಪದ ಪಿಂಚಣಿ ಫಲಾನುಭವಿಗಳಿಗೆ ಕಳೆದ ಕೆಲ ತಿಂಗಳಿಂದ ಪಿಂಚಣಿ ಹಾಕಿಲ್ಲ. ಇದೀಗ ಅವರು ಹೊಸದಾಗಿ ದಾಖಲಾತಿಗಳನ್ನು ನೀಡಬೇಕು. ಇದಕ್ಕಾಗಿ ವೃದ್ಧರು ತಹಶೀಲ್ದಾರ್ ಕಚೇರಿಯಲ್ಲಿ ಗಂಟೆಗಟ್ಟಲೇ ಕಾಯಬೇಕಾದ ಸ್ಥಿತಿ ನಿರ್ಮಾಣವಾಗಿದೆ.

ಪಿಂಚಣಿ ಫಲಾನುಭವಿಗಳು ಹುಬ್ಬಳ್ಳಿ ನಗರದ ತಹಶೀಲ್ದಾರ್ ಕಚೇರಿಗೆ ಬೆಳಿಗ್ಗೆ ಬಂದು ಸರದಿ ಸಾಲಿನಲ್ಲಿ ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ.








ರಾಮನಗರ ಸೇರಿದಂತೆ ರಾಜ್ಯದ ವಿವಿಧೆಡೆ ರಾಜ್ಯ ಸರಕಾರ ಕೇಂದ್ರೀಯ ಚುನಾವಣಾ ಆಯೋಗದ ಮಾರ್ಗಸೂಚಿಯನ್ನು ಗಾಳಿಗೆ ತೂರಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಎಸ್‌ಐಆರ್ ಪ್ರಕ್ರಿಯೆಯನ್ನು ನಡೆಸುತ್ತಿದ್ದು, ಆಡಳಿತ ಯಂತ್ರವನ್ನು ಸಂಪೂರ್ಣವಾಗಿ ದುರುಪಯೋಗ ಮಾಡಿಕೊಳ್ಳುತ್ತಿದೆ. ಕೆಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು ರಾಜ್ಯ ಸರಕಾರದ ತಾಳಕ್ಕೆ ತಕ್ಕಂತೆ ಕುಣಿಯುತ್ತಿದ್ದಾರೆ. ಈ ಬಗ್ಗೆ ಕೇಂದ್ರ ಚುನಾವಣಾ ಆಯುಕ್ತರಿಗೆ ಖುದ್ದು ನಾನೇ ಹೋಗಿ ದೂರು ನೀಡುತ್ತೇನೆ. **ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ**



- ಮಸೀದಿಗಳಲ್ಲಿ ಎಸ್‌ಐಆರ್
- ರಾಜ್ಯ ಸರ್ಕಾರದ ವ್ಯವಸ್ಥಿತ ಷಡ್ಯಂತ್ರ ಎಂದ ವಿಜಯೇಂದ್ರ
- ಬಾಂಗ್ಲಾ ನಿವಾಸಿಗಳನ್ನು ಮತದಾರರ ಪಟ್ಟಿಗೆ ಸೇರಿಸುವ ಷಡ್ಯಂತ್ರ



**1** ರಾಮನಗರ ಎಸ್‌ಐಆರ್ ಪ್ರಕರಣದಲ್ಲಿ ಸರ್ಕಾರದ ನೇರ ಹಸ್ತಕ್ಷೇಪ ಆರೋಪ

**2** ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಪ್ರಹ್ಲಾದ್ ಜೋಶಿ

**3** ಪ್ರಕರಣದ ಎಚ್ಚೆತ್ತುಕೊಂಡ ಚುನಾವಣಾ ಆಯೋಗ

# ಎಸ್‌ಐಆರ್ ಪ್ರಕರಣದಲ್ಲಿ ಹಸ್ತಕ್ಷೇಪ ಕಮಲ ಆರೋಪ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರವೇ ವ್ಯವಸ್ಥಿತವಾಗಿ ಷಡ್ಯಂತ್ರ ನಡೆಸಿ ಮಸೀದಿಗಳಲ್ಲಿ ಬೂತ್ ಮಟ್ಟದ ಅಧಿಕಾರಿಗಳನ್ನು ಕೂರಿಸಿ ಮತದಾರರ ವಿಶೇಷ ಪರಿಷ್ಕರಣೆ ನಡೆಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಗಂಭೀರ ಆರೋಪ ಮಾಡಿದ್ದಾರೆ. ಅಧಿಕಾರಿಗಳ ಮೇಲೆ ಒತ್ತಡ ಹಾಕಿ ಮಸೀದಿಗಳು ಮತ್ತು ಕಲ್ಯಾಣ ಮಂಟಪಗಳಲ್ಲಿ ಅಲ್ಪಸಂಖ್ಯಾತರನ್ನು ಗುಡ್ಡೆ ಹಾಕಿಕೊಂಡು ಎಸ್‌ಐಆರ್ ನಡೆಸುವಂತೆ ಒತ್ತಡ ಹಾಕಲಾಗುತ್ತಿದೆ. ಪರಿಣಾಮ ಹಿಂದೂಗಳು ಮತದಾನದ ಹಕ್ಕನ್ನು ಕಳೆದುಕೊಳ್ಳುವ ಹಂತಕ್ಕೆ ಬಂದಿದ್ದಾರೆ. ಕೂಡಲೇ ಚುನಾವಣಾ ಆಯೋಗ ಸರಿಪಡಿಸಬೇಕೆಂದು ಒತ್ತಾಯಿಸಿದರು. ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಬಿಎಲ್‌ಒಗಳು ಕಾಂಗ್ರೆಸ್ ಪಕ್ಷದ ಪರ ಪ್ರಚಾರ ಮಾಡುತ್ತಿದ್ದಾರೆ. ಇದು ಎಸ್‌ಐಆರ್ ಉದ್ದೇಶವನ್ನು ಹಾಳು ಮಾಡುವುದೇ ಆಗಿದೆ. ಕಾಂಗ್ರೆಸ್ ಪಕ್ಷಕ್ಕೆ ಇಬ್ಬಿಬ್ಬರು ಬಿಎಲ್‌ಒಗಳನ್ನು ಏಕೆ ಕೊಟ್ಟಿದ್ದಾರೆ ಎಂದು ಪ್ರಶ್ನಿಸಿದರು. ಕಾಂಗ್ರೆಸ್ ಪಕ್ಷದವರು ಬಿಎಲ್‌ಒಗಳನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವುದಕ್ಕೆ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ವಿಡಿಯೋಗಳನ್ನು ಬಿಡುಗಡೆ ಮಾಡಿದ್ದಾರೆ. ಮಸೀದಿ, ಕಲ್ಯಾಣ ಮಂಟಪಗಳಲ್ಲಿ ನಮ ಹಿಂದೂಗಳು ಒಳಗೆ ಹೋಗದೆ ದೂರ ಉಳಿಯುತ್ತಿದ್ದಾರೆ. ಚುನಾವಣಾ ಆಯೋಗ ಕೂಡಲೇ ಸರಿಪಡಿಸಬೇಕು. ಇಲ್ಲದಿದ್ದರೆ ಕಾನೂನು ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು. ಈಗಾಗಲೇ ನಾವು ಇದಕ್ಕೆ ಸಂಬಂಧಿಸಿದಂತೆ ಆಯೋಗಕ್ಕೆ ದೂರು ನೀಡಿದ್ದೇವೆ. ನಿಜವಾದ ಮತದಾರರು ಪಟ್ಟಿಗೆ ಸೇರ್ಪಡೆಯಾದರೆ ಅಭ್ಯಂತರವಿಲ್ಲ. ಆದರೆ ಅಕ್ರಮವಾಗಿ ಬಂದಿರುವ ವಲಸಿಗರು ಪಟ್ಟಿಗೆ ಸೇರ್ಪಡೆಯಾಗುವುದು ಎಷ್ಟರಮಟ್ಟಿಗೆ ಸರಿ? ಎಂದು ಪ್ರಶ್ನೆ ಮಾಡಿದರು.ಇದು ರಾಜ್ಯದಲ್ಲಿ ತಲೆದೋರಿರುವ ತೀವ್ರ ಬರಗಾಲದ ಪರಿಸ್ಥಿತಿ ಮತ್ತು ಮಳೆಯ ಕೊರತೆ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೀಡಿರುವ ಹೇಳಿಕೆಗೆ ವಿಜಯೇಂದ್ರ ಇದೇ ವೇಳೆ ಕಿಡಿಕಾರಿದರು.



ರಾಜಕೀಯ ಜಟಾಪಟಿಗೆ ಕಾರಣವಾಗಿದೆ. ರಾಜ್ಯದ ಜಲಾಶಯಗಳಲ್ಲಿ ನೀರಿನ ಮಟ್ಟ ತಗಿರುವ ಹಿನ್ನೆಲೆಯಲ್ಲಿ, ರೈತರು ಬೆಳೆ ಬೆಳೆಯಬೇಡಿ ಎಂದು ಮುಖ್ಯಮಂತ್ರಿಗಳು ನೀಡಿರುವ ಸಲಹೆಯನ್ನು ತೀವ್ರವಾಗಿ ಟೀಕಿಸಿದ್ದಾರೆ.

ಕೇವಲ ರಾಜಕೀಯ ಲಾಭಕ್ಕಾಗಿ ಮತದಾರರ ಪಟ್ಟಿಯನ್ನು ತಮಗೆ ಬೇಕಾದಂತೆ ತಿರುಚಲು ಸರ್ಕಾರದ ಉನ್ನತ ಮಟ್ಟದಿಂದಲೇ ವ್ಯವಸ್ಥಿತವಾಗಿ ಸಂಚು ರೂಪಿಸಿದಂತಿದ್ದು, ನಿಜಕ್ಕೂ ಆತಂಕಕಾರಿ ಬೆಳವಣಿಗೆ ಎಂದು ಸಚಿವರು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಸ್ವತಂತ್ರವಾಗಿ ನಡೆಯಬೇಕಾದ ಈ ಒಂದು ಸಾಂವಿಧಾನಿಕ ಪ್ರಕ್ರಿಯೆಯಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರದ ಈ ರೀತಿಯ ಹಸ್ತಕ್ಷೇಪ ಮತ್ತು ಸ್ಥಳೀಯ ಆಡಳಿತದ ಮೇಲಿನ ಒತ್ತಡ ಅತ್ಯಂತ ಖಂಡನೀಯ ಎಂದಿದ್ದಾರೆ. ಕೇಂದ್ರ ಚುನಾವಣಾ ಆಯೋಗದ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ನಿಯಮಾವಳಿ, ಮಾರ್ಗಸೂಚಿಗಳನ್ನು ಸಂಪೂರ್ಣ ಗಾಳಿಗೆ ತೂರಿ, ಸ್ಥಳೀಯ ದುರ್ಬಳಕೆ ಮಾಡಿಕೊಂಡು ನಡೆಸಿರುವ ಈ ಪರಿಷ್ಕರಣೆ ಕಾನೂನುಬಾಹಿರವಾಗಿದೆ ಎಂದು ಆರೋಪಿಸಿದ್ದಾರೆ ಜೋಶಿ.

### ಎಚ್ಚೆತ್ತುಕೊಂಡ ಚುನಾವಣಾ ಆಯೋಗ

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಲೋಪಗಳು ಕಂಡು ಬಂದಿರುವ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಎಚ್ಚೆತ್ತುಕೊಂಡಿದೆ. ಬಿಎಲ್‌ಒಗಳು ಮನೆಗಳಿಗೆ ಭೇಟಿ ನೀಡದೆ ಕಚೇರಿಗಳಿಂದಲೇ ಫಾರ್ಮ್‌ಗಳನ್ನು ವಿತರಿಸುತ್ತಿದ್ದಾರೆ ಎಂಬ ದೂರುಗಳು ಬಂದಿತ್ತು.

ಚುನಾವಣಾ ಆಯೋಗದ ಮಾರ್ಗಸೂಚಿಗಳ ಪ್ರಕಾರ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸಬೇಕು. ಬಿಎಲ್‌ಒಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಬೇಕು ಎಂದು ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಸೂಚನೆ ನೀಡಿದ್ದಾರೆ.

### ಬಿಎಲ್‌ಒಗಳಿಗೆ ಖಡಕ್ ಸೂಚನೆ

ರಾಜ್ಯಾದ್ಯಂತ ನಡೆಯುತ್ತಿರುವ ಮತದಾರರ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್)ಗೆ ಸಂಬಂಧಿಸಿದ ಗಣತಿ ಅರ್ಜಿಗಳನ್ನು ಕಡ್ಡಾಯವಾಗಿ ಮನೆ ಮನೆಗೆ ತೆರಳಿ ಮತದಾರರಿಗೆ ವಿತರಣೆ ಮಾಡಬೇಕೆಂದು ಚುನಾವಣಾಧಿಕಾರಿಯವರು ಎಲ್ಲಾ ಬಿಎಲ್‌ಒಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಈ ಸಂಬಂಧ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು, ಭಾರತೀಯ ಚುನಾವಣಾ ಆಯೋಗದ ಮುಖ್ಯ ಆಯುಕ್ತರು ಹಾಗೂ ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಅವರಿಗೆ ಎರಡು ಪುಟಗಳ ಪ್ರತ್ಯೇಕ ಪತ್ರ ಬರೆದು ಎಸ್‌ಐಆರ್‌ನಲ್ಲಿ ಉಂಟಾಗಿರುವ ಲೋಪದೋಷಗಳನ್ನು ಸರಿಪಡಿಸಬೇಕೆಂದು ಆಗ್ರಹಿಸಿದ್ದರು.ಇದಕ್ಕೆ ಸ್ಪಂದಿಸಿರುವ ರಾಜ್ಯ ಮುಖ್ಯ ಚುನಾವಣಾಧಿಕಾರಿ, ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಎಸ್‌ಐಆರ್ ಪ್ರಕ್ರಿಯೆ ಕೈಗೊಳ್ಳಬೇಕೆಂದು ಸೂಚಿಸಿದ್ದಾರೆ.

## ಎಸ್‌ಐಆರ್ ಅರ್ಜಿಗಳು ಬೀದಿಯಲ್ಲಿ ವಿತರಣೆ



ಕಾಂಗ್ರೆಸ್ ಸರ್ಕಾರದ ಕುಮ್ಮಕ್ಕಿನಿಂದಾಗಿ ಬಿಎಲ್‌ಒಗಳು ಬೀದಿಗಳಲ್ಲಿ ಎಸ್‌ಐಆರ್ ಅರ್ಜಿಗಳನ್ನು ಹಂಚುತ್ತಿದ್ದು, ಆ ಮೂಲಕ ಬಾಂಗ್ಲಾ ಜನರನ್ನು ಮತದಾರರ ಪಟ್ಟಿಗೆ ಸೇರಿಸುವ ಷಡ್ಯಂತ್ರ ನಡೆದಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆರೋಪಿಸಿದರು. ದೇಶದ ಭದ್ರತೆಯ ದೃಷ್ಟಿಯಿಂದ ಚುನಾವಣಾ ಆಯೋಗ ಎಸ್‌ಐಆರ್ ಮಾಡುತ್ತಿದೆ. ಇದು ಕೇಂದ್ರ ಸರ್ಕಾರದ ಉದ್ದೇಶ ಕೂಡ ಹೌದು. ಆದರೆ, ಕಾಂಗ್ರೆಸ್ ಸರ್ಕಾರ ಬಾಂಗ್ಲಾ ಜನರ ಪಾಲಿಗೆ ಸ್ವರ್ಗವಾಗಿದೆ. ಈ ಮೊದಲು ಕೋಗಿಲು ಕ್ರಾಸ್‌ನಲ್ಲಿ ಬಾಂಗ್ಲಾ ಜನರಿಗೆ ಮನೆ ನಿರ್ಮಿಸಿಕೊಡಲು ಮುಂದಾಗಿದ್ದು, ಅದರ ವಿರುದ್ಧ ಬಿಜೆಪಿ ಹೋರಾಟ ನಡೆಸಿದ್ದಕ್ಕೆ ಅದನ್ನು ಕೈ ಬಿಟ್ಟಿದ್ದರು. ಬೆಂಗಳೂರು, ಕೊಡಗು, ಚಿಕ್ಕಮಗಳೂರು ಸೇರಿದಂತೆ ಸುಮಾರು 20 ಲಕ್ಷ ಬಾಂಗ್ಲಾ ಜನರು ರಾಜ್ಯದಲ್ಲಿದ್ದಾರೆ. 2002 ರ ಮತದಾರರ ಪಟ್ಟಿಯಲ್ಲಿ ಈ ಬಾಂಗ್ಲಾ ಜನರ ಹೆಸರಿಲ್ಲ. ಆದ್ದರಿಂದ ಬಾಂಗ್ಲಾ ನಿವಾಸಿಗಳಿಗೆ ಹೆದ್ದಾರಿ ನಿರ್ಮಿಸಿಕೊಟ್ಟಿದ್ದು, ಹಜ್ ಭವನ, ಮಸೀದಿಗಳ ಮುಂದೆ ರಾಜಾರೋಷವಾಗಿ ಮತದಾರರ ಪಟ್ಟಿಗೆ ಹೆಸರು ಸೇರಿಸಲಾಗುತ್ತಿದೆ. ಬಿಎಲ್‌ಒಗಳು ಪ್ರತಿ ಮನೆಗೆ ಹೋಗಿ ಸಮೀಕ್ಷೆ ಮಾಡಬೇಕಿದ್ದರೂ ಪ್ರಸಾದ ಹಂಚಿದಂತೆ ಬೀದಿಯಲ್ಲಿ ಕುಳಿತು ಅರ್ಜಿಗಳನ್ನು ಹಂಚುತ್ತಿದ್ದಾರೆ.

ಅಧಿಕಾರಿಗಳು ಮನೆ ಗುರುತು ಮಾಡಿ ಅರ್ಜಿ ತುಂಬಿಸಿ, ಮರಳಿ ಅರ್ಜಿಯನ್ನು ಪಡೆಯಬೇಕು. ಆದರೆ ಕಾಂಗ್ರೆಸ್ ಮತಕ್ಕಾಗಿ ಬಾಂಗ್ಲಾ ಜನರನ್ನು ಪಟ್ಟಿಗೆ ಸೇರಿಸುವ ಷಡ್ಯಂತ್ರ ಮಾಡುತ್ತಿದೆ ಎಂದು ದೂರಿದರು.

## ಕಾನೂನು ಹೋರಾಟಕ್ಕೆ ಮುಂದಾಗುತ್ತಾ ಸರ್ಕಾರ



ರಾಮನಗರದ ಕಲ್ಯಾಣ ಮಂಟಪದಲ್ಲಿ ಎಸ್‌ಐಆರ್ ಪ್ರಕ್ರಿಯೆ ನಡೆಸಿದ ವಿಚಾರವಾಗಿ ಮಾತನಾಡಿದ ಖರ್ಗೆ ಇಲ್ಲಿ ಹೆಚ್ಡಿಕೆ ವರ್ಸಸ್ ಡಿಕೆ ಅಂತೆಲ್ಲ ಇಲ್ಲ. ಎಲ್ಲವೂ ಕಾನೂನು ಮಾರ್ಗದಲ್ಲಿ ನಡೆಯಬೇಕು ನಡೆಯುತ್ತದೆ ಎಂದು ಹೇಳಿದ್ದಾರೆ. ಅಲ್ಲದೇ ಈ ಹಿಂದೆ ಎಸ್‌ಐಆರ್ ನಾವು ಕೇಳಿದ 12 ಪ್ರಶ್ನೆಗಳಿಗೆ ಇನ್ನೂ ಸಹ ಉತ್ತರ ಬಂದಿಲ್ಲ ಎಂದಿದ್ದಾರೆ. ಎಲ್ಲದಕ್ಕೂ ಕಾನೂನೆ ಮಹೋನ್ನತವಾಗಿದ್ದಾಗ ಮತದಾನದ ಹಕ್ಕು ಕಸಿದುಕೊಳ್ಳುವ ಹಕ್ಕು ಯಾರಿಗೂ ಇಲ್ಲ ಎಂದಿದ್ದಾರೆ. ಎಲ್ಲವೂ ಕಾನೂನಾತ್ಮಕವಾಗಿ ಸರಾಗವಾಗಿ ನಡೆಯಬೇಕೆಂಬುದು ಎಲ್ಲರ ಆಶಯ. ಅಷ್ಟೇ ಅಲ್ಲದೇ ಎಸ್‌ಐಆರ್ ಕಾನೂನಾತ್ಮಕವಾಗಿ ನಡೆಸಬೇಕಾದದ್ದು ಆಯೋಗದ ಕೆಲಸ ಸಿಎಂ ಕೆಲಸವಲ್ಲ.ಸಿಎಂ ಪ್ರತಿ ಭೂತ ನೋಡಲಿಕ್ಕೆ ಆಗುತ್ತಾ ಎಂದು ಪ್ರಶ್ನಿಸಿದ್ದಾರೆ. ಅಲ್ಲಲ್ಲಿ ಸಮುದಾಯ ಭವನ ಮಸೀದಿ, ಮಂದೀರಗಳಲ್ಲಿ ನಡೆಸಿದರೆ ಪ್ರಕ್ರಿಯೆ ಬೇಗ ಮುಗಿಯುತ್ತದೆ ಎಂದು ಸ್ಥಳೀಯ ನಾಯಕರು ಹೇಳಿರಬಹುದು ಎಂದಿದ್ದಾರೆ.


## ಫಜೀತಿಗೆ ಸಿಲುಕಿದ ಗೃಹಜ್ಯೋತಿ ಫಲಾನುಭವಿಗಳ ಮಾಹಿತಿ ಸಂಗ್ರಹಿಸುತ್ತಿರುವ ಅಧಿಕಾರಿಗಳು.

• ಉದಯವಾಹಿನಿ, ಬೆಂಗಳೂರು

ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ಮಾಹಿತಿ ಸಂಗ್ರಹಿಸುತ್ತಿರುವ ಅಧಿಕಾರಿಗಳಿಗೆ ಕೆಲ ತಾಂತ್ರಿಕ ಸಮಸ್ಯೆಗಳು ಅಡಚಣೆಯುಂಟು ಮಾಡುತ್ತಿವೆ.ಮೊಬೈಲ್‌ಆ್ಯಪ್‌ನಲ್ಲಿ ವಿದ್ಯುತ್ ಸಂಪರ್ಕದ ಆರ್‌ಆರ್ ಸಂಖ್ಯೆ ನಮೂದಿಸುತ್ತಿದ್ದಂತೆ ಮಾಲೀಕರ ಹೆಸರು ಹಾಗೂ ಗೃಹಜ್ಯೋತಿ ಯೋಜನೆಗಾಗಿ ಯಾರ ಹೆಸರು ಈ ಮೊದಲು ನೋಂದಣಿಯಾಗಿದೆ ಎಂಬ ವಿವರ ಯಾಂತ್ರೀಕೃತವಾಗಿ ಪ್ರದರ್ಶನಗೊಳ್ಳಬೇಕು. ಆದರೆ ಕೆಲವು ಫಲಾನುಭವಿಗಳ ಆರ್‌ಆರ್ ಸಂಖ್ಯೆಯ ವಿವರಗಳು ಯಾಂತ್ರೀಕೃತವಾಗಿ ಕಾಣಿಸಿಕೊಳ್ಳದೇ ಇರುವುದು ತಲೆನೋವಿಗೆ ಕಾರಣವಾಗಿದೆ.

ಇನ್ನೂ ಕೆಲವು ಕಡೆ ಮೊಬೈಲ್ ನೆಟ್‌ವರ್ಕ್‌ಗಳು ಸರಿಯಾಗಿಲ್ಲದೆ, ಸಮೀಕ್ಷೆ ಮಾಡಲಾಗುತ್ತಿಲ್ಲ ಎಂಬ ಆಕ್ಷೇಪಗಳಿವೆ. ಮತ್ತೊಂದೆಡೆ ಮೊಬೈಲ್ ಅಪ್ಲಿಕೇಷನ್ ಇದ್ದಕ್ಕಿದಂತೆ ತೊಂದರೆಗೊಳಗಾಗುತ್ತಿದ್ದು ಸಮೀಕ್ಷೆ ಕೊನೆಗೊಳ್ಳುತ್ತಿದೆ. ಮತ್ತೆ ಹೊಸದಾಗಿ ಎಲ್ಲಾ ವಿವರಗಳನ್ನು ನಮೂದಿಸಬೇಕಾಗುತ್ತಿದ್ದು ಸಮೀಕ್ಷಾದಾರರು ಪೇಚಾಡುತ್ತಿದ್ದಾರೆ.

ಗೃಹಜ್ಯೋತಿ ಫಲಾನುಭವಿಗಳ ಮಾಹಿತಿ ಸಂಗ್ರಹಕ್ಕಾಗಿ ಒಟ್ಟು 11 ಅಂಶಗಳನ್ನು ಪಡೆಯಲಾಗುತ್ತಿದೆ. ಅದರಲ್ಲಿ ಪಾನ್‌ಕಾರ್ಡ್, ಆಧಾರ್‌ಕಾರ್ಡ್, ಜಾತಿಯ ವಿವರಗಳು ಪ್ರಮುಖವಾಗಿವೆ. ಚುನಾವಣೆಯ ವೇಳೆ ಕಾಂಗ್ರೆಸ್ ಪಕ್ಷ ಅತ್ಯುತ್ಸಾಹದಲ್ಲಿ ಎಲ್ಲರಿಗೂ ಗ್ಯಾರಂಟಿ ಯೋಜನೆಗಳನ್ನು ನೀಡುವುದಾಗಿ ಘೋಷಣೆ ಮಾಡಿತ್ತು. ಆದರೆ ಅನುಷ್ಠಾನದ ವೇಳೆಯಲ್ಲಿ ಸಾಕಷ್ಟು ಹಣಕಾಸಿನ ತೊಂದರೆಗಳು ಎದುರಾದವು.ಆ ಸಂದರ್ಭದಲ್ಲಿ ಎಸ್‌ಇಪಿ-ಟಿಎಸ್‌ಪಿ ಹಣವನ್ನು ಬಳಕೆ ಮಾಡಿಕೊಳ್ಳಲಾಗಿತ್ತು. ಇದಕ್ಕೆ ಭಾರೀ ಟೀಕೆಗಳು ವ್ಯಕ್ತವಾದವು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ಮೀಸಲಿಟ್ಟ ಹಣವನ್ನು ಯಾವ ಆಧಾರದ ಮೇಲೆ ಗ್ಯಾರಂಟಿಗಳಿಗೆ ಬಳಸಲಾಗುತ್ತಿದೆ ಎಂಬ ಪ್ರಶ್ನೆಗಳು ಕೇಳಿ ಬಂದವು. ರಾಜಕೀಯ ಟೀಕೆಗಳ ಹೊರತಾಗಿಯೂ ಸರ್ಕಾರ ಎಸ್‌ಇಪಿ-ಟಿಎಸ್‌ಪಿ ಬಳಕೆಯನ್ನು ಮುಂದುವರೆಸಿದೆ. ಭವಿಷ್ಯದಲ್ಲಿ ಇದರಿಂದ ತೊಂದರೆಯಾಗಬಹುದು ಎಂಬ ಕಾರಣಕ್ಕಾಗಿ ಈಗ ಅಧಿಕೃತವಾಗಿ ಮಾಹಿತಿ ಕಲೆ ಹಾಕಲು ಪ್ರಯತ್ನಿಸಲಾಗುತ್ತಿದೆ.





ಕಾಂಗ್ರೆಸ್ ಪಕ್ಷ ಈ ಮೊದಲು ತನ್ನ ಸ್ವಂತ ರಾಜಕೀಯ ಲಾಭಕ್ಕಾಗಿ ಗ್ಯಾರಂಟಿಗಳನ್ನು ಘೋಷಣೆ ಮಾಡಿ, 3 ವರ್ಷ ಯೋಜನೆಯನ್ನೂ ಅನುಷ್ಠಾನಗೊಳಿಸಿ ಈಗ ಮಾಹಿತಿ ಕಲೆ ಹಾಕುತ್ತಿರುವುದು ಪ್ರಶ್ನಾರ್ಹವಾಗಿದೆ. ಪಾನ್‌ಕಾರ್ಡ್, ಆಧಾರ್ ಕಾರ್ಡ್ ನಂತಹ ಸೂಕ್ಷ್ಮ ದಾಖಲೆಗಳನ್ನು ಮೀಟರ್ ರೀಡರ್‌ಗಳು ಸಂಗ್ರಹಿಸುತ್ತಿದ್ದಾರೆ. ಜಾತಿ ಪ್ರಮಾಣಪತ್ರ ಕಡ್ಡಾಯವಲ್ಲ, ಆದರೆ ಜಾತಿಯನ್ನು ಹೇಳಲೇಬೇಕೆಂಬ ಒತ್ತಡಗಳು ಕೇಳಿ ಬರುತ್ತಿವೆ. ಇದರಿಂದ ಕೆಲವು ಕಡೆ ಗೊಂದಲಗಳಾಗಿವೆ. ಅರ್ಕಾವತಿ ಮುಂಡಾಯಿಸಿಬಿಟ್ಟರು. ಅಲ್ಲಿರೋ ಜನರನ್ನು ಜಮೀನು ಮಾರಿ ಪಾತ್ರೆ ತೊಳಿಯೋಕೆ ಕಳಿಸಿದ್ರು. ಡಿನೋಟಿಫಿಕೇಶನ್ ಕುಮಾರಸ್ವಾಮಿ ಮಾಡಿಲ್ಲ, ನಾನು ಮಾಡ್ತೀನಿ ಅಂತಾರೆ. ಅದೇನು ಮಾತಾಡುತ್ತಾರೋ ದೇವರಿಗೆ ಗೊತ್ತು. ಅದೇನು ಮಾತಾಡ್ತಾರೋ ಅದೆಲ್ಲಿ ಜ್ಞಾನ ಇಟ್ಟುಕೊಂಡಿದ್ದಾರೋ ಗೊತ್ತಿಲ್ಲ. ಒಂದು ಕಡೆ ಡಿನೋಟಿಫಿಕೇಶನ್ ಮಾಡಿ ಜೈಲಿಗೆ ಹೋಗಲಾ ಅಂತಾರೆ. ಏನೇನೋ ಮಾತಾಡ್ತಾರೋ ಅವರನ್ನು ದೇವರೇ ಕಾಪಾಡಬೇಕು ಎಂದು ವಾಗ್ದಾಳಿ ನಡೆಸಿದರು. ಕಲ್ಲು ಕ್ವಾರಿ ದುರುಂತ ಪ್ರಕರಣ ವಿಚಾರವಾಗಿ ಪ್ರತಿಕ್ರಿಯಿಸಿ, ಬೆಂಗಳೂರು, ಮಾಗಡಿ ರಸ್ತೆಯಲ್ಲಿರುವ ಮಾದಪಟ್ಟಣ ಗ್ರಾಮದಲ್ಲಿ ಕ್ವಾರಿ ಕೆಲಸ ಮಾಡುವ ಕೂಲಿ ಕಾರ್ಮಿಕರರು ಏಳೆಂಟು ಜನ ಮೃತರಾಗಿದ್ದಾರೆ.

## ಅಶಿಸ್ತು ತೋರಿಸಿದರೆ ಮುಲಾಜಿಲ್ಲದೇ ವಜಾ : ಪೊಲೀಸರಿಗೆ ಆಯುಕ್ತರ ಖಡಕ್ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ಪೊಲೀಸ್ ಇಲಾಖೆ ಶಿಸ್ತಿನ ಇಲಾಖೆ.ಯಾವುದೇ ರ್ಯಾಂಕ್‌ನ ಅಧಿಕಾರಿಗಳು, ಸಿಬ್ಬಂದಿಗಳು ಅಶಿಸ್ತನ್ನು ತೋರಿಸಿದರೆ ಮುಲಾಜಿಲ್ಲದೆ ಅವರನ್ನು ವಜಾ ಮಾಡಲಾಗುವುದೆಂದು ನಗರ ಪೊಲೀಸ್‌ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಎಚ್ಚರಿಸಿದರು.ಆಡುಗೋಡಿಯ ಸಿಎಆರ್ ದಕ್ಷಿಣ ಕವಾಯಿತು ಮೈದಾನದಲ್ಲಿ ಹಮಿಕೊಂಡಿದ್ದ ಮಾಸಿಕ ಪರೇಡ್ ವೀಕ್ಷಿಸಿ ನಂತರ ಅವರು ಮಾತನಾಡಿದರು.



ಅಶಿಸ್ತು ತೋರಿದ ಕೆಲವರ ಮೇಲೆ ಈಗಾಗಲೇ ಕಠಿಣ ಕ್ರಮ ಕೈಗೊಂಡಿದ್ದೇವೆ. ಕರ್ತವ್ಯದಲ್ಲಿ ಲೋಪ ಕಂಡು ಬಂದರೆ ನಿರ್ಧಾಕ್ಷಿಣ್ಯವಾಗಿ ಅಮಾನತು ಮಾಡುವುದಾಗಿ ತಿಳಿಸಿದರು. ನಮ್ಮ 112 ಗೆ ಉತ್ತಮ ಸ್ಪಂದನೆ ವ್ಯಕ್ತವಾಗಿದೆ.

ಈ ಹಿಂದೆ ಸ್ಥಳಕ್ಕೆ ತೆರಳಲು 13 ನಿಮಿಷವಾಗುತ್ತಿತ್ತು. ಇದೀಗ ಕೇವಲ 6 ನಿಮಿಷ 30 ಸೆಕೆಂಡ್ ಒಳಗೆ ಘಟನಾ ಸ್ಥಳಕ್ಕೆ ತಲುಪುತ್ತಿದ್ದಾರೆ. ಇದು ಅತ್ಯಂತ ಶ್ಲಾಘನೀಯ, ಇದು ಬೆಂಗಳೂರು ಪೊಲೀಸರ ಮೆಚ್ಚುಗೆ ಕೆಲಸ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಬೆಂಗಳೂರಿನಂತಹ ದೊಡ್ಡ ಸಿಟಿಯಲ್ಲಿ ತೊಂದರೆಗೊಳಗಾದವರಿಗೆ ಸ್ಪಂದನೆಯೇ ಬಹಳ ಮುಖ್ಯ. ನಮ 112 ಗೆ ಕರೆ ಬಂದ ತಕ್ಷಣ ಹತ್ತಿರದಲ್ಲಿರುವ ವಾಹನ ಸ್ಥಳಕ್ಕೆ ತಲುಪಲಿದೆ. ಇದೊಂದು ಒಳ್ಳೆಯ ಬೆಳವಣಿಗೆ ಎಂದರು. ಅಂತರಾಷ್ಟ್ರೀಯ ಮಾದಕ ವ್ಯಸನ ಮತ್ತು ಕಳ್ಳ ಸಾಗಾಣೆ ವಿರೋಧಿ ದಿನ ಅಂಗವಾಗಿ ರಾಜ್ಯ ಸರ್ಕಾರವು ನಗರದ ಕಂಠೀರವ ಕ್ರೀಡಾಂಗಣದಲ್ಲಿ ಹಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಹಾಗೂ ಗೃಹಸಚಿವರು ರೈಸ್ ಹಾಗೂ ಬೇಡ ಬ್ರೋ ಎಂಬ ಎರಡು ಮಹತ್ವದ ಉಪಕ್ರಮಗಳಿಗೆ ಚಾಲನೆ ನೀಡಿದ್ದಾರೆ. ಈ ಅಭಿಯಾನದಲ್ಲಿ ಕಾನ್‌ಸ್ಟೇಬಲ್‌ನಿಂದ ಹಿಡಿದು ಕಮಿಷನರ್ ಮಟ್ಟದ ವರೆಗೂ ಪಾಲ್ಗೊಳ್ಳಬೇಕು ಎಂದು ಹೇಳಿದರು.

ಇದೊಂದು ವಿಶೇಷ ಅಭಿಯಾನ. ಸಂಚಾರಿ ಪೊಲೀಸರು, ಸಿಎಆರ್, ಬೇರೆ ಬೇರೆ ಘಟಕಗಳ ಸಿಬ್ಬಂದಿಗಳು ತಮಗೂ ಇದಕ್ಕೂ ಸಂಬಂಧವಿಲ್ಲವೆಂದುಕೊಳ್ಳಬಾರದು. ಎಲ್ಲರೂ ಡ್ರಗ್‌ಸ ವಿರುದ್ಧದ ಅಭಿಯಾನದಲ್ಲಿ ಪಾಲ್ಗೊಳ್ಳಬೇಕೆಂದು ಸಲಹೆ ನೀಡಿದರು.

ನಗರದಲ್ಲಿ ಒಟ್ಟು 20 ಸಾವಿರ ಸಿಬ್ಬಂದಿ ಇದ್ದಾರೆ. ಪತ್ರಿಯೊಬ್ಬ ಸಿಬ್ಬಂದಿಯೂ ಕರ್ತವ್ಯದ ಸಂದರ್ಭದಲ್ಲಿ ಡ್ರಗ್ಸ್ ಸೇವನೆ,ಸಾಗಾಟ, ಮಾರಾಟ ಕಂಡು ಬಂದ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಅವರು ಹೇಳಿದರು.

ಉತ್ತಮ ಸಮಾಜ ನಿರ್ಮಾಣಕ್ಕೆ ಜನರಿಗೆ ಸ್ಪಂದಿಸಬೇಕು. ಈಗಾಗಲೇ ನಾವು ಒಂದು ವರ್ಷದಲ್ಲಿ 350 ಕೋಟಿ ಬೆಲೆಯ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದೇವೆ. ಮುಂದೆಯೂ ಸಹ ಡ್ರಗ್‌ಸ ವಿರುದ್ಧ ನಿರಂತರ ಕಾರ್ಯಾಚರಣೆ ಮುಂದುವರೆಯಲಿದೆ ಎಂದು ತಿಳಿಸಿದರು.

# ಮುಮ್ಮಡಿ ನಿರ್ವಾಣ ಮಹಾಸ್ವಾಮೀಜಿಗಳು ಬೆಂಗಳೂರು ದಕ್ಷಿಣ ಜಿಲ್ಲೆಗೆ ದೊಡ್ಡ ದೀಪವಾಗಿದ್ದರು: ಸಿಎಂ

## ಮೌನವೇ ಮಂತ್ರ, ಕಾಯಕವೇ ಪೂಜೆ ಎಂದು ನಂಬಿ ಅವರು ಸಾಧನೆ ಮಾಡಿಕೊಂಡು ಬಂದಿದ್ದರು ಶ್ರೀಮುಮ್ಮಡಿ ನಿರ್ವಾಣ ಸ್ವಾಮೀಜಿ

• ಉದಯವಾಹಿನಿ, ಬೆಂಗಳೂರು

ಪರಮಪೂಜ್ಯರಾದ ಮ.ನಿ.ಪ್ರ.ಸ್ವ. ಡಾ. ಮುಮ್ಮಡಿ ನಿರ್ವಾಣ ಮಹಾಸ್ವಾಮೀಜಿಗಳು ನಮ್ಮ ಬೆಂಗಳೂರು ದಕ್ಷಿಣ ಜಿಲ್ಲೆ ಹಾಗೂ ಸುತ್ತಮುತ್ತಲ ಪ್ರದೇಶಕ್ಕೆ ದೊಡ್ಡ ದೀಪವಾಗಿದ್ದರು ಎಂದು ಸಿಎಂ ಡಿ.ಕೆ. ಶಿವಕುಮಾರ್ ಸ್ಮರಿಸಿದರು. ಬೆಂಗಳೂರು ದಕ್ಷಿಣ ಜಿಲ್ಲೆ ಕನಕಪುರದ ದೇಗುಲ ಮಠದ ಆವರಣದಲ್ಲಿ ಶುಕ್ರವಾರ ನಡೆದ ಲಿಂಗೈಕ್ಯ ಮುಮ್ಮಡಿ ನಿರ್ವಾಣ ಶ್ರೀಗಳ ಪುಣ್ಯ ಸಂಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಗುರುವಿನ ಪಾದಗಳಿಗೆ ಅಣೆ ಇಟ್ಟರೆ ನಮಗೆ ಜ್ಞಾನ ಹೆಚ್ಚುತ್ತದೆ ಎಂದು ಹಿರಿಯರು ಹೇಳಿದ್ದಾರೆ. ಇದು ಕಣ್ಣೀರು ಹಾಕುವ ದಿನವಲ್ಲ. ಶ್ರೀಗಳ ಕಾರ್ಯವನ್ನು ಉಳಿಸಿಕೊಂಡು ಮುಂದುವರಿಸುವ ದಿನ. ಶ್ರೀಗಳು ಇಲ್ಲಿ ಒಂದು ಸೇತುವೆ ಮಾಡಬೇಕು ಎಂದು ಬಹಳಷ್ಟು ಬಾರಿ ಹೇಳಿದ್ದರು. ಇಂದು ಶ್ರೀಗಳ ಚಿಂತನೆಯಂತೆ ಸೇತುವೆ ಉದ್ಘಾಟನೆ ಮಾಡಿರುವುದು ನನ್ನ ಭಾಗ್ಯ. ಶ್ರಿ ಮುಮ್ಮಡಿ ನಿರ್ವಾಣ ಸ್ವಾಮೀಜಿಗಳ ಹೆಸರನ್ನೇ ಈ ಸೇತುವೆಗೆ ನಾಮಕರಣ ಮಾಡಲಾಗಿದೆ. ಮೌನವೇ ಮಂತ್ರ, ಕಾಯಕವೇ ಪೂಜೆ ಎಂದು ನಂಬಿ ಅವರು ಸಾಧನೆ ಮಾಡಿಕೊಂಡು ಬಂದಿದ್ದರು ಎಂದು ತಿಳಿಸಿದರು. ನಮ್ಮ ವೀರಗಂಗಾಧರ ಅಜ್ಜಯ್ಯನವರು



ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ. ನಾಡು ಧರ್ಮ ಸಾಮ್ರಾಜ್ಯವಾಗಲಿ. ಭಕ್ತಿಯ ನೆಲೆ ಬೀಡಾಗಲಿ ಎಂದು ಮಾರ್ಗದರ್ಶನ ನೀಡಿದ್ದಾರೆ. ನನಗೂ ಶಿವನ ಪಾದಕ್ಕೂ ಏನು ಸಂಬಂಧವೋ ಗೊತ್ತಿಲ್ಲ. ನಮ್ಮ ಮನೆಯಲ್ಲಿ ಹಿಂದಿನ ತಲೆಮಾರುಗಳಿಂದ ಯಾರೇ ಹುಟ್ಟಿದರೂ ಕೆಂಪೇಗೌಡ ಎಂದು ಹೆಸರಿಡುವ ಪ್ರವೃತ್ತಿ ಇದೆ.

### ನಾನು ಮುಖ್ಯಮಂತ್ರಿಯಾಗಬೇಕು ಎಂದು ಹರಸಿದ್ದರು

ನಾನು ಕಳೆದ 45 ವರ್ಷಗಳಿಂದ ಇಲ್ಲಿಗೆ ಬಂದಾಗೆಲ್ಲಾ ಎಷ್ಟೇ ಒತ್ತಡ, ಕಷ್ಟವಿದ್ದರೂ ನನ್ನನ್ನು ಕುಟುಂಬದ ಸದಸ್ಯನಂತೆ ನನಗೆ ಆಶೀರ್ವಾದ ಮಾಡಿ ಇಷ್ಟು ದೊಡ್ಡ ಮಟ್ಟಕ್ಕೆ ಬೆಳೆಸಿದ್ದಾರೆ. ನಾನು ಚುನಾವಣೆಯಲ್ಲಿ ಅರ್ಜಿ ಹಾಕುವಾಗ ಅವರು ಹಾಸಿಗೆ ಹಿಡಿದಿದ್ದರು. ಆಗ ಅವರನ್ನು ಭೇಟಿ ಮಾಡಿದಾಗ, ನೀವು ಮುಖ್ಯಮಂತ್ರಿಯಾಗಬೇಕು ಎಂಬುದೇ ನಮ್ಮ ಆಸೆ ಎಂದು ಚುನಾವಣೆಗೆ ಹಣ ಕೊಟ್ಟರು. ನನಗೆ ದೊಡ್ಡ ಜವಾಬ್ದಾರಿ ವಹಿಸಿದ್ದಾರೆ. ಮಠದ ಭಕ್ತನಾಗಿ ಮುಂದೆ ನಡೆಯಬೇಕಾದ ಕಾರ್ಯಗಳ ಹೊರೆಯನ್ನು ನನಗೆ ಹೊರಿಸಿದ್ದಾರೆ. ಮನೆ ಹುಷಾರು, ಮಠ ಹುಷಾರು ಎಂದು ನಮ್ಮ ಹಿರಿಯರು ಹೇಳಿದ್ದಾರೆ. ಅದರಂತೆ ನನ್ನ ಮನೆಯನ್ನು ಕಾಪಾಡಿಕೊಳ್ಳುವಂತೆ ಈ ಮಠವನ್ನು ಕಾಪಾಡಿಕೊಳ್ಳುತ್ತೇನೆ ಎಂದು ಭರವಸೆ ನೀಡುತ್ತೇನೆ ಎಂದು ತಿಳಿಸಿದರು.

ನಮ್ಮ ತಾಯಿ ಶಿವಾಲ್ದಪ್ಪ ಬೆಟ್ಟದ ಶಿವನಿಗೆ ಹರಕೆ ಕಟ್ಟಿಕೊಂಡ ಹಿನ್ನೆಲೆಯಲ್ಲಿ ನನಗೆ ಶಿವಕುಮಾರ್ ಎಂದು ಹೆಸರಿಟ್ಟರು. ಶ್ರೀ ದೇಗುಲ ಮಠದ ಸ್ವಾಮೀಜಿಗಳ ಬಳಿ ಆಶೀರ್ವಾದ ಪಡೆದಿದ್ದರು.

ನಮ್ಮ ಮನೆಯಲ್ಲಿ ಏನೇ ಕೆಲಸವಾಗಬೇಕಾದರೂ ಈ ಮಠಕ್ಕೆ ಬಂದು ಮಾರ್ಗದರ್ಶನ ಪಡೆಯುತ್ತಿದ್ದರು. ನಾನು ಕೂಡ ಧರ್ಮದಿಂದ ಏಳಬೇಕು, ಧರ್ಮದಿಂದ ಬಾಳಬೇಕು, ಧರ್ಮದಿಂದ ಆಳಬೇಕು, ಧರ್ಮದಿಂದ ತಾಳ್ಮೆಯಿಂದರಬೇಕು ಎಂದು ಕೆಲಸ ಮಾಡಿಕೊಂಡು ಬಂದಿದ್ದೇನೆ. ನಾನು ಹೈದರಾಬಾದ್ ಕರ್ನಾಟಕ ವಿದ್ಯಾಸಂಸ್ಥೆಯಲ್ಲಿ ಪಿಯುಸಿ ಓದಿದೆ, ಅಜ್ಜಯ್ಯ ಅವರು ಸ್ಥಾಪಿಸಿರುವ ರೇಣುಕಾಚಾರ್ಯ ಕಾಲೇಜಿನಲ್ಲಿ ಪದವಿ ಓದಿದೆ. ಹೀಗೆ ನನಗೂ ಈ ಸಮಾಜಕ್ಕೂ ದೊಡ್ಡ ಸಂಬಂಧ, ಬಾಂಧವ್ಯ ಇದೆ. ಇದನ್ನು ಉಳಿಸಿಕೊಂಡು ಬೆಳೆಸಿಕೊಂಡು ಹೋಗುತ್ತೇನೆ ಎಂದು ತಿಳಿಸಿದರು. ನಾನು ಅಜ್ಜಯ್ಯನವರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕಾರ ಮಾಡಿದಾಗ ಸಾಕಷ್ಟು ಚರ್ಚೆಯಾಯಿತು. ಅನೇಕ ಗಣ್ಯರು ನನ್ನನ್ನು ವಿವಿಧ ರೀತಿಯಲ್ಲಿ ಕೇಳಿದರು. ನಾನು ಅವರಿಗೆ ಇದು ನನ್ನ ನಂಬಿಕೆ ಎಂದು ಹೇಳಿದೆ. ನಮ್ಮ ಆರಾಧ್ಯ ದೈವ, ನಂಬಿಕೆ, ಮಾರ್ಗದರ್ಶನ ಕೊಟ್ಟವರನ್ನು, ಕಷ್ಟಕಾಲದಲ್ಲಿ ನಿಂತವರನ್ನು ನಾವು ಸ್ಮರಿಸಬೇಕು. ಈ ವಿಚಾರ ನನಗೆ, ಯಡಿಯೂರಪ್ಪನವರಿಗೆ, ಸೋಮಣ್ಣ ಅವರಿಗೆ ಗೊತ್ತು. ಬೇರೆಯವರಿಗೆ ಇದು ಗೊತ್ತಿಲ್ಲ ಎಂದು ತಿಳಿಸಿದರು. ಸ್ವಾಮೀಜಿಗಳು ನನ್ನ ಕೈನಿಂದ ಒಂದು ಪುಸ್ತಕ ಬಿಡುಗಡೆ ಮಾಡಿಸಿದರು.

**ಈ ದಿನದ ದರ** ಪೆಟ್ರೋಲ್: 110.93₹/L | ಡೀಸೆಲ್ : 98.80₹/L | ಬಂಗಾರ: ₹ 14, 700/Gram 24ct ₹13,475/Gram 22ct | ಬೆಳ್ಳಿ: ₹250.00/Gram

# ವಾಟರ್ ಮಾಫಿಯದಲ್ಲಿ ಭಾಗಿ ಕಂದಾಯ ವಸೂಲಿಗಾರ ಶಶಿಕಾಂತ್ ಬೆಳ್ಳೂರು ಅಮಾನತ್ತು ಮಾಡಿ-ವಂದೇ ಮಾತರಂ ಸಮಾಜ ಸೇವಾ ಸಂಸ್ಥೆ ಒತ್ತಾಯ

## ಏಕವಚನದಲ್ಲಿ ಮಾತಾಡುತ್ತಿರುವ ಇವನ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ವಂದೇ ಮಾತರಂ ಸಮಾಜ ಸೇವಾ ಸಂಸ್ಥೆಯ ರಾಜ್ಯಾಧ್ಯಕರಾದ ಸಿ.ಎಂ.ಶಿವಕುಮಾರ್ ನಾಯ್ಕ್ ರವರು ಪಶ್ಚಿಮ ಮಹಾನಗರ ಪಾಲಿಕೆ ಆಯುಕ್ತರಿಗೆ ದೂರು

• ಉದಯವಾಹಿನಿ, ಬೆಂಗಳೂರು

ಶಶಿಕಾಂತ್ ಬೆಳ್ಳೂರ ಕಂದಾಯ ವಸೂಲಿಗಾರರಾಗಿ ವಾರ್ಡ್ -41ರಲ್ಲಿ ಕಾರ್ಯನಿರ್ವಹಿಸುತ್ತಿದ್ದು. ಇವರ ನಿವಾಸ ಕುದುರೆಗೆರೆಯಲ್ಲಿ ಇದ್ದು ಮನೆ ಬಳಕೆ ಮಾಡಲು ಬೋರ್ ವೆಲ್ ಕೊರೆಸಿ, ವಾಣಿಜ್ಯ ಬಳಕೆಗಾಗಿ ಮಾಡುತ್ತಿರುವುದು ಮತ್ತು ರಾಜಕಾರಣಿ , ಸರ್ಕಾರ ಉನ್ನತಧಿಕಾರಿಗಳನ್ನು ಏಕವಚನದಲ್ಲಿ ಮಾತಾಡುತ್ತಿರುವ ಇವನ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ವಂದೇ ಮಾತರಂ ಸಮಾಜ ಸೇವಾ ಸಂಸ್ಥೆಯ ರಾಜ್ಯಾಧ್ಯಕ್ಷರಾದ ಸಿ.ಎಂ.ಶಿವಕುಮಾರ್ ನಾಯ್ಕ್ ರವರು ಪಶ್ಚಿಮ ಮಹಾನಗರ ಪಾಲಿಕೆ ಆಯುಕ್ತರಿಗೆ ದೂರು ಸಲ್ಲಿಸಿದರು. ಸಿ.ಎಂ.ಶಿವಕುಮಾರ್ ನಾಯ್ಕ್ ರವರು ಮಾತನಾಡಿ ಶಶಿಕಾಂತ್



ಉದಯವಾಹಿನಿ ಚಿತ್ರ

ಬೆಳ್ಳೂರು ಪಾಲಿಕೆಯಲ್ಲಿ ಕಂದಾಯ ವಸೂಲಿಗಾರರಾಗಿದ್ದು ರಾಜ್ಯ ಸರ್ಕಾರದ ಅಧೀನ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದಾರೆ ಸರ್ಕಾರ ಕೈ ಕೆಳಗೆ ಕೆಲಸ ಮಾಡುವವರು ಖಾಸಗಿ ಸಂಸ್ಥೆಯ ಕೆಲಸ ಮತ್ತು ಗುತ್ತಿಗೆ ಕೆಲಸ ಇನ್ನಿತರೆ ಲಾಭ ಬರುವ ಕೆಲಸ ಹುದ್ದೆ ನಿರ್ವಹಿಸುವ ಕೆಲಸ ಮಾಡಬಾರದು ಎಂದು ನಿಯಮಾವಳಿ ಇದ್ದರು. ಆದ್ವಿಕ್ ವಾಟರ್ ಸಪ್ಲೈ ಎಂದು ವಾಟರ್ ಸರಬರಾಜು ಖಾಸಗಿ ಸಂಸ್ಥೆ ತೆರದು ಅದರಲ್ಲಿ ವಾಟರ್ ಟ್ಯಾಂಕರ್ ಗಾಡಿ, ಟ್ರಾಕ್ಟರ್ ಮೂಲಕ ಮದುವೆ, ಕಟ್ಟಡ ಕಟ್ಟಲು , ಮನೆಗಳಿಗೆ ಟ್ಯಾಂಕರ್ ಗೆ 800ರೂಪಾಯಿ ಮತ್ತು ಟ್ರಾಕ್ಟರ್ 500ರೂಪಾಯಿ ನಿಗದಿ ಮಾಡಿ ಮಾರಾಟ ಮಾಡುತ್ತಿದ್ದಾರೆ.

ಸರ್ಕಾರಿ ಹುದ್ದೆಯಲ್ಲಿ ಇದ್ದು ನೀರು ಮಾರಾಟ ಮಾಡುತ್ತಿದ್ದಾನೆ.

ಸರ್ಕಾರಿ ನೌಕರರ ಖಾಸಗಿ ನೀರು ಮಾರಾಟ ಮಾಡುವುದು ತಪ್ಪು ಮತ್ತು ಮನೆ ಬಳಕೆ ಮಾಡುವ ಬೋರ್‌ವೇಲ್ ಅನ್ನು ವಾಣಿಜ್ಯ ಉದ್ದೇಶಕ್ಕೆ ನೀರು ಬಳಕೆ ಮಾಡಿರುವುದು . ಇವನು ಹತ್ತಿರ ಯಾರೇ ಮಾತನಾಡಿದರು ನಾನು ಅವರು ಗೊತ್ತು ನನ್ನನ ಏನು ಮಾಡಲು ಸಾಧ್ಯವಿಲ್ಲ ಎಂದು ಹೇಳುತ್ತಾನೆ ಹಾಗೂ ಮಾಜಿ ಸಂಸದರು, ಬಮೂಲ್ ಅಧ್ಯಕ್ಷರಾದ ಡಿ.ಕೆ.ಸುರೇಶ್ ಮತ್ತು ಪಶ್ಚಿಮ ವಲಯ ಆಯುಕ್ತರಾದ ಕೆ.ವಿ.ರಾಜೇಂದ್ರನ್‌ರವರ ಕುರಿತು ಏಕವಚನದಲ್ಲಿ ಮಾತನಾಡುತ್ತಾನೆ ಹಾಗೂ ಕೆಲಸ ಸಮಯದಲ್ಲಿ ವಾಟರ್ ಟ್ಯಾಂಕರ್ ಓಡಿಸುವುದರಲ್ಲಿ ಕಾರ್ಯನಿರ್ವಹಿಸುತ್ತಿದ್ದಾನೆ. ಸರ್ಕಾರಿ ಹುದ್ದೆಯಲ್ಲಿ ಇದ್ದು ನೀರು ಮಾರಾಟ ಇವನ ಮೇಲೆ ಗುರುತರ ಅಪಾದನೆಗಳು ಇರುವ ಶಶಕಾಂತ್ ಬೆಳ್ಳೂರು ಅವರನ್ನು ಅಮಾನತ್ತು ಮಾಡಬೇಕು ಹಾಗೂ ವಾಟರ್ ಮಾಫಿಯದಲ್ಲಿ ತೊಡಗಿರುವ ಇವನ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಬೇಕು ಎಂದು ನಮ್ಮ ಮನವಿ ಎಂದು ಹೇಳಿದರು.

## ಗುರುರಾಯರ ಸನ್ನಿಧಿಯಲ್ಲಿ ಭವಾನಿಯವರ ಗಾಯನ ಸೇವೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಜಯನಗರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಗುರುವಾರ ಸಂಜೆ ಏರ್ಪಡಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಶ್ರೀಮತಿ ಭವಾನಿ ಎಂ. ರಾವ್ ಅವರು ಅಪರೋಕ್ಷ ಜ್ಞಾನಿಗಳಿಂದ ರಚಿಸಲ್ಪಟ್ಟ ಹಲವಾರು ಅಪರೂಪದ ಹರಿದಾಸರ ಪದಗಳನ್ನು ತಾರತಮ್ಯೋಕ್ತವಾಗಿ ಮತ್ತು ಸುಶ್ರಾವ್ಯವಾಗಿ ಪ್ರಸ್ತುತಪಡಿಸಿದರು. ಇವರ ಗಾಯನಕ್ಕೆ ಪಿಟೀಲು ವಾದನದಲ್ಲಿ ವಿದ್ವಾನ್ ಶ್ರೀ ಎಸ್. ಶಶಿಧರ್ ಮತ್ತು ಮೃದಂಗ ವಾದನದಲ್ಲಿ ವಿದ್ವಾನ್ ಶ್ರೀ ಮುರಳಿ ನಾರಾಯಣರಾವ್ ಸಹಕರಿಸಿದರು.

ಈ ಕಾರ್ಯಕ್ರಮವು ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ನೆರವೇರಿತು.

## ಜಿಬಿಎ ವಾರ್ಡ್‌ಗಳಲ್ಲಿ ಸಮಾನಾಂತರ ಎಸ್‌ಐಆರ್ ನಿಲ್ಲಿಸಬೇಕು: ಚುನಾವಣಾ ಆಯೋಗ ಮಧ್ಯಪ್ರವೇಶಿಸಲಿ: ಶೋಭಾ ಕರಂದ್ಲಾಜೆ




ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಜಿಬಿಎ ವ್ಯಾಪ್ತಿಯಲ್ಲಿನ 27 ವಾರ್ಡ್‌ಗಳಲ್ಲಿ ರಾಜ್ಯ ಚುನಾವಣಾ ಆಯೋಗ ನಡೆಸುತ್ತಿರುವ ಸಮಾನಾಂತರ ಎಸ್‌ಐಆರ್ ಅನ್ನು ತಕ್ಷಣ ನಿಲ್ಲಿಸಬೇಕು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹಿಸಿದ್ದಾರೆ.

ಮಲ್ಲೇಶ್ವರದ ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈಗಾಗಲೇ ಕೇಂದ್ರ ಚುನಾವಣಾ ಆಯೋಗ ರಾಜ್ಯಾದ್ಯಂತ ಎಸ್‌ಐಆರ್ ನಡೆಸುತ್ತಿದೆ. ಇದರ ನಡುವೆ ಜಿಬಿಎ ವಾರ್ಡ್‌ಗಳಲ್ಲಿ ರಾಜ್ಯ ಚುನಾವಣಾ ಆಯೋಗ ಮತ್ತೊಂದು ಎಸ್‌ಐಆರ್ ನಡೆಸುತ್ತಿದೆ. ಇದು ಮತದಾರರನ್ನು ಗೊಂದಲಕ್ಕೀಡು ಮಾಡಿದೆ ಎಂದು ಹೇಳಿದರು.

ರಾಹುಲ್ ಗಾಂಧಿ ಅವರನ್ನು ತೃಪ್ತಿಪಡಿಸಲು ರಾಜ್ಯದ ಕಾಂಗ್ರೆಸ್ ಸರ್ಕಾರ ಇಂತಹ ಕೆಲಸ ಮಾಡುತ್ತಿದೆ. 20 ವರ್ಷಗಳ ನಂತರ ಈ ಎಸ್‌ಐಆರ್ ನಡೆಯುತ್ತಿದ್ದು, ದೇಶದಲ್ಲಿ ಅಕ್ರಮ ಮತದಾರನ್ನು ಗುರುತಿಸಲು, ಮೃತಪಟ್ಟವರ ಹೆಸರು ತೆಗೆಯಲು ಮತ್ತು ಇತರ ಹಲವಾರು ಕಾರಣಗಳಿಂದ ಎಸ್‌ಐಆರ್ ನಡೆಯುತ್ತಿದೆ. ನಗರ ಪ್ರದೇಶಗಳಲ್ಲಿ ಮತದಾರರ ಹೆಸರು ಎರಡು ಕಡೆ ಇರುತ್ತದೆ. ಕೆಲವರು ಬೇರೆ ಕಡೆ ನೆಲೆಸಿರುತ್ತಾರೆ. ಹಳ್ಳಿಗೆ ಹೋಗಿರುತ್ತಾರೆ. ಆದರೆ, ಅವರ ಹೆಸರು ಮತಪಟ್ಟಿಯಲ್ಲಿ ಇರುತ್ತದೆ. ಲೆಕ್ಕಕ್ಕೆ ಇವರು ಇರುತ್ತಾರೆ. ಆದರೆ, ಮತ ಚಲಾಯಿಸುವುದಿಲ್ಲ. ಇದರಿಂದ ಶೇಕಡಾ ಮತದಾನ ಕಡಿಮೆಯಾಗುತ್ತದೆ. ಇದನ್ನೆಲ್ಲ ತಪ್ಪಿಸಲು ಎಸ್‌ಐಆರ್ ನಡೆಸಲಾಗುತ್ತಿದೆ ಎಂದು ವಿವರಿಸಿದರು.

**ಅಕ್ರಮ ಮತಪಟ್ಟಿ ಸಿದ್ಧತೆ:** ರಾಜ್ಯದಲ್ಲಿ ಅಕ್ರಮ ಮತದಾರರ ಪಟ್ಟಿಯನ್ನು ತಯಾರು ಮಾಡಲು ಸರ್ಕಾರ ಹೊರಟಿದೆ. ಸಿಎಂ ಮೂಗಿನ ನೇರದಲ್ಲಿ ಅಧಿಕಾರಿಗಳು ಅಕ್ರಮವಾಗಿ ಮತದಾರರನ್ನು ಸೇರಿಸುತ್ತಿದ್ದಾರೆ.

## ಆರತಿ ಕೃಷ್ಣಗೆ ಅನಿವಾಸಿ ಸಚಿವೆ ಪಟ್ಟನೀಡಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಡಿಕೆ ಶಿವಕುಮಾರ್ ಅಧಿಕಾರ ವಹಿಸಿಕೊಂಡು ಶುಕ್ರವಾರಕ್ಕೆ ಒಂದು ತಿಂಗಳು ಭರ್ತಿಯಾಗಲಿದೆ. ಸಂಪುಟ ವಿಸ್ತರಣೆ ಕುರಿತು ಹೈಕಮಾಂಡ್ ಸ್ಪಷ್ಟನೆ ನೀಡದಿದ್ದರೂ, ರಾಜ್ಯ ಕಾಂಗ್ರೆಸ್‌ನಲ್ಲಿ ಒತ್ತಡ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಈ ನಡುವೆ ರಾಜ್ಯ ಸಚಿವ ಸಂಪುಟಕ್ಕೆ ಆರತಿ ಕೃಷ್ಣರನ್ನು ಅನಿವಾಸ ಭಾರತೀಯರ ಇಲಾಖೆ ಸಚಿವೆಯನ್ನಾಗಿ ನೇಮಿಸಬೇಕೆಂಬ ಒತ್ತಡ ಅನಿವಾಸಿ ಭಾರತೀಯರಿಂದ ಶುರುವಾಗಿದೆ.ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಬಳಿಕ ನಡೆದ ಸಚಿವ ಸಂಪುಟ ಸಭೆಯಲ್ಲಿ, ಅನಿವಾಸಿ ಭಾರತೀಯಗಾಗಿಯೇ ಪ್ರತ್ಯೇಕ ಸಚಿವಾಲಯ ಆರಂಭಿಸುವುದಾಗಿ ಘೋಷಿಸಿದ್ದರು. ಈ ಇಲಾಖೆ ಎನ್‌ಆರ್‌ಐ ಹಾಗೂ ರಾಜ್ಯ ಸರಕಾರದ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸಲಿದೆ ಎನ್ನುವ ಮಾತುಗಳನ್ನು ಹೇಳಿದ್ದರು. ಮುಂದಿನ ದಿನದಲ್ಲಿ ವಿದೇಶದಲ್ಲಿರುವ ಕನ್ನಡಿಗರಿಗೆ ಅಗತ್ಯ ನೆರವು ನೀಡುವುದು, ವಿದೇಶಕ್ಕೆ ಕೆಲಸ, ವಿದ್ಯಾಭ್ಯಾಸಕ್ಕೆಂದು ಹೋಗುವವರಿಗೆ ಅಗತ್ಯ ಸಹಕಾರ ನೀಡುವುದರೊಂದಿಗೆ, ವಿದೇಶದಲ್ಲಿ ನೆಲೆಸಿರುವ ಅನಿವಾಸಿ ಕನ್ನಡಿಗರಿಂದ ಹೂಡಿಕೆಯನ್ನು ಮಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲು ಈ ಇಲಾಖೆ ಒತ್ತು ನೀಡಲಿದೆ ಎನ್ನಲಾಗಿತ್ತು.

## ಶೀಘ್ರವೇ ಬರ ಪರಿಹಾರ ಕ್ರಮ ಕೈಗೊಳ್ಳಿ: ಸರ್ಕಾರಕ್ಕೆ ವಿಪಕ್ಷ ನಾಯಕ ಆರ್.ಅಶೋಕ್ ಆಗ್ರಹ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ರಾಜ್ಯದಲ್ಲಿನ ಬರ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಜನರಿಗೆ ಪರಿಹಾರ ಒದಗಿಸಲು ರಾಜ್ಯ ಸರ್ಕಾರ ತಕ್ಷಣ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಒತ್ತಾಯಿಸಿದರು.

ಈ ಸಂಬಂಧ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದಿದ್ದು, ರಾಜ್ಯದ ಹಲವು ಭಾಗಗಳಲ್ಲಿ ರೈತರು, ಕೃಷಿ ಕಾರ್ಮಿಕರು ಮತ್ತು ಗ್ರಾಮೀಣ ಜನರು ತೀವ್ರ ಸಂಕಷ್ಟಗಳನ್ನು ಎದುರಿಸುತ್ತಿದ್ದಾರೆ ಎಂದು ಅಶೋಕ ಹೇಳಿದ್ದಾರೆ.

ಬಿತ್ತನೆ ಚಟುವಟಿಕೆಗಳು ವಿಳಂಬವಾಗಿದ್ದು, ಬೆಳೆಗಳು ಒಣಗುವ ಅಪಾಯದಲ್ಲಿದೆ. ಜಲಾಶಯದ ನೀರಿನ ಮಟ್ಟ ನಿರಂತರವಾಗಿ ಕುಸಿಯುತ್ತಿದೆ, ಮುಂಬರುವ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳು ತೀವ್ರವಾಗಬಹುದು ಎಂಬ ಗಂಭೀರ ಕಳವಳ ವ್ಯಕ್ತಪಡಿಸಿದ್ದಾರೆ. 150 ಕ್ಕೂ ಹೆಚ್ಚು ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿ ಉಂಟಾಗಿದ್ದು, ಹಲವಾರು ಪ್ರದೇಶಗಳಲ್ಲಿ ಸಾಮಾನ್ಯಕ್ಕಿಂತ ಕಡಿಮೆ ಮಳೆಯಾಗಿದೆ ಎಂದು ಅಶೋಕ್ ಹೇಳಿದ್ದಾರೆ.

# ಸಚಿವ ಪ್ರಿಯಾಂಕ್ ಖರ್ಗೆ ಆಕ್ಷೇಪ ಅರ್ಜಿ ತಳ್ಳಿಹಾಕಿದ ಸ್ಪೆಷಲ್ ಕೋರ್ಟ್

## ಆರ್‌ಎಸ್‌ಎಸ್ ಸ್ವಯಂಸೇವಕರ ಚಟುವಟಿಕೆಗಳನ್ನು ಗುರಿಯಾಗಿಸಿಕೊಂಡಿದ್ದಾರೆ ಎನ್ನಲಾದ ಆರೋಪವೇ?

• ಉದಯವಾಹಿನಿ, ಬೆಂಗಳೂರು

ರಾಷ್ಟ್ರೀಯ ಸ್ವಯಂಸೇವಕ ಸಂಘ ನೋಂದಾಯಿತ ಸಂಘಟನೆಯಲ್ಲ ಮತ್ತು ಅದರ ಸದಸ್ಯತ್ವದ ಅಧಿಕೃತ ದಾಖಲೆಗಳಿಲ್ಲದ ಕಾರಣ, ಅದರ ಸದಸ್ಯರು ಕ್ರಿಮಿನಲ್ ಮಾನನಷ್ಟ ಮೊಕದ್ದಮೆ ದಾಖಲಿಸಲು ಅರ್ಹರಲ್ಲ ಎಂಬ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ವಾದವನ್ನು ಬೆಂಗಳೂರಿನ ವಿಶೇಷ ನ್ಯಾಯಾಲಯ ತಳ್ಳಿಹಾಕಿದೆ. ಇದರಿಂದ ಸಚಿವರಿಗೆ ಕಾನೂನು ಹೋರಾಟದಲ್ಲಿ ಹಿನ್ನಡೆಯಾಗಿದೆ.

ಆರ್‌ಎಸ್‌ಎಸ್ ಸ್ವಯಂಸೇವಕರೊಬ್ಬರು ದಾಖಲಿಸಿದ್ದ ಕ್ರಿಮಿನಲ್ ಮಾನನಷ್ಟ ದೂರನ್ನು ಪರಿಗಣಿಸಿದ ವಿಶೇಷ ನ್ಯಾಯಾಧೀಶ ಸಂದೀಪ್ ಪಾಟೀಲ್, ಈ ವಾದವನ್ನು ಸಂಪೂರ್ಣವಾಗಿ ಸಮರ್ಥನಾರ್ಹವಲ್ಲ ಹಾಗೂ ಯಾವುದೇ ತಾತ್ವಿಕ ಆಧಾರವಿಲ್ಲದ್ದು ಎಂದು ಅಭಿಪ್ರಾಯಪಟ್ಟಿದ್ದಾರೆ.

ಜೂನ್ 27ರಂದು ನೀಡಿದ ಆದೇಶದಲ್ಲಿ, ನ್ಯಾಯಾಲಯವು ಭಾರತೀಯ ನ್ಯಾಯ ಸಂಹಿತೆ ಕಲಂ 356ರಡಿ ಪ್ರಿಯಾಂಕ್ ಖರ್ಗೆ ಹಾಗೂ ಕಾಂಗ್ರೆಸ್ ನಾಯಕ ಮೊಹಮ್ಮದ್ ಹ್ಯಾರಿಸ್ ನಲಪಾಡ್ ವಿರುದ್ಧದ ಆರೋಪವನ್ನು ಪರಿಗಣಿಸಿ, ಜುಲೈ 21ರಂದು ಹಾಜರಾಗುವಂತೆ ಸಮನ್ಸ್ ಜಾರಿಗೊಳಿಸಿದೆ.

ಆದರೆ, ಮಾಜಿ ಸಚಿವ ದಿನೇಶ್ ಗುಂಡೂರಾವ್ ವಿರುದ್ಧ ದಾಖಲಿಸಿದ್ದ ದೂರಿಗೆ ಸಂಬಂಧಿಸಿದಂತೆ ದಾಖಲೆಗಳು ಸಾಕಷ್ಟು ಆಧಾರ ಒದಗಿಸದ ಕಾರಣ, ಅವರ ವಿರುದ್ಧದ ಪ್ರಕ್ರಿಯೆಯನ್ನು ಕೈಬಿಡಲಾಗಿದೆ. ಆರ್‌ಎಸ್‌ಎಸ್ ನೋಂದಾಯಿತ ಸಂಸ್ಥೆಯಲ್ಲ ಮತ್ತು ಅದರ ಸದಸ್ಯತ್ವದ ಅಧಿಕೃತ ದಾಖಲೆಗಳಿಲ್ಲದಿರುವುದರಿಂದ, ಅದರ ಪರವಾಗಿ ಯಾವುದೇ ವ್ಯಕ್ತಿ ಕ್ರಿಮಿನಲ್ ಮಾನನಷ್ಟ ದೂರು ದಾಖಲಿಸಲು ಕಾನೂನುಬದ್ಧ ಹಕ್ಕು ಹೊಂದಿಲ್ಲ ಎಂದು ವಾದಿಸಿದ್ದರು.

ಈ ವಾದವನ್ನು ತಳ್ಳಿಹಾಕಿದ ನ್ಯಾಯಾಲಯ, ಆರೋಪಿಗಳು ಒಂದೆಡೆ ಆರ್ ಎಸ್‌ಎಸ್ ಹಾಗೂ ಅದರ ಸದಸ್ಯರ ಅಸ್ತಿತ್ವವನ್ನು ಒಪ್ಪಿಕೊಂಡು ತಮ್ಮ ಹೇಳಿಕೆಗಳನ್ನು ಸಮರ್ಥಿಸಿಕೊಳ್ಳಲು ಪ್ರಯತ್ನಿಸುತ್ತಾರೆ. ಮತ್ತೊಂದೆಡೆ, ದೂರು ವಿಚಾರಣೆಗೆ ಬಾರದಂತೆ ಮಾಡಲು ಅಂತಹ ಸದಸ್ಯರ ಅಸ್ತಿತ್ವವನ್ನೇ ನಿರಾಕರಿಸುತ್ತಾರೆ ಎಂದು ಹೇಳಿದೆ.

ಆರೋಪಿಗಳಿಗೆ ಒಂದೇ ವೇಳೆ ಪರಸ್ಪರ ವಿರುದ್ಧವಾದ ನಿಲುವುಗಳನ್ನು ತೆಗೆದುಕೊಳ್ಳಲು ಅವಕಾಶ ನೀಡಲಾಗುವುದಿಲ್ಲ. ಒಂದು ಕಡೆ ಅವರು ತಮ್ಮ ಹೇಳಿಕೆಗಳನ್ನು ಸಮರ್ಥಿಸಿಕೊಳ್ಳಲು ಆರ್‌ಎಸ್‌ಎಸ್ ಹಾಗೂ ಅದರ ಸದಸ್ಯರನ್ನು ಉಲ್ಲೇಖಿಸುತ್ತಾರೆ. ಇನ್ನೊಂದು ಕಡೆ, ದೂರು ವಿಚಾರಣೆಗೆ ಬಾರದಂತೆ ಮಾಡಲು ಅಂತಹ ಸದಸ್ಯರ ಅಸ್ತಿತ್ವವನ್ನೇ ನಿರಾಕರಿಸುತ್ತಾರೆ ಎಂದು ನ್ಯಾಯಾಲಯ ಹೇಳಿದೆ.

ಆರ್‌ಎಸ್‌ಎಸ್ ಸ್ವಯಂಸೇವಕರ ಚಟುವಟಿಕೆಗಳನ್ನು ಗುರಿಯಾಗಿಸಿಕೊಂಡಿದ್ದಾರೆ ಎನ್ನಲಾದ ಆರೋಪವೇ, ಸಂಘಟನೆಯೊಂದಿಗೆ ಗುರುತಿಸಬಹುದಾದ ವ್ಯಕ್ತಿಗಳು ಇದ್ದಾರೆ ಎಂಬುದನ್ನು ತೋರಿಸುತ್ತದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಇಂತಹ ವ್ಯಕ್ತಿಗಳು ಮತ್ತು ಅವರ ಸಾಮೂಹಿಕ ಚಟುವಟಿಕೆಗಳನ್ನು ಗುರಿಯಾಗಿಸಿಕೊಂಡಿರುವ ಆರೋಪಿಗಳು, ಈಗ ಯಾವುದೇ ಸದಸ್ಯರೇ ಇಲ್ಲ, ಹೀಗಾಗಿ ಯಾರೂ ದೂರು ಸಲ್ಲಿಸಲು ಸಾಧ್ಯವಿಲ್ಲ ಎಂದು ವಾದಿಸಲು ಸಾಧ್ಯವಿಲ್ಲ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.



ಉದಯವಾಹಿನಿ ಚಿತ್ರ

**1** ವಾಸ್ತವಾಂಶಗಳ ಕುರಿತು ಅಂತಿಮ ತೀರ್ಮಾನ
**2** ಆರ್‌ಎಸ್‌ಎಸ್ ನೋಂದಾಯಿತ ಸಂಸ್ಥೆಯಲ್ಲ
**3** ದೂರನ್ನು ಪರಿಗಣಿಸಿದ ವಿಶೇಷ ನ್ಯಾಯಾಧೀಶ

ಭಾರತೀಯ ನ್ಯಾಯ ಸಂಹಿತೆ ಕಲಂ 2(26)ನ್ನು ಉಲ್ಲೇಖಿಸಿದ ನ್ಯಾಯಾಲಯ, ವ್ಯಕ್ತಿ ಎಂಬ ಪದವು ನೋಂದಾಯಿತವಾಗಿರಲಿ ಅಥವಾ ನೋಂದಾಯಿತವಾಗಿರದಿರಲಿ ಯಾವುದೇ ಕಂಪನಿ, ಸಂಘ ಅಥವಾ ವ್ಯಕ್ತಿಗಳ ಸಮೂಹವನ್ನು ಒಳಗೊಂಡಿರುತ್ತದೆ ಎಂದು ಹೇಳಿದೆ.

ಕಾನೂನಿನಡಿ ವ್ಯಕ್ತಿಗಳ ಸಮೂಹವನ್ನು ಗುರುತಿಸಲು ಅಧಿಕೃತ ನೋಂದಣಿ, ಸದಸ್ಯತ್ವ ಅಥವಾ ದಾಖಲಾತಿಗಳ ಪುರಾವೆ ಕಡ್ಡಾಯವಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಇಂತಹ ಷರತ್ತುಗಳನ್ನು ಕಾನೂನಿನಲ್ಲಿ ಸೇರಿಸುವುದು ಎಂದರೆ, ವಿಧಾನಮಂಡಲವು ಉದ್ದೇಶಪೂರ್ವಕವಾಗಿ ಸೇರಿಸದ ಪದಗಳನ್ನು ನ್ಯಾಯಾಲಯವೇ ಸೇರಿಸಿದಂತಾಗುತ್ತದೆ ಎಂದು ನ್ಯಾಯಾಲಯ

> ಕೇರಳ ಹೈಕೋರ್ಟ್‌ನ ತೀರ್ಪು ಹಾಗೂ ಅದನ್ನು ಸುಪ್ರೀಂ ಕೋರ್ಟ್ ದೃಢಪಡಿಸಿರುವುದನ್ನು ಉಲ್ಲೇಖಿಸಿದ ನ್ಯಾಯಾಲಯ, ಆರ್‌ಎಸ್‌ಎಸ್ ನಿರ್ದಿಷ್ಟ, ಗುರುತಿಸಬಹುದಾದ ವ್ಯಕ್ತಿಗಳ ಸಮೂಹ ಎಂದು ಪರಿಗಣಿಸಬಹುದಾಗಿದೆ ಎಂದು ತಿಳಿಸಿದೆ. -ನ್ಯಾಯಾಧೀಶ ಸಂದೀಪ್ ಪಾಟೀಲ್

> ತಾವು ಆರ್‌ಎಸ್‌ಎಸ್ ಸ್ವಯಂಸೇವಕ ಎಂದು ದೂರುದಾರರು ಹೇಳಿರುವುದು ಸಾಕಷ್ಟು ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಸದಸ್ಯತ್ವ, ದಾಖಲೆಗಳ ಪುರಾವೆ, ಮಾನಹಾನಿಯ ಪ್ರಮಾಣ ಹಾಗೂ ಆರೋಪಿಗಳ ಉದ್ದೇಶದಂತಹ ವಿಷಯಗಳು ವಿಚಾರಣೆಯ ವೇಳೆ ಸಾಕ್ಷ್ಯಾಧಾರಗಳ ಆಧಾರದ ಮೇಲೆ ನಿರ್ಧರಿಸಬೇಕಾದ ಸಂಗತಿಗಳಾಗಿವೆ ಎಂದು ತಿಳಿಸಿದೆ.

> ಪ್ರಕರಣದ ಈ ಆರಂಭಿಕ ಹಂತದಲ್ಲಿ ವಿವಾದಿತ ವಾಸ್ತವಾಂಶಗಳ ಕುರಿತು ಅಂತಿಮ ತೀರ್ಮಾನ ಕೈಗೊಳ್ಳುವ ಅಗತ್ಯವಿಲ್ಲ. ಎಲ್ಲಾ ಪ್ರಶ್ನೆಗಳನ್ನೂ ವಿಚಾರಣೆಯ ವೇಳೆ ಸಾಕ್ಷ್ಯಾಧಾರಗಳ ಆಧಾರದ ಮೇಲೆ ನಿರ್ಧರಿಸಲಾಗುವುದು ಎಂದು ವಿಶೇಷ ನ್ಯಾಯಾಲಯ ಸ್ಪಷ್ಟಪಡಿಸಿದೆ. -ನ್ಯಾಯಾಧೀಶ ಸಂದೀಪ್ ಪಾಟೀಲ್

### ರಾಜ್ಯದಲ್ಲಿ 7,925 ಪೊಲೀಸ್ ಹುದ್ದೆಗಳ ನೇಮಕಾತಿ

ರಾಜ್ಯ ಪೊಲೀಸ್ ಇಲಾಖೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ 2026-27ನೇ ಸಾಲಿನಲ್ಲಿ 7,925 ಪೊಲೀಸ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ನೇಮಕಾತಿ ಪ್ರಕ್ರಿಯೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮೂಲಕ ಅತ್ಯಂತ ಪಾರದರ್ಶಕವಾಗಿ ನಡೆಸಲಾಗುತ್ತಿದೆ ಎಂದು ಅವರು ಹೇಳಿದರು.

ಒಟ್ಟು ಹುದ್ದೆಗಳ ಪೈಕಿ 1,639 ಹುದ್ದೆಗಳನ್ನು ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಲಾಗಿದ್ದು, ಉಳಿದ ಹುದ್ದೆಗಳು ರಾಜ್ಯದ ಇತರೆ ಭಾಗಗಳಿಗೆ ಮೀಸಲಾಗಿದೆ. ಈ ನೇಮಕಾತಿಯಲ್ಲಿ ಡಿಟೆಕ್ಟಿವ್ ಸಬ್-ಇನ್‌ಸ್ಪೆಕ್ಟರ್, ಸಶಸ್ತ್ರ ಪೊಲೀಸ್ ಕಾನ್‌ಸ್ಟೆಬಲ್, ನಾಗರಿಕ ಪೊಲೀಸ್ ಕಾನ್‌ಸ್ಟೆಬಲ್, ವಿಶೇಷ ಮೀಸಲು ಪೊಲೀಸ್ (ಸಿಎಆರ್) ಕಾನ್ ಸ್ಟೆಬಲ್, ವಿಶೇಷ ಮೀಸಲು ಪೊಲೀಸ್ (ನಾಗರಿಕ) ಕಾನ್‌ಸ್ಟೆಬಲ್ ಹಾಗೂ ಪೊಲೀಸ್ ಕಾನ್‌ಸ್ಟೆಬಲ್ ಹುದ್ದೆಗಳು ಒಳಗೊಂಡಿವೆ. ಈ ನೇಮಕಾತಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ವಿಶೇಷ ಆದ್ಯತೆ ನೀಡಲಾಗಿದೆ ಎಂದು ಗೃಹ ಸಚಿವರು ತಿಳಿಸಿದರು.

ನಾಗರಿಕ ಹಾಗೂ ಸಶಸ್ತ್ರ ಪೊಲೀಸ್ ಕಾನ್‌ಸ್ಟೆಬಲ್ ಹುದ್ದೆಗಳಿಗೆ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳು ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸುವಂತೆ ಪ್ರಿಯಾಂಕ್ ಖರ್ಗೆ ಮನವಿ ಮಾಡಿದರು. ಇದೇ ವೇಳೆ, ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 10 ಹೊಸ ಪೊಲೀಸ್ ಠಾಣೆಗಳ ಕಟ್ಟಡ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ ಎಂದು ಅವರು ಹೇಳಿದರು.

## ಕಾರ್ಮಿಕರ ಕನಿಷ್ಠ ವೇತನ ಪರಿಷ್ಕರಣೆ ಮಾಡಿ ರಾಜ್ಯ ಸರ್ಕಾರ ಹೊರಡಿಸಿದ್ದ ಅಧಿಸೂಚನೆ

• ಉದಯವಾಹಿನಿ, ಬೆಂಗಳೂರ

ರಾಜ್ಯದ 81 ಅನುಸೂಚಿತ ಉದ್ದಿಮೆಗಳ ಕಾರ್ಮಿಕರ ಕನಿಷ್ಠ ವೇತನ ಪರಿಷ್ಕರಿಸಿ ರಾಜ್ಯ ಸರ್ಕಾರ ಹೊರಡಿಸಿರುವ ಅಂತಿಮ ಅಧಿಸೂಚನೆಯನ್ನು ಪ್ರಶ್ನಿಸಿ, ಕರ್ನಾಟಕ ಉದ್ಯೋಗದಾತರ ಸಂಘ (ಕೆಇಎ) ಮತ್ತು ಎಥೀರಿಯಲ್ ಮಷೀನ್ಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಗಳು ಸಲ್ಲಿಸಿರುವ ಅರ್ಜಿಯ ಸಂಬಂಧ ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿ ವಿಚಾರಣೆ ಮುಂದೂಡಿದೆ. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಜ್ಯೋತಿ ಮೂಲಿಮನಿ ಅವರಿದ್ದ ನ್ಯಾಯಪೀಠ, ಕೆಇಎ ಸಲ್ಲಿಸಿರುವ ಅರ್ಜಿಯನ್ನು ಮುಖ್ಯ ಅರ್ಜಿಯನ್ನಾಗಿ ಪರಿಗಣಿಸಿ, ಈ ಸಂಬಂಧ ಸಲ್ಲಿಕೆಯಾಗಿರುವ 15ಕ್ಕೂ ಹೆಚ್ಚು ಅರ್ಜಿಗಳನ್ನು ಕನೆಕ್ಟ್ ಮಾಡಿ ವಿಚಾರಣೆ ನಡೆಸುವುದಾಗಿ ತಿಳಿಸಿದ ಪೀಠ, ರಾಜ್ಯ ಸರ್ಕಾರ, ಕಾರ್ಮಿಕ ಇಲಾಖೆಗೆ ನೋಟಿಸ್ ಜಾರಿ ಮಾಡಿ ವಿಚಾರಣೆಯನ್ನು ಮುಂದೂಡಿತು.

ರಾಜ್ಯ ಕಾರ್ಮಿಕ ಇಲಾಖೆ 2025ರ ಏಪ್ರಿಲ್ 11ರಂದು ಕರಡು ಅಧಿಸೂಚನೆ ಹೊರಡಿಸಿ, ರಾಜ್ಯದ ಒಟ್ಟು 84 ಉದ್ದಿಮೆಗಳಿಗೆ ಏಕರೂಪದ ಕನಿಷ್ಠ ವೇತನ ನಿಗದಿಪಡಿಸಲು ಪ್ರಸ್ತಾಪಿಸಿತ್ತು.

ಇದನ್ನು ಪ್ರಶ್ನಿಸಿ ಉದ್ಯೋಗದಾತರ ಸಂಘಟನೆಗಳು ಈ ಹಿಂದೆ ಹೈಕೋರ್ಟ್‌ನಲ್ಲಿ ಅರ್ಜಿಗಳು ಸಲ್ಲಿಸಿದ್ದವು. ಆ ಅರ್ಜಿಗಳ ವಿಚಾರಣೆ ನಡೆಸಿದ್ದ ಹೈಕೋರ್ಟ್, ಕನಿಷ್ಠ ವೇತನ ಸಲಹಾ ಮಂಡಳಿಯ ಸಭೆಯಲ್ಲಿ ಯಾವುದೇ ತೀರ್ಮಾನ ಕೈಗೊಂಡರೂ, ನ್ಯಾಯಾಲಯದ ಅಂತಿಮ




ಉದಯವಾಹಿನಿ ಚಿತ್ರ

ಆದೇಶದವರೆಗೆ ಅನುಷ್ಠಾನಗೊಳಿಸಬಾರದು ಎಂದು 2025ರ ಜೂನ್ ಮತ್ತು ಜುಲೈ ತಿಂಗಳುಗಳಲ್ಲಿ ಸ್ಪಷ್ಟ ಮಧ್ಯಂತರ ಆದೇಶ ನೀಡಿತ್ತು. ಅದರ ಹೊರತಾಗಿಯೂ ರಾಜ್ಯ ಸರ್ಕಾರ ಅಂತಿಮ ಆದೇಶ ಹೊರಡಿಸಿದೆ.

ನ್ಯಾಯಾಲಯದ ಮಧ್ಯಂತರ ಆದೇಶದ ಹೊರತಾಗಿಯೂ, ನ್ಯಾಯಾಲಯದಿಂದ ಅನುಮತಿ ಪಡೆಯದೇ ರಾಜ್ಯ ಸರ್ಕಾರ ಅಂತಿಮ ಅಧಿಸೂಚನೆ ಹೊರಡಿಸಿರುವುದು ನ್ಯಾಯಾಂಗ ನಿಂದನೆ ಮತ್ತು ಕಾನೂನು ಬಾಹಿರ ಕ್ರಮ ಎಂದು ಅರ್ಜಿಯಲ್ಲಿ ವಿವರಿಸಲಾಗಿದೆ.

ಸಾಮಾನ್ಯವಾಗಿ ಪ್ರತಿ ಐದು ವರ್ಷಗಳಿಗೊಮ್ಮೆ ನಡೆಯುವ ಕನಿಷ್ಠ ವೇತನ ಪರಿಷ್ಕರಣೆ ಶೇ.10 ರಿಂದ 15 ರಷ್ಟಿರುತ್ತಿತ್ತು. ವರ್ಷಕ್ಕೊಮ್ಮೆ ಗ್ರಾಹಕ ಬೆಲೆ ಸೂಚ್ಯಂಕದ ಆಧಾರದ ಮೇಲೆ ವ್ಯತ್ಯಾಸವಾಗುವ ತುಟ್ಟಿಭತ್ಯೆಯನ್ನು ಈಗಾಗಲೇ ನೀಡಲಾಗುತ್ತಿರುತ್ತದೆ. ಆದರೆ, ಪ್ರಸ್ತುತ ಅಧಿಸೂಚನೆಯಲ್ಲಿ ಏಕಾಏಕಿ ಶೇ.60ರಷ್ಟು ವೇತನ

## ಸರ್ಕಾರ ರೈತರ ಆತ್ಮಸ್ಥೈರ್ಯ ಕುಗ್ಗಿಸುವ ಕೆಲಸ ಮಾಡುತ್ತಿದೆ: ಬಿ.ವೈ.ವಿಜಯೇಂದ್ರ ಕಿಡಿ

• ಉದಯವಾಹಿನಿ, ಬೆಂಗಳೂರು

ಬೆಳೆ ಬೆಳೆಯದಿರಿ ಎಂದು ಮುಖ್ಯಮಂತ್ರಿಗಳು ನೀಡಿದ ಹೇಳಿಕೆಯು ರೈತರ ಆತ್ಮಸ್ಥೈರ್ಯ ಕುಗ್ಗಿಸುವ ಕೆಲಸ ಮಾಡಿದೆ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಟೀಕಿಸಿದ್ದಾರೆ. ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಿನ್ನೆ ಈ ನಾಡಿನ ದೊರೆ, ಮುಖ್ಯಮಂತ್ರಿಗಳು ಒಂದು ಹೇಳಿಕೆ ಕೊಟ್ಟಿದ್ದಾರೆ.

ನೀರಿಲ್ಲ ಬೆಳೆ ಬೆಳೆಯುವುದು ಬೇಡ. ಭೀಕರ ಬರಗಾಲದ ಮುನ್ಸೂಚನೆ ವಿಚಾರವನ್ನು ಸಂಪುಟದಲ್ಲಿ ಚರ್ಚಿಸಿ ರಾಜ್ಯದ ಜಲಾಶಯಗಳಲ್ಲಿ ನೀರಿಲ್ಲದ ಕಾರಣ ರೈತರು ಬೆಳೆ ಬೆಳೆಯದಿರಿ ಎಂದು ಸ್ವತಃ ಮುಖ್ಯಮಂತ್ರಿಗಳು ಹೇಳಿದ್ದು ಬಹಳ ಆಶ್ಚರ್ಯ ಮಾತ್ರವಲ್ಲದೇ ಅತ್ಯಂತ ನೋವನ್ನು ತಂದಿದೆ ಎಂದು ನುಡಿದರು.

ನಾವೇನೇ ಹೇಳಿಕೆ ನೀಡಿದರೂ ಪ್ರಬುದ್ಧತೆಯಿಂದ



ಉದಯವಾಹಿನಿ ಚಿತ್ರ

ಮಾತನಾಡಬೇಕು ಎಂದು ವಿನಂತಿಸಿದರು. ಇಡೀ ದೇಶದಲ್ಲಿ ಬರಗಾಲದ ಛಾಯೆ ಮೂಡಿದೆ. ಪ್ರಕೃತಿ ಮುನಿಸಿಕೊಂಡ ಸಂದರ್ಭದಲ್ಲಿ ರಾಜ್ಯದ ರೈತರಿಗೆ ಅಭಯ, ಭರವಸೆಯನ್ನು ಸರಕಾರ ನೀಡಬೇಕಿತ್ತು. ಮುಂದಿನ 15- 20 ದಿನ ಮಳೆ ಬೀಳುವ ಆಶಾಭಾವ ಇದೆ. ಮುಖ್ಯಮಂತ್ರಿಗಳು ಹೇಳಿದರೆಂದು ಬಿತ್ತನೆಯೇ ಮಾಡದೇ ಇದ್ದರೆ ಯಾರು ಹೊಣೆಗಾರರು ಎಂದು ಕೇಳಿದರು.

ಶೇ 50- 60 ಮಳೆ ಕಡಿಮೆ ಇರುವಾಗ ರಾಜ್ಯ ಸರಕಾರದ ಆದ್ಯತೆ ಏನು? ಇವರೇನಾದರೂ ಜಿಲ್ಲಾಧಿಕಾರಿಗಳಿಗೆ ಹಣ ಬಿಡುಗಡೆ ಮಾಡಿದ್ದಾರಾ ಎಂದು ಪ್ರಶ್ನಿಸಿದರು. ರೈತರಿಗೆ ಸ್ಪಂದಿಸುವ ನಿಟ್ಟಿನಲ್ಲಿ ಜಾನುವಾರುಗಳಿಗೆ ಸಂಬಂಧಿಸಿ ಅನುದಾನ ಬಿಡುಗಡೆ ಮಾಡಿದ್ದಾರಾ? ಬರಗಾಲದ ಮುನ್ಸೂಚನೆ ವಿಚಾರ ರಾತ್ರೋರಾತ್ರಿ ಜ್ಞಾನೋದಯ ಆಗಿದೆಯೇ? ಯಾಕೆ ಈ ರೀತಿ ಕಪಟ ನಾಟಕ ಆಡುತ್ತಿದ್ದೀರಿ? ಎಂದು ಕೇಳಿದರು.

> ಮುಖ್ಯಮಂತ್ರಿ ರೈತಪರವಾಗಿಲ್ಲದೇ ರಿಯಲ್ ಎಸ್ಟೇಟ್ ಪರ ಆದರೆ ರಾಜ್ಯದ ಹಣೆಬರಹ ಇದೇ ಆಗುತ್ತದೆ ಎಂದು ಆಕ್ಷೇಪಿಸಿದರು.
> ನಮ್ಮ ಜಲಾಶಯದಿಂದ ತಮಿಳುನಾಡಿಗೆ ನೀರು ಬಿಡುವ ದುಸ್ಸಾಹಸಕ್ಕೆ ಯಾಕೆ ಕೈ ಹಾಕಿದ್ದೀರಿ ಎಂದು ಪ್ರಶ್ನಿಸಿದರು. -ಬಿ.ವೈ.ವಿಜಯೇಂದ್ರ

## ಅಕ್ರಮ ಸ್ಫೋಟ, ಸುರಕ್ಷತಾ ನಿಯಮ ಉಲ್ಲಂಘನೆಯೇ ಬೆಂಗಳೂರು ಕ್ವಾರಿ ದುರಂತಕ್ಕೆ ಕಾರಣ..?

• ಉದಯವಾಹಿನಿ, ಬೆಂಗಳೂರ

ಬೆಂಗಳೂರ ನಗರದ ಮಾದಾಪಟ್ಟಣ ಸಮೀಪದ ಕ್ವಾರಿಯಲ್ಲಿ ಸಂಭವಿಸಿದ ಭೀಕರ ದುರಂತಕ್ಕೆ ಅಕ್ರಮ ಸ್ಫೋಟ ಹಾಗೂ ಸುರಕ್ಷತಾ ನಿಯಮಗಳ ಉಲ್ಲಂಘನೆಯೇ ಪ್ರಮುಖ ಕಾರಣ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ.

ಸ್ಥಳೀಯ ನಿವಾಸಿಗಳ ಪ್ರಕಾರ, ಗಣಿಗಾರಿಕೆ ನಡೆಸುವ ವೇಳೆ ಕಡ್ಡಾಯವಾಗಿ ಪಾಲಿಸಬೇಕಾದ 7.5 ಮೀಟರ್ ಬಫರ್ ವಲಯವನ್ನು ಉಲ್ಲಂಘಿಸಿ ಸ್ಫೋಟ ನಡೆಸಲಾಗಿದೆ. ಇದರಿಂದಲೇ ಏಳು ಕಾರ್ಮಿಕರು ಸಾವನ್ನಪ್ಪಿರಬಹುದು ಎಂದು ಆರೋಪಿಸಿದ್ದಾರೆ.ಈ ದುರಂತದ ಬೆನ್ನಲ್ಲೇ ಗಣಿ ಮತ್ತು ಭೂವಿಜ್ಞಾನ ಇಲಾಖೆ ಬೆಂಗಳೂರಿನ ನಗರ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ 48 ಕಲ್ಲುಗಣಿಗಳ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ. ಸ್ಥಳೀಯ ನಿವಾಸಿ ಲಕ್ಷ್ಮೀನಾರಾಯಣ ಮಾತನಾಡಿ, ಗಣಿ ಸುರಕ್ಷತಾ ಮಹಾನಿರ್ದೇಶನಾಲಯ ಮಾರ್ಗಸೂಚಿಗಳ ಪ್ರಕಾರ ಗಣಿಗಾರಿಕೆ ಗುತ್ತಿಗೆ ಪ್ರದೇಶದ ಸುತ್ತ ಕನಿಷ್ಠ 7.5 ಮೀಟರ್ ಬಫರ್ ವಲಯ ಕಡ್ಡಾಯವಾಗಿದ್ದು, ಆ ಪ್ರದೇಶದಲ್ಲಿ ಯಾವುದೇ ರೀತಿಯ ಗಣಿಗಾರಿಕೆ ಅಥವಾ ಸ್ಫೋಟ ನಡೆಸಲು ಅವಕಾಶವಿರುವುದಿಲ್ಲ. ಆದರೆ, ಪಕ್ಕಪಕ್ಕದಲ್ಲಿದ್ದ ಎರಡು ಕಲ್ಲುಗಣಿಗಳ ಮಾಲೀಕರು ಈ ನಿಯಮವನ್ನು ಉಲ್ಲಂಘಿಸಿ ನಿಷೇಧಿತ ವಲಯದಲ್ಲೇ ಗಣಿಗಾರಿಕೆ ನಡೆಸಿದ್ದಾರೆ.

# ಕರಾವಳಿಮಲೆನಾಡು ಪ್ರವಾಸೋದ್ಯಮಕ್ಕೆ ಹೊಸ ನೀತಿ

## ಕ್ರೂಸ್, ಬೀಚ್ ಪ್ರವಾಸೋದ್ಯಮಕ್ಕೆ ವಿಶೇಷ ಒತ್ತು: ಸಚಿವ ಕೆ.ಜೆ.ಜಾರ್ಜ್ ಸೂಚನೆ

• ಉದಯವಾಹಿನಿ, ಬೆಂಗಳೂರ

ಕರ್ನಾಟಕವನ್ನು ದೇಶದ ಪ್ರಮುಖ ಪ್ರವಾಸೋದ್ಯಮ ತಾಣವನ್ನಾಗಿ ರೂಪಿಸುವ ನಿಟ್ಟಿನಲ್ಲಿ, ಕರಾವಳಿ ಮತ್ತು ಮಲೆನಾಡು ಪ್ರದೇಶಗಳ ಪ್ರವಾಸೋದ್ಯಮಕ್ಕೆ ಹೊಸ ಚೈತನ್ಯ ನೀಡುವ 'ಕರಾವಳಿಮಲೆನಾಡು ಕರ್ನಾಟಕ ಪ್ರವಾಸೋದ್ಯಮ ನೀತಿ2026' ರೂಪಿಸಲಾಗುತ್ತಿದೆ. ಈ ನೀತಿಯಲ್ಲಿ ಕ್ರೂಸ್ ಪ್ರವಾಸೋದ್ಯಮ, ಬೀಚ್ ಪ್ರವಾಸೋದ್ಯಮ ಹಾಗೂ ವಿಶ್ವದರ್ಜೆಯ ಪ್ರವಾಸಿ ಸೌಲಭ್ಯಗಳಿಗೆ ವಿಶೇಷ ಆದ್ಯತೆ ನೀಡಬೇಕು ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವರಾದ ಕೆ.ಜೆ. ಜಾರ್ಜ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಇಂಧನ ಭವನದಲ್ಲಿ ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು, ರಾಜ್ಯದ ಪ್ರವಾಸೋದ್ಯಮವನ್ನು ಮೇಲ್ದರ್ಜೆಗೇರಿಸುವ ದೂರದೃಷ್ಟಿಯ ಕಾರ್ಯತಂತ್ರಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು.

ರಾಜ್ಯದ ಕರಾವಳಿ ಹಾಗೂ ಮಲೆನಾಡು ವ್ಯಾಪ್ತಿಯ ಆರು ಜಿಲ್ಲೆಗಳ ಪ್ರವಾಸೋದ್ಯಮ ಸಾಮರ್ಥ್ಯವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಸಿದ್ಧವಾಗುತ್ತಿರುವ ಹೊಸ ಪ್ರವಾಸೋದ್ಯಮ ನೀತಿಯಲ್ಲಿ, ವಿಷಯಾಧಾರಿತ ಪ್ರವಾಸೋದ್ಯಮ ಸರ್ಕೀಟ್‌ಗಳು, ಕಡಲತೀರ ಪ್ರವಾಸೋದ್ಯಮ,



ಉದಯವಾಹಿನಿ ಚಿತ್ರ

ಕ್ರೂಸ್ ಪ್ರವಾಸೋದ್ಯಮ, ಸಾಹಸ ಕ್ರೀಡೆಗಳು ಹಾಗೂ ಸ್ಥಳೀಯ ಆರ್ಥಿಕತೆಯನ್ನು ಉತ್ತೇಜಿಸುವ ಕಾರ್ಯಕ್ರಮಗಳಿಗೆ ಆದ್ಯತೆ ನೀಡಬೇಕು ಎಂದು ಸಚಿವರು ತಿಳಿಸಿದರು.

ಅಂತಾರಾಷ್ಟ್ರೀಯ ಕ್ರೂಸ್ ಹಡಗುಗಳು ಮಂಗಳೂರು ಸೇರಿದಂತೆ ರಾಜ್ಯದ ವಿವಿಧ ಬಂದರುಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಸಮಗ್ರ ಕಾರ್ಯತಂತ್ರ ರೂಪಿಸಬೇಕಿದೆ. ಕ್ರೂಸ್ ಪ್ರವಾಸಿಗರು ಕರ್ನಾಟಕದಲ್ಲಿ ಹೆಚ್ಚು ದಿನ ಉಳಿಯುವಂತೆ ಆಕರ್ಷಕ ಪ್ರವಾಸೋದ್ಯಮ ಪ್ಯಾಕೇಜ್‌ಗಳು ಮತ್ತು ಸರ್ಕೀಟ್‌ಗಳನ್ನು ಅಭಿವೃದ್ಧಿಪಡಿಸಬೇಕು. ಈ ನಿಟ್ಟಿನಲ್ಲಿ ಪ್ರಮುಖ ಕ್ರೂಸ್ ಆಪರೇಟರ್‌ಗಳೊಂದಿಗೆ ಸಭೆ ನಡೆಸಿ, ಅವರ ಹಾಗೂ ಪ್ರವಾಸಿಗರ ನಿರೀಕ್ಷೆಗಳನ್ನು ಆಧರಿಸಿ ನೀತಿಯಲ್ಲಿ ಅಗತ್ಯ ಬದಲಾವಣೆಗಳನ್ನು ಅಳವಡಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

> **ಪ್ರವಾಸೋದ್ಯಮ ಎಂದರೆ ಪ್ರವಾಸಿ ತಾಣಗಳ ಅಭಿವೃದ್ಧಿಯಲ್ಲ**
> ಪ್ರವಾಸಿಗರಿಗೆ ವಿಶ್ವದರ್ಜೆಯ ಅನುಭವವನ್ನು ನೀಡುವ ಸಮಗ್ರ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವುದು. ಉತ್ತಮ ಮೂಲಸೌಕರ್ಯ, ಸುಲಭ ಸಂಪರ್ಕ, ಸುರಕ್ಷತೆ ಮತ್ತು ಗುಣಮಟ್ಟದ ಸೇವೆಗಳ ಮೂಲಕವೇ ಕರ್ನಾಟಕವನ್ನು ಜಾಗತಿಕ ಪ್ರವಾಸೋದ್ಯಮ ನಕ್ಷೆಯಲ್ಲಿ ಉತ್ತಮ ಸ್ಥಾನ ಪಡೆಯಬಹುದಾಗಿದೆ ಎಂದು

ಬೀಚ್ ಪ್ರವಾಸೋದ್ಯಮವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ, ಬ್ಲೂ ಫ್ಲಾಗ್ ಬೀಚ್‌ಗಳ ಅಭಿವೃದ್ಧಿ, ಸ್ವಚ್ಛತೆ, ಸುರಕ್ಷತೆ, ಪ್ರವಾಸಿಗರ ಅನುಕೂಲಕ್ಕಾಗಿ ಅಗತ್ಯ ಮೂಲಸೌಕರ್ಯ, ಜಲಕ್ರೀಡೆಗಳು ಸಾಹಸ ಚಟುವಟಿಕೆಗಳು ಹಾಗೂ ಸಮುದ್ರತೀರದಲ್ಲಿ ಗುಣಮಟ್ಟದ ಪ್ರವಾಸಿ ಅನುಭವ ಕಲ್ಪಿಸುವ ಯೋಜನೆಗಳನ್ನು ಹೊಸ ನೀತಿಯಲ್ಲಿ ಸೇರಿಸಬೇಕು ಎಂದು ತಿಳಿಸಿದರು.

ಇದರ ಜೊತೆಗೆ, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಮತ್ತು ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ವ್ಯಾಪ್ತಿಯ ಪ್ರವಾಸಿ ತಾಣಗಳಲ್ಲಿ ಗುಣಮಟ್ಟದ ವಸತಿ, ಮೂಲಭೂತ ಸೌಕರ್ಯ, ಸ್ವಚ್ಛತೆ, ಮಾಹಿತಿ ವ್ಯವಸ್ಥೆ ಹಾಗೂ ಪ್ರವಾಸಿಗರಿಗೆ ಅಗತ್ಯವಾದ ಸೇವೆಗಳನ್ನು ಮತ್ತಷ್ಟು ವಿಸ್ತರಿಸುವ ಮೂಲಕ ಪ್ರವಾಸಿಗರ ಅನುಭವವನ್ನು ಉತ್ತಮಗೊಳಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಂತರಾಳದಿಂದ...
EDITORIAL

# ಬೀದಿ ಬದಿಯ ವ್ಯಾಪಾರಿಗಳ ಬದುಕುವ ಹಕ್ಕು ಹರಣವಾಗದಿರಲಿ



ಭಾರತದಲ್ಲಿ ಪಾದಚಾರಿ ಮಾರ್ಗ ಅಥವಾ ಫುಟ್‌ಪಾತ್‌ಗಳು ಆಗಾಗ ಸುದ್ದಿ ಮಾಡುತ್ತಿರುತ್ತವೆ. ರಸ್ತೆಗಳಲ್ಲಿ ಚಲಿಸಬೇಕಾದ ವಾಹನಗಳು ಫುಟ್‌ಪಾತ್‌ನಲ್ಲಿ ಚಲಿಸಿ ಅಮಾಯಕರ ಪ್ರಾಣವನ್ನು ಬಲಿತೆಗೆದುಕೊಳ್ಳುವುದು ಸರ್ವೇ ಸಾಮಾನ್ಯವಾಗಿದೆ. ಮಲಗುವುದಕ್ಕೆ ವ್ಯವಸ್ಥೆಯಿಲ್ಲದೆ ಫುಟ್‌ಪಾತನ್ನೇ ಆಶ್ರಯ ಪಡೆಯುವ ವಲಸೆ ಕಾರ್ಮಿಕರ ಮೇಲೆ ವಾಹನಗಳು ಹರಿದು ಸಾವು ನೋವುಗಳು ಸಂಭವಿಸಿದಾಗ ಫುಟ್‌ಪಾತ್‌ಗಳಿರುವುದು ಜನರು ನಿದ್ದೆ ಮಾಡುವುದಕ್ಕಲ್ಲ ಎನ್ನುವ ಆದೇಶ ನಾಗರಿಕರೆನಿಸಿಕೊಂಡವರಿಂದಲೇ ಹೊರ ಬೀಳುತ್ತದೆ. ಈ ಫುಟ್‌ಪಾತ್‌ಗಳಲ್ಲಿ ನಿದ್ದೆ ಮಾಡಬೇಕಾದ ಅನಿವಾರ್ಯ ಸ್ಥಿತಿ ಅವರಿಗೆ ನಿರ್ಮಾಣವಾಗಿರುವುದರ ಬಗ್ಗೆ ಯಾವುದೇ ಚರ್ಚೆ ನಡೆಯುವುದಿಲ್ಲ. ಎಲ್ಲಕ್ಕಿಂತ ಮುಖ್ಯವಾಗಿ ಫುಟ್‌ಪಾತ್ ನಿದ್ದೆ ಮಾಡುವುದಕ ಇರುವ ಸ್ಥಳವಲ್ಲ ಎನ್ನುವುದು ಎಷ್ಟು ಸತ್ಯವೋ, ವಾಹನಗಳು ಓಡಾಡುವುದಕ್ಕೆ ಇರುವ ಜಾಗವೂ ಅಲ್ಲ ಎನ್ನುವುದನ್ನು ಇವರು ಮರೆಯುತ್ತಾರೆ. ಇತ್ತೀಚೆಗೆ ಸುಪ್ರೀಂಕೋರ್ಟ್ ಪಾದಚಾರಿ ಮಾರ್ಗದ ಬಗ್ಗೆ ಸ್ಪಷ್ಟ ತೀರ್ಪನ್ನು ನೀಡಿದೆ. ಪಾದಚಾರಿಗಳ ಹಕ್ಕಿಗೆ ಮಾನ್ಯತೆಯನ್ನು ನೀಡಿದೆ. ರಸ್ತೆ ಅಪಘಾತದಲ್ಲಿ ಶಾಲಾಬಾಲಕನೊಬ್ಬ ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿ ತೀರ್ಪು ನೀಡುತ್ತಾ ವಿಶ್ವದಲ್ಲೇ ಅತ್ಯಧಿಕ ರಸ್ತೆ ಅಪಘಾತ ಸಾವುಗಳು ಭಾರತದಲ್ಲಿ ಸಂಭವಿಸುತ್ತಿದೆ. ರಸ್ತೆಗಳನ್ನು ನಿರ್ಮಿಸುವ ವಿಧಾನದಲ್ಲಿ ಪಾದಚಾರಿಗಳನ್ನು ನಿರ್ಲಕ್ಷಿಸಿರುವುದೇ ಇದಕ್ಕೆ ಕಾರಣ ಎಂದು ನ್ಯಾಯಾಲಯ ಅಭಿಪ್ರಾಯ ಪಟ್ಟಿದೆ. ಇದರ ಹಿಂದಿರುವ ಸಾಮಾಜಿಕ ಅಸಮಾನತೆಗಳನ್ನು ಗುರುತಿಸುವ ಪ್ರಯತ್ನವನ್ನೂ ಸುಪ್ರೀಂಕೋರ್ಟ್ ಮಾಡಿದೆ. ಈ ಅಭಿಯಾನದ ಭಾಗವಾಗಿ ಬೀದಿ ಬದಿ ವ್ಯಾಪಾರಿಗಳನ್ನು ನಿಷ್ಕರುಣೆಯಿಂದ ಎಬ್ಬಿಸಲಾಗುತ್ತಿದೆ. ಅವರ ಮಾರಾಟ ಸರಕುಗಳು ಏಕಾಏಕಿ ಕಾರ್ಯಾಚರಣೆಗಳಿಗೆ ಬಲಿಯಾಗಿವೆ. 'ಪಾದಚಾರಿ ಮಾರ್ಗಗಳು ಸಾರ್ವಜನಿಕರ ಆಸ್ತಿಯಾಗಿದ್ದು ಅವುಗಳನ್ನು ಅತಿಕ್ರಮಣ ಮಾಡಿಕೊಂಡರೆ ನಾಗರಿಕರ ಓಡಾಟಕ್ಕೆ ಸಾಕಷ್ಟು ಸಮಸ್ಯೆ ಆಗಲಿದೆ. ನಾಗರಿಕರು ಯಾವುದೇ ಅಡೆತಡೆಯಿಲ್ಲದೆ ಸುರಕ್ಷಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಪ್ರಮುಖ ರಸ್ತೆಗಳ ಪಾದಚಾರಿ ಮಾರ್ಗಗಳನ್ನು ಮುಕ್ತಗೊಳಿಸಲಾಗುತ್ತದೆ' ಎಂದು ಪ್ರಕಟಣೆ ತಿಳಿಸುತ್ತದೆ. ಬೀದಿ ಬದಿಯ ವ್ಯಾಪಾರಿಗಳ ಬದುಕುವ ಹಕ್ಕನ್ನು ಜನರು ಪ್ರತಿಪಾದಿಸುತ್ತಿದ್ದಂತೆಯೇ, ಸರಕಾರ ಪಾದಚಾರಿಗಳ ಹಕ್ಕನ್ನು ಗುರಾಣಿಯಾಗಿ ಬಳಸಿಕೊಳ್ಳುತ್ತಿದೆ. ನಗರದ ಸೌಂದರ್ಯ ಮತ್ತು ಪಾದಚಾರಿಗಳ ಹಕ್ಕುಗಳನ್ನು ರಕ್ಷಿಸುವುದಕ್ಕೆ ಈ ತೆರವು ಅನಿವಾರ್ಯ ಎಂದು ಸರಕಾರ ಹೇಳುತ್ತಿದೆ.

## ಸುರಕ್ಷಿತ ಪಾದಚಾರಿ ಮಾರ್ಗ ಅಭಿಯಾನ


ರಸ್ತೆ ಸುರಕ್ಷತೆಯ ವಿಷಯವು ಒಂದು ರೀತಿಯ 'ಗಣ್ಯರ ಕಬಳಿಕೆ'ಯಾಗಿದೆ. ಇದರಲ್ಲಿ ಶ್ರೀಮಂತರು ಸಾರ್ವಜನಿಕ ಮೂಲಸೌಕರ್ಯಗಳನ್ನು ಬಳಸುವುದಕ್ಕೆ ಇತರರ ಅಗತ್ಯಗಳಿಗಿಂತ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ. ಪಾದಚಾರಿಗಳು, ಸೈಕಲ್ ಸವಾರರನ್ನು ನಿರ್ಲಕ್ಷಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಪಾದಚಾರಿಗಳ ಹಕ್ಕನ್ನು ಗಂಭೀರವಾಗಿ ತೆಗೆದುಕೊಳ್ಳಬೇಕಾಗುತ್ತದೆ. ಇದನ್ನು ಕೇವಲ ರಸ್ತೆಗಳನ್ನು ನಿರ್ಮಿಸುವ ವಿಧಾನದ ಒಂದು ಭಾಗವಾಗಿ ನಿರೀಕ್ಷಿಸದೆ, ಸಂವಿಧಾನದ ಅಡಿಯಲ್ಲಿ 'ಭಾರತಾದ್ಯಂತ ಮುಕ್ತವಾಗಿ ಸಂಚರಿಸುವ ಹಕ್ಕು ಮತ್ತು ಜೀವಿಸುವ ಹಕ್ಕುಗಳ ಮೂಲಕ ಖಾತರಿ ಪಡಿಸಲಾದ ಮೂಲಭೂತ ಹಕ್ಕೆಂದು ಪರಿಗಣಿಸಬೇಕು ಎಂದು ಸುಪ್ರೀಂಕೋರ್ಟ್ ಹೇಳಿದೆ. ಭಾರತದಲ್ಲಿ ಪಾದಚಾರಿಗಳ ಹಕ್ಕುಗಳು ಸರಕಾರಕ್ಕೆ ನೆನಪಾಗುವುದು ಬೀದಿಬದಿಯ ವ್ಯಾಪಾರಿಗಳನ್ನು ತೆರವು ಮಾಡುವಾಗ ಮಾತ್ರ.

ಸುರಕ್ಷಿತ, ಸುಗಮ ಹಾಗೂ ಅಡೆತಡೆಯಿಲ್ಲದ ಪಾದಚಾರಿ ಸಂಚಾರವನ್ನು ಸರಕಾರ ಹಮ್ಮಿಕೊಂಡಿರುವ 'ಸುರಕ್ಷಿತ ಪಾದಚಾರಿ ಮಾರ್ಗ ಅಭಿಯಾನ' ಈಗ ಚರ್ಚೆಯಲ್ಲಿದೆ.

ಪಾದಚಾರಿ ಮಾರ್ಗಗಳಿರುವುದು ವ್ಯಾಪಾರ ಮಾಡುವುದಕ್ಕಲ್ಲ ಎನ್ನುವುದೂ ನಿಜ. ಆದರೆ, ಪಾದಚಾರಿಗಳ ಹಕ್ಕನ್ನು ಎತ್ತಿ ಹಿಡಿಯುವ ಸಂದರ್ಭದಲ್ಲಿ ಬೀದಿ ಬದಿ ವ್ಯಾಪಾರಿಗಳ ಬದುಕುವ ಹಕ್ಕನ್ನು ಸರಕಾರ ಕಿತ್ತುಕೊಂಡಂತಾಗಬಾರದು ಎನ್ನುವುದು ಮನುಷ್ಯತ್ವದ ಮೇಲೆ ನಂಬಿಕೆಯಿರುವ ಎಲ್ಲರ ಆಗ್ರಹವಾಗಿದೆ.

ಬೀದಿ ಬದಿ ವ್ಯಾಪಾರಿಗಳು ಒಂದು ನಗರದ ಅಥವಾ ನಾಡಿನ ಆರ್ಥಿಕತೆಗೆ ತಮ್ಮದೇ ಆದ ಕೊಡುಗೆಗಳನ್ನು ನೀಡುತ್ತಿರುತ್ತಾರೆ. ಒಂದು ನಗರ ಆರ್ಥಿಕವಾಗಿ ಚಟುವಟಿಕೆಯಲ್ಲಿರಲು ಇವರ ಪಾತ್ರ ಬಹುದೊಡ್ಡದಿದೆ. ಬೃಹತ್ ಮಾಲ್‌ಗಳಷ್ಟೇ ನಗರವಲ್ಲ. ನಗರಕ್ಕೆ ಪ್ರವೇಶಿಸುವ ಸಹಸ್ರಾರು ಬಡವರ್ಗದ ಜನರು ಈ ಮಾಲ್‌ಗಳೊಂದಿಗೆ ಯಾವುದೇ ಸಂಬಂಧವನ್ನು ಹೊಂದಿಲ್ಲ. ಅವರು ಈ ಬೀದಿ ಬದಿಯ ವ್ಯಾಪಾರಿಗಳ ಜೊತೆಗೆ ವ್ಯವಹಾರ ಸಂಬಂಧವನ್ನು ಹೊಂದಿದವರಾಗಿದ್ದಾರೆ. ಬೀದಿ ಬದಿಯ ವ್ಯಾಪಾರಿಗಳನ್ನು ತೆರವುಗೊಳಿಸುವುದು ಎಂದರೆ, ಅವರನ್ನು ನೆಚ್ಚಿಕೊಂಡ ಸಾವಿರಾರು ಕುಟುಂಬಗಳನ್ನು ಏಕಾಏಕಿ ಬೀದಿ ಪಾಲು ಮಾಡುವುದು ಎಂದರ್ಥ. ಬೀದಿ ಬದಿ ವ್ಯಾಪಾರಿಗಳು ಒಂದು ನಗರದ ಅಥವಾ ನಾಡಿನ ಯಾಕೆಂದರೆ ಒಂದು ಬೀದಿ ಬದಿ ಅಂಗಡಿಯನ್ನು ಆಶ್ರಯಿಸಿಕೊಂಡು ಒಂದು ಕುಟುಂಬವಿರುತ್ತದೆ. ಇದೀಗ ಮಳೆಗಾಲದ ಸಮಯ. ಶಾಲೆ, ಕಾಲೇಜುಗಳು ಆರಂಭವಾಗಿವೆ. ಬೀದಿ ಬದಿ ವ್ಯಾಪಾರಿಗಳಿಗೆ ತಮ್ಮ ಕುಟುಂಬ ಸದಸ್ಯರಿಗೆ ಸಂಬಂಧಿಸಿದ ಹತ್ತು ಹಲವು ಜವಾಬ್ದಾರಿಗಳಿರುತ್ತವೆ.

# ಮಕ್ಕಳಿಗೆ ಮಲೇರಿಯ ಅಪಾಯಕಾರಿ ಏಕೆ? ವೈದ್ಯರು ಹೇಳುವುದೇನು?



ಮಳೆಗಾಲ ಪ್ರಾರಂಭವಾಗುತ್ತಿದ್ದಂತೆ ದೇಶದಲ್ಲಿ ಕಂಡುಬರುವ ಮಲೇರಿಯದಂತಹ ಸೊಳ್ಳೆಗಳಿಂದ ಹರಡುವ ರೋಗಗಳು, ವಿಶೇಷವಾಗಿ ಮಕ್ಕಳಿಗೆ, ಮಾರಕವಾಗಿ ಪರಿಣಮಿಸಬಹುದು ಎಂದು ವೈದ್ಯರು ಎಚ್ಚರಿಸಿದ್ದಾರೆ. ಜೂನ್ ತಿಂಗಳನ್ನು ದೇಶದಲ್ಲಿ ಮಲೇರಿಯಾ ವಿರೋಧಿ ತಿಂಗಳಾಗಿ ಆಚರಿಸಲಾಗುತ್ತದೆ. ಈ ಸಂದರ್ಭದಲ್ಲಿ ಮಧುಕರ್ ರೇನೋ ಮಕ್ಕಳ ಆಸ್ಪತ್ರೆಯ ಪೀಡಿಯಾಟ್ರಿಕ್ ಸಲಹೆಗಾರ ಡಾ. ಅಂಕುರ್ ಓಹಿ ಮತ್ತು ದೆಹಲಿಯ ಸಿಕೆ ಬಿರ್ಲಾ ಆಸ್ಪತ್ರೆಯ ಇಂಟರ್ನಲ್ ಮೆಡಿಸಿನ್ ಕನ್ಸಲ್ಟಂಟ್ ಅಮಿತ್ ಪ್ರಕಾಶ್ ಸಿಂಗ್ ಅವರು ಮಕ್ಕಳನ್ನು ಮಲೇರಿಯಕ್ಕೆ ಗುರಿಯಾಗಿಸುವ ಕಾರಣಗಳನ್ನು ವಿವರಿಸಿದ್ದಾರೆ. ಮಕ್ಕಳು ಮಲೇರಿಯ ಸೋಂಕಿಗೆ ಒಳಗಾದಾಗ ವಯಸ್ಕರಿಗಿಂತ ಹೆಚ್ಚಿನ ಅನಾರೋಗ್ಯದ ತೀವ್ರತೆಯನ್ನು ಅನುಭವಿಸುತ್ತಾರೆ. ಮಲೇರಿಯ ಪರಾವಲಂಬಿಗಳು ಕೆಂಪು ರಕ್ತಕಣಗಳನ್ನು ಸೋಂಕಿಗೆ ಒಳಪಡಿಸಿ ನಾಶಮಾಡುತ್ತವೆ. ಪರಿಣಾಮವಾಗಿ ಆಮ್ಲಜನಕವನ್ನು ಸಾಗಿಸುವ ಸಾಮರ್ಥ್ಯ ಕಡಿಮೆಯಾಗುತ್ತದೆ. ಮಗುವಿನ ಸಣ್ಣ ದೇಹದ ರಿಸರ್ವ್ ಮತ್ತು ಹೆಚ್ಚಿನ ಚಯಾಪಚಯ ದರವು ಆರೋಗ್ಯ ಸ್ಥಿತಿ ಬಿಗಡಾಯಿಸಲು ಕಾರಣವಾಗುತ್ತದೆ ಎಂದು ಡಾ. ಅಂಕುರ್ ಅಭಿಪ್ರಾಯಪಟ್ಟಿದ್ದಾರೆ. ಡಾ. ಅಮಿತ್ ಪ್ರಕಾಶ್ ಅವರ ಪ್ರಕಾರ, ಮಕ್ಕಳ ರೋಗನಿರೋಧಕ ಶಕ್ತಿ ಇನ್ನೂ ಪ್ರಬುದ್ಧವಾಗುವ ಸ್ಥಿತಿಯಲ್ಲಿರುವ ಕಾರಣ ಮಲೇರಿಯದಿಂದ ಹೆಚ್ಚು ಅಪಾಯ ಹೊಂದಿರುತ್ತಾರೆ. ಮಲೇರಿಯ ಪೀಡಿತ ಪ್ರದೇಶಗಳಲ್ಲಿ ವಾಸಿಸುವ ಅನೇಕ ವಯಸ್ಕರು ಮಲೇರಿಯಕ್ಕೆ ಪದೇಪದೆ ಒಡ್ಡಿಕೊಳ್ಳುವ ಮೂಲಕ ರೋಗನಿರೋಧಕ ಶಕ್ತಿಯನ್ನು ಬಲಪಡಿಸಿಕೊಳ್ಳಲು ಸಮರ್ಥರಾಗಿದ್ದಾರೆ. ಆದರೆ ಚಿಕ್ಕ ಮಕ್ಕಳು ಮಲೇರಿಯಕ್ಕೆ ಪದೇಪದೆ ಒಡ್ಡಿಕೊಂಡರೂ ಯಾವುದೇ ರೋಗನಿರೋಧಕ ಶಕ್ತಿಯನ್ನು ಬೆಳೆಸಿಕೊಳ್ಳುವುದಿಲ್ಲ ಎಂದು ಅವರು ಅಭಿಪ್ರಾಯಪಟ್ಟರು. ಮಕ್ಕಳು ಸಾಮಾನ್ಯವಾಗಿ ಹೆಚ್ಚಿನ ಸಮಯವನ್ನು ಮನೆಗಳಿಂದ ಹೊರಗೆ ಕಳೆಯುವ ಕಾರಣ ರೋಗಕ್ಕೆ ಬೇಗನೇ ಗುರಿಯಾಗಬಹುದು. ರೋಗವನ್ನು ಗುರುತಿಸುವುದು ಮತ್ತು ತುರ್ತು ವೈದ್ಯಕೀಯ ಆರೈಕೆ ಪಡೆಯಲು ಅವರು ತಮ್ಮ ಆರೈಕೆದಾರರನ್ನೇ ಅವಲಂಬಿಸಿರುತ್ತಾರೆ. ವಿಳಂಬವಾದ ರೋಗ ನಿರ್ಣಯ, ಸ್ವ-ಚಿಕಿತ್ಸೆ ಅಥವಾ ಮಗುವಿಗೆ ಸಾಮಾನ್ಯ ವೈರಲ್ ಜ್ವರವಿದೆ ಎನ್ನುವ ಊಹೆಯಲ್ಲಿ ಔಷಧಿ ನೀಡುವ ಕಾರಣ, ಮಲೇರಿಯವು ಸೌಮ್ಯ ಸ್ಥಿತಿಯಿಂದ ಗಂಭೀರ ಸ್ಥಿತಿಗೆ ಪರಿವರ್ತನೆಗೊಳ್ಳಲು ಕಾರಣವಾಗುತ್ತದೆ. ಮಲೇರಿಯ ಮಗುವಿಗೆ ಹರಡಿದಾಗ, ಪರಾವಲಂಬಿಗಳು ಮಗುವಿನ ರಕ್ತದಲ್ಲಿ ತ್ವರಿತವಾಗಿ ಮತ್ತು ವ್ಯಾಪಕವಾಗಿ ದ್ವಿಗುಣಗೊಳ್ಳಬಹುದು. ಕೆಂಪು ರಕ್ತಕಣಗಳ ಸಂಖ್ಯೆ ಗಮನಾರ್ಹವಾಗಿ ಇಳಿಯಬಹುದು. ಇದರಿಂದ ತೀವ್ರ ರಕ್ತಹೀನತೆ ಉಂಟಾಗಬಹುದು. ಮಾತ್ರವಲ್ಲದೆ, ಮಲೇರಿಯವು ಇತರ ಅಂಗಗಳ ಮೇಲೂ ಪರಿಣಾಮ ಬೀರಬಹುದು. ಉಸಿರಾಟದ ತೊಂದರೆ, ರಕ್ತದಲ್ಲಿ ಸಕ್ಕರೆ ಅಂಶ ಕಡಿಮೆಯಾಗುವುದು, ಡಿಹೈಡೇಶನ್ ಉಂಟಾಗಬಹುದು ಮತ್ತು ಮಲೇರಿಯದ ತೀವ್ರ ಪ್ರಕರಣಗಳಲ್ಲಿ ಮೆದುಳಿಗೂ ಜ್ವರ ಬರಬಹುದು. ಪರಿಣಾಮವಾಗಿ ಕೋಮಾ ಮತ್ತು/ಅಥವಾ ಶಾಶ್ವತ ಮೆದುಳಿನ ಗಾಯಗಳು ಉಂಟಾಗಬಹುದು. ಮಕ್ಕಳಲ್ಲಿ ಮಲೇರಿಯದ ಆರಂಭಿಕ ಲಕ್ಷಣಗಳಲ್ಲಿ ಜ್ವರ, ಆಯಾಸ, ಕಿರಿಕಿರಿ, ವಾಂತಿ ಮತ್ತು ಆಹಾರ ಸೇವಿಸುವಲ್ಲಿ ತೊಂದರೆ ಕಂಡುಬರಬಹುದು. ಬಾಲ್ಯದ ಸಾಮಾನ್ಯ ರೋಗಗಳ ಲಕ್ಷಣಗಳೂ ಇವೇ ಆಗಿರುವುದರಿಂದ, ಪೋಷಕರು ಸಾಮಾನ್ಯವಾಗಿ ವೈದ್ಯಕೀಯ ಆರೈಕೆಯಲ್ಲಿ ವಿಳಂಬ ಮಾಡಬಹುದು. ಆದರೆ ತಕ್ಷಣವೇ ವೈದ್ಯಕೀಯ ಚಿಕಿತ್ಸೆ ಪಡೆಯುವುದು ಅಗತ್ಯ. ಸೊಳ್ಳೆ ನಿಯಂತ್ರಣ, ಕೀಟನಾಶಕ ಚಿಕಿತ್ಸೆ ಪಡೆದ ಹಾಸಿಗೆ-ಪರದೆಗಳ ಬಳಕೆ, ಸಕಾಲಿಕ ರೋಗ ನಿರ್ಣಯ ಮತ್ತು ಆರಂಭದಲ್ಲೇ ಚಿಕಿತ್ಸೆ ನೀಡುವಂತಹ ತಡೆಗಟ್ಟುವ ಕ್ರಮಗಳು ಮಕ್ಕಳನ್ನು ತೀವ್ರ ಮಲೇರಿಯದಿಂದ ರಕ್ಷಿಸಲು ಮತ್ತು ಸಂಬಂಧಿತ ಸಮಸ್ಯೆಗಳು ಉಂಟಾಗದಂತೆ ತಡೆಯಲು ಸಹಕಾರಿಯಾಗುತ್ತವೆ.



ವಿದ್ಯಾರ್ಥಿ ವಿಜಯ
ಡಾ.ಸುಧಾಕರ.ಜಿ. ಲಕ್ಕವಳ್ಳಿ
ಲೇಖಕರು
ಸಾಮಾಜಿಕ ಚಿಂತಕರು
12


# ನಾಳೆಗೇಕೆ ಇಂದೇ ಗೆಲ್ಲೋಣ

ವಿದ್ಯಾರ್ಥಿ ಬದುಕಿನ ದೀಪವನ್ನು ಬೆಳಗುವ ಎಣ್ಣೆ ಶಿಸ್ತು. ಆ ದೀಪವನ್ನು ಆರಿಸುವ ಗಾಳಿ ಆಲಸ್ಯ. ಗೆಲುವಿನ ಮೆಟ್ಟಿಲೇರುವ ಕನಸು ಕಾಣುವ ಪ್ರತಿಯೊಬ್ಬ ವಿದ್ಯಾರ್ಥಿಯ ಪಾಲಿಗೆ ಆಲಸ್ಯವೇ ದೊಡ್ಡ ಮುಳ್ಳು. ಸಮಯವೆಂಬ ಚಿನ್ನವನ್ನು ಸುಟ್ಟು ಬೂದಿ ಮಾಡುವ ಈ ದುರ್ಗುಣವು ಸಾಮರ್ಥ್ಯದ ರೆಕ್ಕೆಗಳನ್ನು ಕತ್ತರಿಸಿ, ಕನಸಿನ ಗರಿಗಳನ್ನು ಕಿತ್ತು ಹಾಕುತ್ತದೆ.

ಹೀಗಾಗಿ ಯಶಸ್ಸಿನ ಯಾತ್ರೆಗೆ ಹೊರಡುವ ಮೊದಲು ಆಲಸ್ಯದ ಕತ್ತಲೆಯನ್ನು ಸೀಳಬೇಕು. ವಿಜ್ಞಾನ ಹೇಳುತ್ತದೆ, ಕೆಲಸ ಮುಂದೂಡಿದಾಗ ಮನಸ್ಸು ಒತ್ತಡದ ಬಲೆಗೆ ಬೀಳುತ್ತದೆ. ಸಮಯಕ್ಕೆ ಸ್ಪಂದಿಸಿದಾಗ ಮೆದುಳಿನಲ್ಲಿ ಡೋಪಮೈನ್ ಎಂಬ ಚೈತನ್ಯದ ಅಮೃತ ಹರಿಯುತ್ತದೆ. ಅದು ಇನ್ನಷ್ಟು ಸಾಧನೆಯ ಹಸಿವನ್ನು ಕೆರಳಿಸುತ್ತದೆ.

ಆಲಸ್ಯವನ್ನು ಗೆದ್ದ ವಿದ್ಯಾರ್ಥಿ ಕ್ಷಣವನ್ನೂ ರತ್ನವೆಂದು ಕಾಣುತ್ತಾನೆ. ಅವನ ನಡೆ ಶಿಸ್ತಿನ ದಾರಿ, ನುಡಿ ಜವಾಬ್ದಾರಿಯ ಹಾಡು, ನೋಟ ಗುರಿಯ ನಕ್ಷತ್ರ. ಆಲಸ್ಯದ ಸರಪಳಿ ಕಳಚಿದ ದಿನವೇ ಯಶಸ್ಸಿನ ದೇಗುಲದ ಬಾಗಿಲು ತೆರೆಯುತ್ತದೆ. ಅಂದೇ ಬದುಕು ಹಬ್ಬವಾಗುತ್ತದೆ.

**ಯೋಜಿತ ದಿನಚರಿಯೇ ಆಲಸ್ಯದ ಮೊದಲ ಮದ್ದು. ಹಕ್ಕಿ ಗೂಡು ಬಿಡುವ ಮುನ್ನ ಎದ್ದು, ಪುಸ್ತಕದ ಗೆಳತನ ಬೆಳೆಸಿ, ದಣಿವಿಗೆ ವಿಶ್ರಾಂತಿಯ ಮುತ್ತಿಕ್ಕಿ ಬದುಕನ್ನು ರೂಪಿಸಿಕೊಳ್ಳಬೇಕು. ನಾಳೆಯೆಂಬ ಮಾಯೆಯನ್ನು ನಂಬದೆ ಇಂದೇ ಸಣ್ಣ ಸಣ್ಣ ಗುರಿಗಳ ಮೆಟ್ಟಿಲು ಹತ್ತಬೇಕು. ಪ್ರತಿ ಮೆಟ್ಟಿಲೂ ಆತ್ಮವಿಶ್ವಾಸದ ಕಳಶವನ್ನೇ ತುಂಬುತ್ತದೆ.**




# ಉಸಿರಿನೊಳಗಿನ ಅಮೃತಧಾರೆ: ಚಕ್ರಾಸನ


ಡಾ. ಈರಪ್ಪ ಲಕ್ಷ್ಮಣ ಫುಸ್ತಿ

ಯೋಗವು ಪ್ರಕೃತಿಯ ಮಡಿಲಲ್ಲಿ ಅರಳಿದ ಆರೋಗ್ಯ ವಿಜ್ಞಾನ. ಅದರಲ್ಲೂ ಚಕ್ರಾಸನವು ಉಸಿರಾಟದ ವ್ಯವಸ್ಥೆಗೆ ಜೀವಕಳೆ ತುಂಬುವ ಅಪೂರ್ವ ಭಂಗಿ.

ಚಕ್ರದಂತೆ ಕಮಾನಾದ ದೇಹದಲ್ಲಿ ಎದೆ ಪಂಜರವು ಮುಗಿಲಂತೆ ವಿಸ್ತರಿಸಿ, ಶ್ವಾಸಕೋಶದ ಕಣಕಣವೂ ಪ್ರಾಣವಾಯುವಿನಿಂದ ತುಂಬಿಕೊಳ್ಳುತ್ತದೆ. ಅಸ್ತಮಾ, ಬ್ರಾಂಕೈಟಿಸ್, ಅಲರ್ಜಿಯ ಉಸಿರುಗಟ್ಟುವಿಕೆಗೆ ಇದು ದಿವ್ಯ ಔಷಧ. ನಿತ್ಯದ ನಿಷ್ಠೆಯ ಅಭ್ಯಾಸದಿಂದ ಡಯಾಫ್ರಮ್ ಎಂಬ ಉಸಿರಾಟದ ಆಧಾರ ಸ್ನಾಯು ಗಟ್ಟಿಗೊಂಡು, ಆಳವಾದ ಶ್ವಾಸ ಸಹಜ ಕ್ರಿಯೆಯಾಗುತ್ತದೆ.

ಆಗ ದೇಹದ ಪ್ರತಿ ಜೀವಕೋಶಕ್ಕೂ ಶುದ್ಧ ಆಮ್ಲಜನಕದ ಅಮೃತ ಸಿಂಚನವಾಗುತ್ತದೆ.ಬಾಗಿದ ಬೆನ್ನಿನ ಈ ಆಸನವು ಬೆನ್ನುಹುರಿಗೆ ಬಳುಕುವ ಲಾವಣ್ಯ ನೀಡಿ, ನರನಾಡಿಗಳಲ್ಲಿ ಸುಪ್ತ ಚೈತನ್ಯವನ್ನು ಎಚ್ಚರಿಸುತ್ತದೆ.

ಎದೆ, ಭುಜ, ಕುತ್ತಿಗೆಯ ಬಿಗಿತದ ಗಂಟುಗಳನ್ನು ಸಡಿಲಿಸಿ, ಪ್ರಾಣಶಕ್ತಿಯ ನಿರಾಳ ಹರಿವಿಗೆ ಹೆಬ್ಬಾಗಿಲು ತೆರೆಯುತ್ತದೆ. ಚಿಂತೆಯ ಕಾರ್ಮುಗಿಲು ಸರಿದು, ಮನದಂಗಳದಲ್ಲಿ ನೆಮ್ಮದಿಯ ಬೆಳದಿಂಗಳು ಹರಡುತ್ತದೆ. ದೇಹವೆಲ್ಲಾ ಹೊಸ ಹುರುಪಿನಿಂದ ತುಂಬಿ, ದಿನಪೂರ್ತಿ ಲವಲವಿಕೆಯ ಕಾರಂಜಿ ಚಿಮ್ಮುತ್ತದೆ. ಉಸಿರಾಟದ ಸಮಸ್ಯೆ ಇರುವವರು ನುರಿತ ಗುರುಗಳ ಮಾರ್ಗದರ್ಶನದಲ್ಲಿ, ಹೆಜ್ಜೆ ಹೆಜ್ಜೆಗೂ ಎಚ್ಚರದಿಂದ ಈ ಆಸನವನ್ನು ಅಭ್ಯಸಿಸಬೇಕು.ಗರ್ಭಿಣಿಯರು, ಬಾಣಂತಿಯರು, ತೀವ್ರ ಬೆನ್ನು ನೋವು, ಮಣಿಕಟ್ಟಿನ ದೌರ್ಬಲ್ಯ, ಕಾರ್ಪಲ್ ಟನಲ್ ಸಿಂಡ್ರೋಮ್, ಕಡಿಮೆ ರಕ್ತದೊತ್ತಡ, ಹೃದಯ ಸಂಬಂಧಿ ಕಾಯಿಲೆ ಇರುವವರು ಈ ಆಸನ ವರ್ಜಿಸಬೇಕು. ತಲೆಸುತ್ತು, ವಾಕರಿಕೆ ಕಾಣಿಸಿಕೊಂಡರೆ ತಕ್ಷಣ ನಿಲ್ಲಿಸಿ. ಕುತ್ತಿಗೆಗೆ ಭಾರ ಬೀಳದಂತೆ ಜಾಗ್ರತೆ ವಹಿಸಿ. ಯಾವುದೇ ಆಸನವನ್ನು ವೈದ್ಯರ ಸಮ್ಮತಿ ಮತ್ತು ಯೋಗ ಗುರುಗಳ ನೇರ ಮಾರ್ಗದರ್ಶನವಿಲ್ಲದೆ ಆರಂಭಿಸಬಾರದು. ಯೋಗದ ಹಾದಿಯಲ್ಲಿ ತಾಳ್ಮೆಯೇ ಸಾಧನೆಯ ಮೆಟ್ಟಿಲು.



**ಯೋಗ ಮ್ಯಾಟ್ ಮೇಲೆ ಬೆನ್ನು ಹಾಸಿ ಮಲಗಿ. ಮೊಣಕಾಲುಗಳನ್ನು ಮಡಚಿ ಹಿಮ್ಮಡಿಗಳನ್ನು ಸೊಂಟದ ಬಳಿಗೆ ತನ್ನಿ. ಅಂಗೈಗಳನ್ನು ಕಿವಿಯ ಪಕ್ಕ ನೆಲಕ್ಕೂರಿ, ಬೆರಳುಗಳು ಭುಜದ ದಿಕ್ಕಿಗೆ ಇರಲಿ. ಆಳ ಉಸಿರೆಳೆದು, ಅಂಗೈ ಪಾದಗಳನ್ನು ದೃಢವಾಗಿ ಒತ್ತುತ್ತಾ ಸೊಂಟ, ಬೆನ್ನು, ಎದೆಯನ್ನು ಮೇಲಕ್ಕೆ ಎತ್ತಿ.**


**ತಲೆಯನ್ನು ಹಿಂದಕ್ಕೆ ಸಡಿಲವಾಗಿ ಬಿಟ್ಟು, ದೇಹವನ್ನು ಮನೋಹರ ಚಕ್ರದಂತೆ ಬಾಗಿಸಿ. ಸಹಜ ಉಸಿರಿನೊಂದಿಗೆ 15 ಸೆಕೆಂಡು ನೆಲೆನಿಲ್ಲಿ. ಇಳಿಯುವಾಗ ಗಲ್ಲವನ್ನು ಎದೆಗೆ ತಾಗಿ, ಬೆನ್ನನ್ನು ನಿಧಾನವಾಗಿ ನೆಲಕ್ಕಿಳಿಸಿ. ನಂತರ**



ಲೇಖಕರು
ಚನ್ನೇಗೌಡ ಉಜ್ಜನಿ ಚಲುವಯ್ಯ
ಲೇಖಕರು,
ಕನ್ನಡ ಪರ ಚಿಂತಕರು

# ಗರುಡ ಪುರಾಣದ ಪ್ರಕಾರ ಊಟ ಎಲ್ಲಿ ಮಾಡಬೇಕು, ಎಲ್ಲಿ ಮಾಡಬಾರದು? ಫಲಗಳೇನು?

ನಾವು ವಾಸಿಸುವ ಪರಿಸರದಲ್ಲಿ ದುಷ್ಟರು, ಅನ್ಯಾಯದಿಂದ ಹಣಗಳಿಸಿ ದವರು, ವಿಪರೀತ ಬಡ್ಡಿ ವಸೂಲಿ ಮಾಡುವವರು, ದುರಹಂಕಾರಿಗಳು, ಹಾಗೆಯೇ ಹೆಂಡತಿ, ಮಕ್ಕಳನ್ನು, ತಂದೆ ತಾಯಿ, ವೃದ್ಧರನ್ನು ಅಥವಾ ಪಶು ಪಕ್ಷಿಗಳನ್ನು ಹಿಂಸಿಸುವವರ ಮನೆಯಲ್ಲಿ ಊಟ ಮಾಡಬಾರದು. ಇಂತಹ ಸ್ಥಳಗಳಲ್ಲಿ ಸೇವಿಸಿದ ಆಹಾರವು ನಮ್ಮ ವಂಶಕ್ಕೆ ತೊಂದರೆಯನ್ನು ತರಬಹುದು ಎಂದು ಶಾಸ್ತ್ರಗಳು ಹೇಳುತ್ತವೆ. ಇದಕ್ಕೆ ವ್ಯತಿರಿಕ್ತವಾಗಿ, ಪ್ರಾಮಾಣಿಕವಾಗಿ ದುಡಿದು ಊಟ ಮಾಡುವ



ಶ್ರಮಜೀವಿಗಳ ಮನೆಯಲ್ಲಿ ಒಂದು ತುತ್ತು ಅನ್ನ ಸೇವಿಸುವುದು ಪುಣ್ಯಕರ. ಅಲ್ಲಿ ಭಗವಂತನ ಆವಾಸವಿರುತ್ತದೆ ಮತ್ತು ನಮಗೆ ಒಳ್ಳೆಯದಾಗುತ್ತದೆ. ನಮ್ಮ ಪಂಚಭೂತಗಳು ಮತ್ತು ಸಪ್ತಚಕ್ರಗಳು ಆಹಾರವನ್ನು ಸ್ವೀಕರಿಸಲು, ಆ ಆಹಾರವು ಶುದ್ಧವಾಗಿರಬೇಕು.

ಊಟ ಮಾಡುವಾಗ ಅದನ್ನು ಭಗವಂತನಿಗೆ ಅರ್ಪಿಸಿ ಸ್ವೀಕರಿಸಬೇಕು.

ಈ ನಿಯಮಗಳು ನಂಬಿಕೆಯ ಆಧಾರದ ಮೇಲೆ ನಮ್ಮ ಜೀವನಕ್ಕೆ ಸಕಾರಾತ್ಮಕ ಶಕ್ತಿಯನ್ನು ತರಲು ಸಹಕಾರಿ ಎಂದು ಗುರು ಹಿರಿಯರು ಪೂಜ್ಯರು ಹೇಳಿದ್ದಾರೆ.



ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು


# ಭಾರತ ರತ್ನ ಹಾಗೂ ಹಂಗಾಮಿ ಮಾಜಿ ಪ್ರಧಾನಿ ಗುಲ್ಜಾರಿ ಲಾಲ್‌ನಂದರವರ 128ನೇ ವರ್ಷದ ಜನ್ಮಜಯಂತಿ

**ಸತ್ಯಾಗ್ರಹದಲ್ಲಿ ಪಾಲ್ಗೊಂಡಿದಕ್ಕಾಗಿ ಮೂರು ವರ್ಷಗಳ ಕಾಲ ಸೆರೆಮನೆ ವಾಸವನ್ನು ಅನುಭವಿಸುವಂತಾಯಿತು.1937 ರಲ್ಲಿ ಮುಂಬೈ ಶಾಸನ ಸಭಾ ಸದಸ್ಯರಾಗಿ ಚುನಾಯಿತರಾದರು. ಮುಂದೆ ಮುಂಬೈ ಸರ್ಕಾರದ ಪಾರ್ಲಿಮೆಂಟರಿ ಕಾರ್ಯದರ್ಶಿಯಾಗಿ, ಅನಂತರದಲ್ಲಿ ಕಾರ್ಮಿಕ ಮಂತ್ರಿಗಳಾದರು.**

ಗುಲ್ಜಾರಿಲಾಲ್‌ನಂದರವರು 1898 ಜುಲೈ 04 ರಂದು ಪಂಜಾಬಿನ ಸಿಯಲ್ಕೋಟ್ ಎಂಬಲ್ಲಿ ಜನಿಸಿದರು. ಅವರ ವಿದ್ಯಾಭ್ಯಾಸ ಲಾಹೋರ್, ಆಗ್ರಾ ಮತ್ತು ಅಲಹಾಬಾದ್ ನಡೆಯಿತು. ಅವರು ಅಲಹಾಬಾದ್ ವಿಶ್ವವಿದ್ಯಾಲಯದಲ್ಲಿ ಕಾರ್ಮಿಕರ ಸಮಸ್ಯೆಗಳ ಬಗ್ಗೆ ಸಂಶೋಧನಾತ್ಮಕ ಅಭ್ಯಾಸ ನಡೆಸಿದರು. ಆ ಬಳಿಕ ಮುಂಬೈ ವಿಶ್ವವಿದ್ಯಾಲಯದಲ್ಲಿ ಅರ್ಥಶಾಸ್ತ್ರದ ಪ್ರಾಧ್ಯಾಪಕರಾದರು. ನಂತರ ಅಸಹಕಾರ ಚಳುವಳಿಯಲ್ಲಿ ಭಾಗವಹಿಸಿದರು. ಅಹಮದಾಬಾದ್ ಬಟ್ಟೆಗಿರಣಿ ಕಾರ್ಮಿಕ ಸಂಘದ ಕಾರ್ಯದರ್ಶಿಗಳಾಗಿದ್ದರು.

1947 ರಲ್ಲಿ ನಂದ ಅವರು ಜಿನೀವಾದಲ್ಲಿ ನಡೆದ ಅಂತರಾಷ್ಟ್ರೀಯ ಕಾರ್ಮಿಕರ ಸಮ್ಮೇಳನದಲ್ಲಿ ಸರ್ಕಾರದ ಪ್ರತಿನಿಧಿಗಳಾಗಿ ಭಾಗವಹಿಸಿದ್ದರು. ಅವರು ಸ್ವೀಡನ್, ಫ್ರಾನ್ಸ್, ಬೆಲ್ಜಿಯಂ ಮತ್ತು ಇಂಗ್ಲೆಂಡ್ ದೇಶಗಳಲ್ಲಿ ಸಂಚರಿಸಿ ಅಲ್ಲಿನ ಕಾರ್ಮಿಕರ ಸ್ಥಿತಿಗತಿಗಳನ್ನು ಅರಿತರು.

1950 ರಲ್ಲಿ ರಾಷ್ಟ್ರೀಯ ಯೋಜನಾ ಮಂಡಳಿಯ ಉಪಾಧ್ಯಕ್ಷರಾದರು. ಬಳಿಕ ನಂದವರನ್ನು ಕೇಂದ್ರ ಸಚಿವ ಸಂಪುಟದಲ್ಲಿ ಯೋಜನಾ ಮಂತ್ರಿಯಾಗಿ ನೇಮಕ ಮಾಡಲಾಯಿತು ಜೊತೆಗೆ ನೀರಾವರಿ ಮತ್ತು ವಿದ್ಯುತ್ ಖಾತೆಗಳ ಹೊಣೆಗಾರಿಕೆಯನ್ನು ಅವರಿಗೆ ನೀಡಲಾಗಿತ್ತು.



1952 ,1957, 1962 ಮತ್ತು 1977 ರಲ್ಲಿ ನಡೆದ ಲೋಕಸಭೆ ಮಹಾಚುನಾವಣೆಯಲ್ಲಿ ಮುಂಬೈ ಮತ್ತು ಗುಜರಾತ್ ಕ್ಷೇತ್ರದಿಂದ ಸ್ಪರ್ಧಿಸಿ ಆಯ್ಕೆಯಾಗಿ ಕೇಂದ್ರದಲ್ಲಿ ಕಾರ್ಮಿಕ- ಉದ್ಯೋಗ ಮತ್ತು ಯೋಜನಾ ಮಂತ್ರಿ ಹಾಗೂ ಗೃಹಮಂತ್ರಿ ಆಗಿದ್ದರು. 1964ರಲ್ಲಿ ಪ್ರಧಾನಿ ನೆಹರು ಅವರ ನಿಧನದಿಂದಾಗಿ ನಂದ ಅವರು ತಾತ್ಕಾಲಿಕವಾಗಿ ಭಾರತದ ಪ್ರಧಾನ ಮಂತ್ರಿಗಳಾದರು ಮತ್ತೊಮ್ಮೆ ಪ್ರಧಾನಿ ಶಾಸ್ತ್ರಿಯವರು 1966 ರಲ್ಲಿ ನಿಧನದಿಂದಾಗಿ ಅವರು ಪುನಹ ತಾತ್ಕಾಲಿಕವಾಗಿ ಪ್ರಧಾನಮಂತ್ರಿಗಳಾದರು. ನಂದಾ ಅವರು ಗಾಂಧೀಜಿಯವರ ಅನುಯಾಯಿಗಳಾಗಿದ್ದು, ಗಾಂಧಿ ತತ್ವಗಳನ್ನು ತಮ್ಮ ಬದುಕಿನುದ್ದಕ್ಕೂ ಕಟ್ಟುನಿಟ್ಟಾಗಿ ಅನುಸರಿಸಿದರು. ಅವರದು ಸರಳ,ಶುದ್ಧ,ನಿಸ್ವಾರ್ಥ, ಪ್ರಾಮಾಣಿಕ ಬದುಕಾಗಿತ್ತು. 1997 ರಲ್ಲಿ ಭಾರತ ಸರ್ಕಾರ ಭಾರತರತ್ನ ಪ್ರಶಸ್ತಿ ನೀಡಿ ಗೌರವಿಸಿತು. 1998 ಜನವರಿ 15 ರಂದು ಗುಲ್ಜಾರಿ ಲಾಲ್ ನಂದಾ ಅವರು ಅಹಮದಾಬಾದ್ ನಲ್ಲಿ ವಯೋಸಹಜವಾಗಿ ನಿಧನಹೊಂದಿದರು. ಆಗ ಅವರು ಶತಾಯುಷಿ ಗಳಾಗಿದ್ದರು.

ಗುಲ್ಜಾರಿ ಲಾಲ್ ನಂದಾ ರವರು ಶ್ರೇಷ್ಠ ವ್ಯಕ್ತಿತ್ವ ಹಾಗೂ ಉತ್ತಮ ಮಾನವೀಯ ಗುಣವುಳ್ಳವರು ಹಾಗೂ ದಕ್ಷ ಪ್ರಮಾಣಿಕ ಆಡಳಿತಗಾರರಾಗಿದ್ದರು. ನಂದರವರ 128ನೇ ವರ್ಷದ ಜನ್ಮ ಜಯಂತಿಯ ದಿನವಾದ ಇಂದು ಭಾರತೀಯರಾದ ನಾವುಗಳು ಸ್ಮರಿಸಿ ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲೆಂದು ಆ ಭಗವಂತನಲ್ಲಿ ಪ್ರಾರ್ಥಿಸೋಣ.



ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

# ಸರ್ವಧರ್ಮ ಸಮನ್ವಯ ಆರಾಧಕರು, ಕರ್ಮಯೋಗಿ, ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರವರ 124 ನೇ ವರ್ಷದ ಪುಣ್ಯಸ್ಮರಣೆ

**ಇಂಗ್ಲೆಂಡಿನ ಜನತೆ ಅವರನ್ನ ಹಿಂದೂ ಧರ್ಮದ ಮಹಾ ಬೋಧಕ ಎಂದು ಕರೆದು ಗೌರವಿಸಿದರು. ಸ್ವಾಮಿ ವಿವೇಕಾನಂದರು ತತ್ವಜ್ಞಾನಿಗಳು,ದೈವಭಕ್ತರು, ಕರ್ಮಯೋಗಿಗಳು,ಸಮಾಜ ಸುಧಾರಕರು,ದೇಶಭಕ್ತರು, ವೈಚಾರಿಕ ದೃಷ್ಟಿ ಉಳ್ಳವರಾಗಿದ್ದು ಭಾರತೀಯರಲ್ಲಿರುವ ಲೋಪದೋಷಗಳನ್ನು ಬೆರಳು ಮಾಡಿ ತೋರಿಸಿದರು. ಅವುಗಳಿಗೆ ಪರಿಹಾರವನ್ನೂ ಸೂಚಿಸಿದರು.**

ಸ್ವಾಮಿ ವಿವೇಕಾನಂದರವರು 1863 ಜನವರಿ 12 ರಂದು ಕಲ್ಕತ್ತಾ ನಗರದಲ್ಲಿ ತಂದೆ ವಿಶ್ವನಾಥದತ್ತ ,ತಾಯಿ ಭುವನೇಶ್ವರಿದೇವಿರವರ ಮಗನಾಗಿ ಜನಿಸುತ್ತಾರೆ. ಪ್ರಾರಂಭದಲ್ಲಿ ಮಗುವಿಗೆ ನರೇಂದ್ರನಾಥದತ್ತ ಎಂದು ಹೆಸರಿಟ್ಟರು.ಬಾಲ್ಯದಲ್ಲಿ ಸಂಸ್ಕಾರ, ಸನ್ಮಾರ್ಗ ಮತ್ತು ಶಿಸ್ತು ಕಲಿತು ಗುಣಮಟ್ಟದ ಶಿಕ್ಷಣದ ಜೊತೆಗೆ ರಾಮಾಯಣ, ಮಹಾಭಾರತದ ಕಥೆಗಳನ್ನು ಅಧ್ಯಯನ ಮಾಡಿ ಅರ್ಥೈಸಿಕೊಂಡಿದ್ದರು. ಕಾಲೇಜು ಶಿಕ್ಷಣ ಪಡೆಯುತ್ತಿದ್ದಾಗಲೇ ಚರಿತ್ರೆ, ಸಾಹಿತ್ಯ ,ತತ್ವಶಾಸ್ತ್ರ ಅಧ್ಯಯನ ಮಾಡುತ್ತಾ ವೇದ-ಉಪನಿಷತ್ತುಗಳನ್ನು ಕಲಿತು ಕರಗತ ಮಾಡಿಕೊಂಡಿದ್ದರು. ದಕ್ಷಿಣೇಶ್ವರಕ್ಕೆ ಪ್ರಯಾಣ ಬೆಳೆಸಿ ಶ್ರೀ ರಾಮಕೃಷ್ಣ ಪರಮಹಂಸರನ್ನು ಭೇಟಿಯಾದರು.ಮುಂದೆ ಅವರು ಅವರ ಶಿಷ್ಯರಾಗಿ ಸನಾತನ ಹಿಂದೂ ಧರ್ಮದ ಉದ್ದಾರ ಶಕ್ತಿ ಬೆಳೆಯಲು ಶ್ರಮಿಸಿದರು. ಅವರುಗಳಿಸಿದ ಆಧ್ಯಾತ್ಮಿಕ ಅನುಭವವನ್ನು ನರೇಂದ್ರರಿಗೆ ಧಾರೆಎರೆದರು. ನಂತರ ನರೇಂದ್ರರವರು ಸನ್ಯಾಸತ್ವವನ್ನು ಸ್ವೀಕರಿಸಿ ಸ್ವಾಮಿ ವಿವೇಕಾನಂದರಾದರು. ಸಕಲ ಪಾಂಡಿತ್ಯವನ್ನು ಅಪಾರವಾಗಿಗಳಿಸಿಕೊಂಡು ಪ್ರಾಪಂಚಿಕ ಜ್ಞಾನ,ಆಧ್ಯಾತ್ಮಿಕ ಧ್ಯಾನ, ಸಚ್ಚಾರಿತ್ರ್ಯವುಳ್ಳ, ಚರಿತ್ರಾರ್ಹ ಗುಣಗಳನ್ನು ಮೈಗೂಡಿಸಿಕೊಂಡು ಬಡತನ,ಅಜ್ಞಾನ,ಆಲಸ್ಯಗಳು ತಾಂಡವವಾಡುತ್ತಿರುವುದನ್ನು ಮನಗಂಡು ಪರಿಹಾರ ಹುಡುಕಲು ಶ್ರಮಿಸಿದರು.

ಗುರುವಿಗೆ ತಕ್ಕ ಶಿಷ್ಯರಾಗಿ ಪರಿಣಮಿಸಿದರು.1893ರಲ್ಲಿ ಅಮೇರಿಕಾದ ಚಿಕಾಗೋ ನಗರದಲ್ಲಿ ನಡೆಯುವ ಸರ್ವಧರ್ಮಸಮ್ಮೇಳನದಲ್ಲಿ ಭಾಗವಹಿಸಿ ಅಲ್ಲಿ ಸಭೆಯನ್ನುದ್ದೇಶಿಸಿ, ಅಮೇರಿಕಾದ ಸಹೋದರ, ಸಹೋದರಿಯರೇ ಎಂದು ಅತ್ಯಂತ ಆತ್ಮೀಯವಾಗಿ ಸಂಭೋದಿಸಿ ಭಾಷಣ ಮಾಡಿದ ವಿವೇಕಾನಂದರು ವಿಸ್ಮಯ ಹುಟ್ಟಿಸಿದರು. ಹಾಗೂ ಇಡೀ ಸಭೆ ಮೂಕವಿಸ್ಮಿತರಾಗಿ ತಟ್ಟಿದ ಚಪ್ಪಾಳೆಯ ಧ್ವನಿ ಮುಗಿಲುಮುಟ್ಟಿತ್ತು. ವಿವೇಕಾನಂದರು ತಿಳಿಸಿದ ಮತ ಸಹಿಷ್ಣತೆ, ಸಮಾನತೆ, ಪರಸ್ಪರ ಸೌಹಾರ್ದ ಈ ವಿಚಾರಗಳನ್ನು ಕೇಳಿ ಅಮೇರಿಕಾ ದೇಶದ ಜನರಿಗೆ ಅತಿಯಾದ ಆನಂದವಾಯಿತು. ಅಮೆರಿಕ,ಇಂಗ್ಲೆಂಡ್, ಯುರೋಪ್ ರಾಷ್ಟ್ರಗಳಲ್ಲಿ ಸಂಚರಿಸಿ ಹಿಂದೂ ಧರ್ಮದ ಶ್ರೇಷ್ಠತೆಯನ್ನು ಕುರಿತು ಅನೇಕ ಉಪನ್ಯಾಸಗಳನ್ನು ಮಾಡಿದರು. ಅಸಹಕಾರ, ಅಸೂಯೆ,ಆಲಸ್ಯ,ಅಧಿಕಾರ ಲಾಲಸೆ,ಜಾತೀಯತೆ,ವರ್ಗ ವ್ಯತ್ಯಾಸ, ಪ್ರಾದೇಶಿಕ ಅಂದಾಭಿಮಾನ,ಸ್ತ್ರೀಯರ ಬಗ್ಗೆ ಅನಾಧರ ಇವುಗಳನ್ನು ಖಂಡಿಸಿದರು.ಇವರ ಕೆಲವು ಅಮರವಾಣಿಗಳು ಏಳಿರಿ !ಎಚ್ಚರವಾಗಿರಿ! ಗುರಿ ಮುಟ್ಟುವವರೆಗೂ ನಿಲ್ಲದಿರಿ !ಯಾವ ಕೆಲಸವೂ ಲೌಕಿಕವಲ್ಲ, ಎಲ್ಲಾ ಕೆಲಸವೂ ಒಂದು ಪ್ರಾರ್ಥನೆ,ಒಂದು ಪೂಜೆ, ಇದೊಂದು ಅದ್ಭುತ ಸತ್ಯ. ಬಲವೇ ಜೀವನ, ದೌರ್ಬಲ್ಯವೇ ಮರಣ. ಜೀವನ ಪ್ರತಿಯೊಬ್ಬ ಜೀವಿಗೂ ದೇವರು ಕೊಟ್ಟ ವರ,ಅದನ್ನು ಅಲ್ಲಗೆಳೆಯಬೇಡಿ ಸಾಹಸ, ಸಂತೋಷ ಮತ್ತು ಶಾಂತಿಯಿಂದ ಬಾಳಿ.

ನನ್ನ ಜೀವನಕ್ಕೆ ನಾನೇ ಹೊಣೆಗಾರ, ನನ್ನ ಶುಭಕ್ಕು ನಾನೇ ಕಾರಣ, ಅಶುಭಕ್ಕೂ ನಾನೇ ಕಾರಣ.ನಮಗಿಂದು ಪುರುಷಸಿಂಹ ರನ್ನು ನಿರ್ಮಿಸುವ ಧೈರ್ಯಬೇಕು. ಪುರುಷಸಿಂಹರನ್ನು ನಿರ್ಮಿಸುವ ಸಿದ್ಧಾಂತಗಳುಬೇಕು. ಪುರುಷಸಿಂಹರನ್ನಾಗಿ, ಸರ್ವತೋಮುಖಿಗಳನ್ನಾಗಿ ಮಾಡುವ ಶಿಕ್ಷಣಬೇಕು. ದೈಹಿಕವಾಗಿ, ಮಾನಸಿಕವಾಗಿ, ಆಧ್ಯಾತ್ಮಿಕವಾಗಿ ಯಾವುದು ದುರ್ಬಲರನ್ನಾಗಿ



ಮಾಡುವುದೋ ಅದನ್ನ ವಿಷದಂತೆ ತ್ಯಜಿಸಿ. ಸಾವಿರ ಸಲ ಆದರ್ಶವನ್ನು ನಿಮ್ಮ ಮುಂದಿರಿಸಿಕೊಳ್ಳಿ, ಸಾವಿರ ಸಲ ಸೋತರೂ ಮತ್ತೊಮ್ಮೆ ಪ್ರಯತ್ನಿಸಿ. ಹೀಗೆ ಸ್ವಾಮಿ ವಿವೇಕಾನಂದರು ಭಾರತೀಯರನ್ನು ಎಚ್ಚರಿಸಿ ಅವರಲ್ಲಿ ಹೊಸ ಹುರುಪು,ಚೈತನ್ಯವನ್ನು ತುಂಬಿದರು. ಹೀಗೆ ಸ್ವಾಮಿ ವಿವೇಕಾನಂದರ ವಿಚಾರಗಳು ಜಗತ್ತಿಗೆ ಶಕ್ತಿ ಸಂಜೀವಿನಿ ಹಾಗೂ ಅಜರಾಮರವಾಗಿವೆ. ಅವರ ಸಿಂಹ ವಾಣಿಯನ್ನು ಆಲಿಸಿ ಮನನ ಮಾಡಿದಾಗ ವಿಶ್ವರೂಪದರ್ಶನದಂಥ ಅನುಭವವಾಗುತ್ತದೆ. ಅವರ ವಿಚಾರಧಾರೆ ಮಾನವ ಬದುಕಿಗೆ ಸ್ಫೂರ್ತಿಯ ಚಿಲುಮೆಯಾಗಿ ಬೆಳಕಿನ ಮಾರ್ಗಗಳಾಗಿವೆ.

ಇಂತಹ ಮಹಾನ್ ಚೇತನ 1902 ಜುಲೈ,04 ರಂದು ಅಮರ ಸಮಾಧಿ ಹೊಂದಿದರು.ಆಗ ಅವರಿಗೆ ಕೇವಲ 39 ವರ್ಷ ವಯಸ್ಸಾಗಿತ್ತು. ಈ ಅಲ್ಪ ಅವಧಿಯಲ್ಲಿಯೇ ಈ ಮಹಾಚೇತನ ಮಾಡಿದ ಸಾಧನೆಗಳಿಸಿದ ಸಿದ್ಧಿ ಅಪಾರ,ಅನಂತ ಅದೊಂದು ಎಂದಿಗೂ ನಂದಲಾರದ ದೇದೀಪ್ಯಮಾನವಾದ ಜ್ಞಾನಜ್ಯೋತಿ. ಭಾರತೀಯರಾದ ನಾವುಗಳು ಅವರನ್ನು ಸ್ಮರಿಸಿ, ನೆನೆಯುತ್ತಾ ,ಅವರ ವಿಚಾರಧಾರೆಗಳನ್ನು, ಆದರ್ಶಗಳನ್ನು ಹಾಗೂ ತತ್ವಸಿದ್ಧಾಂತಗಳನ್ನು ಜೀವನದ ಬದುಕಿನಲ್ಲಿ ಅಳವಡಿಸಿಕೊಂಡು ಅವರ ಬದುಕು ನಮ್ಮೆಲ್ಲರಿಗೂ ಸ್ಫೂರ್ತಿ ಆಗಬೇಕಾಗಿದೆ. ಮಹಾನ್ ದೈವ ಸಂಭೂತ ಸ್ವಾಮಿ ವಿವೇಕಾನಂದರ 124 ನೇ ವರ್ಷದ ಪುಣ್ಯ ಸ್ಮರಣೆಯ ದಿನವಾದ ಇಂದು ಅವರನ್ನು ಸ್ಮರಿಸುವ ಸ್ಮರಣೀಯ ದಿನ.

# ಉತ್ತರ ಭಾರತದಲ್ಲಿ ಅಡುಗೆಗೆ ವ್ಯಾಪಕವಾಗಿ ಸಾಸಿವೆ ಎಣ್ಣೆ ಬಳಕೆ

ಸಾಸಿವೆ ಎಣ್ಣೆಯನ್ನು ಅದರಲ್ಲೂ ಹೆಚ್ಚಾಗಿ ಉತ್ತರ ಭಾರತದ ಜನರ ಅಡುಗೆಮನೆಗಳ ಅವಿಭಾಜ್ಯ ಅಂಗವಾಗಿದೆ. ಬಹುತೇಕ ಭಾರತೀಯರ ಮನೆಗಳಲ್ಲಿ ಸಾಸಿವೆ ಎಣ್ಣೆಯನ್ನು ಬಳಸಿ ವಿವಿಧ ಆಹಾರಗಳನ್ನು ತಯಾರಿಸಲಾಗುತ್ತದೆ. ಈ ಎಣ್ಣೆಯಿಂದ ಬಳಕೆ ಮಾಡಿ ತಯಾರಿಸಿದ ಅಡುಗೆಗಳು ರುಚಿ, ಸಂಪ್ರದಾಯವಾಗಿವೆ. ಅನೇಕ ವರ್ಷಗಳಿಂದ ಉತ್ತರ ಮತ್ತು ಪೂರ್ವ ಭಾರತದಲ್ಲಿ ವಿಶೇಷವಾಗಿ ಬಿಹಾರ, ಪಶ್ಚಿಮ ಬಂಗಾಳ, ಜಾರ್ಖಂಡ್, ಒಡಿಶಾ ಮತ್ತು ಪಂಜಾಬ್‌ನಂತಹ ರಾಜ್ಯಗಳಲ್ಲಿ ಸಾಸಿವೆ ಎಣ್ಣೆಯನ್ನು ಅಡುಗೆ ಮಾಡಲು ಮತ್ತು ಉಪ್ಪಿನಕಾಯಿ ಮಾಡಲು ಹಾಗೂ ವಿವಿಧ ಸಾಂಪ್ರದಾಯಿಕ ಭಕ್ಷ್ಯಗಳನ್ನು ತಯಾರಿಸಲು ಉಪಯೋಗ ಮಾಡಲಾಗುತ್ತದೆ.

ಸಾಸಿವೆ ಎಣ್ಣೆಯ ಕಟುವಾದ ಸುವಾಸನೆ ಹಾಗೂ ವಿಶಿಷ್ಟ ಸುವಾಸನೆಯು ಇತರ ಅಡುಗೆ ಎಣ್ಣೆಗಳಿಂದ ಪ್ರತ್ಯೇಕಿಸುತ್ತದೆ. ಇದಲ್ಲದೇ, ಅನೇಕ ಜನರು ಇದನ್ನು ಆರೋಗ್ಯಕ್ಕೆ ಪ್ರಯೋಜನಕಾರಿ ಎಂದು ಪರಿಗಣಿಸುತ್ತಾರೆ. ಆದರೆ, ಅಮೆರಿಕದಲ್ಲಿ ಸಾಸಿವೆ ಎಣ್ಣೆಯಿಂದ ಅಡುಗೆ ಮಾಡುವುದನ್ನು ನಿರ್ಬಂಧಿಸಲಾಗಿದೆ. ಅಮೆರಿಕ ಆಹಾರ ಮತ್ತು ಔಷಧ ಆಡಳಿತ ಎಫ್‌ಡಿಎ ತಿಳಿಸುವ ಪ್ರಕಾರ, ಸಾಸಿವೆ ಎಣ್ಣೆ ಆರೋಗ್ಯಕ್ಕೆ ಹಾನಿಕಾರಕವಾಗಿದೆ. ಪ್ರಾಥಮಿಕವಾಗಿ ಸಾಸಿವೆ ಎಣ್ಣೆಯಲ್ಲಿ ಯುರುಸಿಕ್ ಆಮ್ಲದ ಇರುವುದರಿಂದ ಅಡುಗೆಗಾಗಿ ಬಳಕೆ ಮಾಡುವುದನ್ನು ನಿರ್ಬಂಧ ಹೇರಲಾಗಿದೆ.ಎಫ್‌ಡಿಎ ಪ್ರಕಾರ, ಸಾಸಿವೆ ಎಣ್ಣೆಯಲ್ಲಿ ಹೆಚ್ಚಿನ ಮಟ್ಟದ ಯುರುಸಿಕ್ ಆಮ್ಲ ಇರುವುದು ಕಂಡ ಬಂದಿದೆ. ಸಾಸಿವೆ ಎಣ್ಣೆಯಲ್ಲಿ



ಕಂಡುಬರುವ ಯುರುಸಿಕ್ ಆಮ್ಲದ ಮಟ್ಟಗಳ ಬಗ್ಗೆ ಅಮೆರಿಕ ಬಹಳ ಹಿಂದಿನಿಂದಲೂ ಹಲವು ಬಾರಿ ಎಚ್ಚರಿಕೆ ನೀಡಿತ್ತು. ಈ ಕಾರಣದಿಂದಾಗಿ ಹಲವು ವಿಧದ ಸಾಸಿವೆ ಎಣ್ಣೆಗಳನ್ನು ಸೇವಿಸಲು ಅನುಮೋದಿಸಲಾಗಿಲ್ಲ.

ಅಮೆರಿಕದಲ್ಲಿ ಸಾಸಿವೆ ಎಣ್ಣೆಯನ್ನು ಸಂಪೂರ್ಣವಾಗಿ ನಿಷೇಧ ಮಾಡಿಲ್ಲ. ಆದರೆ, ಇದನ್ನು ಅಡುಗೆ ಎಣ್ಣೆಯಾಗಿ ಬಳಕೆ ಮಾಡುವುದಕ್ಕೆ ಅನುಮೋದನೆ ಪಡೆದಿಲ್ಲ. ಆದರೆ, ಈ ಎಣ್ಣೆಯನ್ನು ಬಾಹ್ಯ ಬಳಕೆಗೆ ಮಾತ್ರ ಬಳಕೆ ಮಾಡಬಹುದು. ಅಮೆರಿಕದಲ್ಲಿ ಸಾಸಿವೆ ಎಣ್ಣೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿಲ್ಲ.

ಸಾಸಿವೆ ಎಣ್ಣೆಯ ಬಳಕೆ ಮಾಡುವ ಕುರಿತು ಅಮೆರಿಕನಲ್ಲಿ ನಿರ್ದಿಷ್ಟ ನಿಯಮಗಳಿವೆ. 1970ರ ದಶಕದಲ್ಲಿ ಇಲಿಗಳನ್ನು ಒಳಗೊಂಡ ಅಧ್ಯಯನಗಳನ್ನು ನಡೆಸಲಾಯಿತು. ಸಾಸಿವೆ ಎಣ್ಣೆಯ ಸೇವನೆಯಿಂದ ಉಂಟಾಗುವ ಹೆಚ್ಚಿನ ಮಟ್ಟದ ಯುರುಸಿಕ್ ಆಮ್ಲವು ಹಾನಿಕಾರಕವಾಗಿದೆ ಎಂದು ಅಧ್ಯಯನದಿಂದ ಕಂಡುಬಂದಿದೆ.

ಯುರುಸಿಕ್ ಆಮ್ಲವು ಸಾಸಿವೆ ಹಾಗೂ ಇತರ ಕೆಲವು ಬೀಜಗಳಲ್ಲಿ ಕಂಡುಬರುವ ನೈಸರ್ಗಿಕವಾಗಿ ಕಂಡುಬರುವ ಕೊಬ್ಬಿನಾಮ್ಲವಾಗಿದೆ. ಹಿಂದಿನ ಪ್ರಾಣಿ ಅಧ್ಯಯನಗಳು ಹೃದಯದ ಮೇಲೆ ಹೆಚ್ಚಿನ ಮಟ್ಟದ ಯುರೂಸಿಕ್ ಆಮ್ಲದ ಸಂಭಾವ್ಯ ಪರಿಣಾಮದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದವು. ಹೆಚ್ಚಿನ ಪ್ರಮಾಣದಲ್ಲಿ ಯುರೂಸಿಕ್ ಆಮ್ಲವನ್ನು ಸೇವಿಸುವುದರಿಂದ ಹೃದಯ ಸ್ನಾಯುಗಳಲ್ಲಿ ಕೊಬ್ಬು ಸಂಗ್ರಹವಾಗಬಹುದು.

ಈ ಸ್ಥಿತಿಯನ್ನು ಮಯೋಕಾರ್ಡಿಯಲ್ ಲಿಪಿಡೋಸಿಸ್ ಎಂದು ಕರೆಯಲಾಗುತ್ತದೆ. ಈ ಅಧ್ಯಯನಗಳ ಆಧಾರದ ಮೇಲೆ, ಅಮೆರಿಕ ಹಾಗೂ ಹಲವಾರು ಪಾಶ್ಚಿಮಾತ್ಯ ರಾಷ್ಟ್ರಗಳು ಸಾಸಿವೆ ಎಣ್ಣೆಯನ್ನು ಸೇವನೆಗೆ ಅಸುರಕ್ಷಿತ ಎಂದು ಪರಿಗಣಿಸಿವೆ ಜೊತೆಗೆ ಅಡುಗೆ ಎಣ್ಣೆಯಾಗಿ ಅದರ ಬಳಕೆಯನ್ನು ನಿಷೇಧಿಸಿವೆ.

ಸಾಸಿವೆ ಸಂಬಂಧಿತ ಉತ್ಪನ್ನಗಳನ್ನು ಅಮೆರಿಕದಲ್ಲಿ ನಿಷೇಧಿಸಲಾಗಿಲ್ಲ.

ಸಾಸಿವೆ ಬೀಜಗಳು, ಕಡಿಮೆ ಯುರೂಸಿಕ್ ಆಮ್ಲ ಪ್ರಭೇದಗಳಿಂದ ತಯಾರಿಸಿದ ಉತ್ಪನ್ನಗಳು ಮತ್ತು ನಿರ್ದಿಷ್ಟ ನಿಯಮಗಳನ್ನು ಅನುಸರಿಸುವ ಆಹಾರ ಉತ್ಪನ್ನಗಳನ್ನು ಬಳಕೆ ಮಾಡಬಹುದು. ಸಾಸಿವೆ ಎಣ್ಣೆಯನ್ನು ಅದರ ಸಾಂಪ್ರದಾಯಿಕ ರುಚಿಗಾಗಿ ಭಾರತದಲ್ಲಿ ಬಳಸಲಾಗುತ್ತದೆ.

# ಜವಳಿ ಪಾರ್ಕ್ ಅಭಿವೃದ್ಧಿಗೆ ಕ್ರಮವಹಿಸಲು ಸಂಪುಟ ನಿರ್ಣಯ: ಗೃಹ ಸಚಿವ ಪ್ರಿಯಾಂಕ್ ಖರ್ಗೆ

• ಉದಯವಾಹಿನಿ ಕಲಬುರಗಿ

ಮುಖ್ಯಮಂತ್ರಿಗಳ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಕಲಬುರಗಿ ಜಿಲ್ಲೆಯ ಮಹತ್ವಾಕಾಂಕ್ಷೆಯ ಜವಳಿ ಪಾರ್ಕ್‌ನ್ನು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಅಭಿವೃದ್ಧಿಪಡಿಸಲು ಕ್ರಮ ವಹಿಸುವಂತೆ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

1000 ಎಕರೆ ಪ್ರದೇಶದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಈ ಜವಳಿ ಪಾರ್ಕ್ ಸುಮಾರು 1,700 ಕೋಟಿ ಯೋಜನಾ ಮೊತ್ತದೊಂದಿಗೆ ಅಭಿವೃದ್ಧಿಪಡಿಸಲಾಗುವುದು. 320 ಕೋಟಿ ವೆಚ್ಚದಲ್ಲಿ ಮೊದಲ ಹಂತದ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಿದೆ.

ಕಲಬುರಗಿಯ ನಂದಿಸಿನ್ನೂರು, ಕಿರಣಗಿ ಗ್ರಾಮಗಳಲ್ಲಿ 1000 ಎಕರೆಯನ್ನು ಕೈಮಗ್ಗ ಮತ್ತು ಜವಳಿ ಇಲಾಖೆಯಡಿಯಲ್ಲಿ ಅಭಿವೃದ್ಧಿಪಡಿಸಲಾಗುತ್ತದೆ. ಪಿಎಂ ಮಿತ್ರ ಪಾರ್ಕ್ ಯೋಜನೆಯಡಿಯಲ್ಲಿನ 500 ಕೋಟಿ ಬಂಡವಾಳ ಸಹಾಯಧನ ಬಳಸಿಕೊಳ್ಳುವುದರೊಂದಿಗೆ ಕೆಐಎಡಿಬಿ ಅನುದಾನದೊಂದಿಗೆ ಜವಳಿ ಪಾರ್ಕಿನ ಅಭಿವೃದ್ಧಿಗೆ ವೇಗ ನೀಡಲಾಗುವುದು.

ಈ ಜವಳಿ ಪಾರ್ಕ್‌ ನಿಂದ ಅಂದಾಜು 1 ಲಕ್ಷ ಜನರಿಗೆ ನೇರ ಉದ್ಯೋಗ ಮತ್ತು ಅಂದಾಜು 2 ಲಕ್ಷ ಪರೋಕ್ಷ ಉದ್ಯೋಗಾವಕಾಶಗಳು ಸೃಷ್ಟಿ ನಿರೀಕ್ಷೆ ಇದೆ. ಈಗಾಗಲೇ ಹಲವು ಜವಳಿ ಉದ್ಯಮಗಳು ಕಲಬುರಗಿ ಜವಳಿ ಪಾರ್ಕಿನಲ್ಲಿ ಬಂಡವಾಳ ಹೂಡಿಕೆಗೆ ಮುಂದೆ ಬಂದಿರುವುದು ಈ ಯೋಜನೆ ಯಶಸ್ಸಿನತ್ತ ಮುನ್ನಡೆಯುವ ಸಕಾರಾತ್ಮಕ ಸೂಚನೆ ಯಾಗಿದೆ.

# ದಕ್ಷಿಣ ಕನ್ನಡ, ಉಡುಪಿಯಲ್ಲಿ ಭಾರೀ ಮಳೆ: ಆರೆಂಜ್ ಅಲರ್ಟ್ ಘೋಷಣೆ

## ದಟ್ಟವಾದ ಕಪ್ಪು ಮೋಡಗಳು ಕವಿದಿದ್ದರೂ, ಕೇವಲ ಸಾಧಾರಣ ತುಂತುರು ಮಳೆಯಷ್ಟೇ ಕಂಡುಬಂದಿದೆ

• ಉದಯವಾಹಿನಿ ಮಂಗಳೂರು:

ಭಾರತೀಯ ಹವಾಮಾನ ಇಲಾಖೆ ಮತ್ತು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ, ಜಿಲ್ಲೆಯಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ನೀಡಿ 'ಆರೆಂಜ್ ಅಲರ್ಟ್' ಘೋಷಿಸಿರುವ ಹಿನ್ನೆಲೆಯಲ್ಲಿ, ಮುಂಜಾಗ್ರತಾ ಕ್ರಮವಾಗಿ ದಕ್ಷಿಣ

1 : ಮೋಡ ಕವಿದ ವಾತಾವರಣ
2 : ಮುನ್ನೆಚ್ಚರಿಕೆಯಲ್ಲಿ ಜಿಲ್ಲಾಡಳಿತ
3 : ಶಾಲಾ-ಕಾಲೇಜುಗಳಿಗೆ ರಜೆ

ಕನ್ನಡ ಜಿಲ್ಲೆಯ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಿಗೆ ರಜೆ ಘೋಷಿಸಲಾಗಿದೆ. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿಗಳು ಈ ಬಗ್ಗೆ ಅಧಿಕೃತ ಪ್ರಕಟಣೆ ಹೊರಡಿಸಿದ್ದು, ಜುಲೈ 3, ಶುಕ್ರವಾರ ಜಿಲ್ಲೆಯ ಎಲ್ಲಾ ಅಂಗನವಾಡಿ ಕೇಂದ್ರಗಳು, ಪ್ರಾಥಮಿಕ ಮತ್ತು ಪ್ರೌಢಶಾಲೆಗಳು, ಸರ್ಕಾರಿ ಅನುದಾನಿತ ಮತ್ತು ಖಾಸಗಿ ಶಾಲೆಗಳು ಹಾಗೂ ಪದವಿ ಪೂರ್ವ (ಪಿಯು) ಕಾಲೇಜುಗಳಿಗೆ (12ನೇ ತರಗತಿವರೆಗೆ) ರಜೆ ಘೋಷಿಸಲಾಗಿದೆ.

ಅಧಿಕೃತ ಪ್ರಕಟಣೆಯಲ್ಲಿ ಸಾರ್ವಜನಿಕರ ಸುರಕ್ಷತೆಗಾಗಿ ಜಿಲ್ಲಾಡಳಿತವು ಹಲವು ಕಟ್ಟುನಿಟ್ಟಿನ ಮುಂಜಾಗ್ರತಾ ಕ್ರಮಗಳನ್ನು


ಉದಯವಾಹಿನಿ ಚಿತ್ರ

ಕೈಗೊಳ್ಳಲು ಸೂಚಿಸಿದೆ ನೀರು ಇರುವ ತಗ್ಗು ಪ್ರದೇಶ, ಕೆರೆ, ನದಿ ತೀರ ಮತ್ತು ಸಮುದ್ರ ತೀರಕ್ಕೆ ಮಕ್ಕಳು ಹೋಗದಂತೆ ಪೋಷಕರು ಕಡ್ಡಾಯವಾಗಿ ಜಾಗ್ರತೆ ವಹಿಸಬೇಕು. ಸಮುದ್ರದಲ್ಲಿ ಹವಾಮಾನ ವೈಪರೀತ್ಯ ಇರುವುದರಿಂದ ಮೀನುಗಾರರು ಯಾವುದೇ ಕಾರಣಕ್ಕೂ ಸಮುದ್ರಕ್ಕೆ ಇಳಿಯಬಾರದು ಎಂದು ಸೂಚಿಸಲಾಗಿದೆ.

ಪ್ರವಾಸಿಗರು ಹಾಗೂ ಸಾರ್ವಜನಿಕರು ನದಿ ತೀರ ಮತ್ತು ಸಮುದ್ರ ತೀರಗಳಿಗೆ ತೆರಳದಂತೆ ಕಟ್ಟುನಿಟ್ಟಿನ ನಿರ್ಬಂಧ ಹೇರಲಾಗಿದೆ. ಉಡುಪಿ ಭಾರತೀಯ ಹವಾಮಾನ ಇಲಾಖೆ ಕರಾವಳಿ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ನೀಡಿ 'ರೆಡ್ ಅಲರ್ಟ್' ಘೋಷಿಸಿದ್ದರೂ, ಉಡುಪಿ ನಗರದ ಸುತ್ತಮುತ್ತ ಗುರುವಾರ

> ಹವಾಮಾನ ಇಲಾಖೆಯ ಮುನ್ಸೂಚನೆ ಪ್ರಕಾರ ಪಶ್ಚಿಮ ಘಟ್ಟಗಳ ತಳಭಾಗದಲ್ಲಿ ಮತ್ತು ಕಡಲ ತೀರದಲ್ಲಿ ಯಾವುದೇ ಕ್ಷಣದಲ್ಲೂ ಭಾರಿ ಮಳೆಯಾಗುವ ಸಾಧ್ಯತೆ ಇರುವುದರಿಂದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದ್ದು, ತಗ್ಗು ಪ್ರದೇಶದ ಜನರಿಗೆ ಎಚ್ಚರಿಕೆಯಿಂದ ಇರುವಂತೆ ಸೂಚಿಸಲಾಗಿದೆ.
>
> -ಜಿಲ್ಲಾಡಳಿತ

ನಿರೀಕ್ಷಿತ ಮಟ್ಟದಲ್ಲಿ ಮಳೆ ದಾಖಲಾಗಿಲ್ಲ. ನೆರೆಯ ದಕ್ಷಿಣ ಕನ್ನಡ (ಮಂಗಳೂರು) ಮತ್ತು ಉತ್ತರ ಕನ್ನಡ (ಕಾರವಾರ) ಜಿಲ್ಲೆಗಳಲ್ಲಿ ಬುಧವಾರ ರಾತ್ರಿಯಿಂದಲೇ ಭಾರಿ ಮಳೆಯಾಗಿದ್ದರಿಂದ ಮುಂಜಾಗ್ರತಾ ಕ್ರಮವಾಗಿ ಅಲ್ಲಿನ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿತ್ತು.

ಆದರೆ ಉಡುಪಿಯಲ್ಲಿ ಮಾತ್ರ ಹವಾಮಾನ ಇಲಾಖೆಯ ಮುನ್ಸೂಚನೆ ಸಂಪೂರ್ಣ ನಿಜವಾಗದೆ ಮಳೆರಾಯ ಕಣ್ಣಾಮುಚ್ಚಾಲೆ ಆಡಿದ್ದಾನೆ. ಜಿಲ್ಲೆಯಾದ್ಯಂತ ಮುಂಜಾನೆಯಿಂದಲೇ ದಟ್ಟವಾದ ಕಪ್ಪು ಮೋಡಗಳು ಕವಿದಿದ್ದರೂ, ಕೇವಲ ಸಾಧಾರಣ ತುಂತುರು ಮಳೆಯಷ್ಟೇ ಕಂಡುಬಂದಿದೆ. ಮಧ್ಯಾಹ್ನದ ವೇಳೆಗೆ ಕೆಲವು

### ನಿರೀಕ್ಷಿತ ಪ್ರಮಾಣದಲ್ಲಿ ಮಳೆ

ಮಳೆಯ ಕೊರತೆಯು ಕರಾವಳಿಯ ರೈತಾಪಿ ವರ್ಗದಲ್ಲಿ ತೀವ್ರ ಕಳವಳ ಮೂಡಿಸಿದೆ. ಜೂನ್ ತಿಂಗಳ ಆರಂಭದಲ್ಲೂ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೆ ಕರಾವಳಿ ಭಾಗದಲ್ಲಿ ಶೇಕಡಾವಾರು ಮಳೆ ಕೊರತೆ ಎದುರಾಗಿತ್ತು, ಸದ್ಯದ ಪರಿಸ್ಥಿತಿ ಕೂಡ ಅದೇ ಮುನ್ಸೂಚನೆಯನ್ನು ನೀಡುವಂತಿದೆ.

ಕಡೆಗಳಲ್ಲಿ ಬಿಸಿಲಿನ ವಾತಾವರಣ ತಲೆದೂರಿತ್ತು. ರೆಡ್ ಅಲರ್ಟ್ ಇರುವುದರಿಂದ ಭಾರಿ ಗಾಳಿ-ಮಳೆಯಾಗಬಹುದು ಎಂದು ನಿರೀಕ್ಷೆಯಲ್ಲಿದ್ದ ಜನರಿಗೆ ಸದ್ಯದ ಹವಾಮಾನ ಕಳವಳ ಸೃಷ್ಟಿಸಿದೆ. ಹವಾಮಾನ ತಜ್ಞರ ಪ್ರಕಾರ, ಕರಾವಳಿ ತೀರದಲ್ಲಿ ಬೀಸುತ್ತಿರುವ ತೀವ್ರ ಗಾಳಿಯ ಕಾರಣದಿಂದಾಗಿ ಮಳೆ ಮೋಡಗಳು ನಗರ ಪ್ರದೇಶಗಳಲ್ಲಿ ನಿಲ್ಲದೆ ಪಶ್ಚಿಮ ಘಟ್ಟಗಳ ಕಡೆಗೆ ಚಲಿಸುತ್ತಿವೆ.


ಹೀಗಾಗಿ ಕರಾವಳಿಯ ಬಯಲು ಸೀಮೆಯಲ್ಲಿ ಮಳೆ ಕಡಿಮೆಯಾಗಿ ಕಾಣಿಸುತ್ತಿದೆ. ಮುಂಬರುವ ದಿನಗಳಲ್ಲಿ ಮುಂಗಾರು ಮತ್ತೆ ಚುರುಕುಗೊಳ್ಳುವ ಸಾಧ್ಯತೆ ಇದ್ದು, ಸಾರ್ವಜನಿಕರು ಸಾಮಾಜಿಕ ಜಾಲತಾಣಗಳ ವದಂತಿಗಳಿಗೆ ಕಿವಿಗೊಡದೆ ಅಧಿಕೃತ ಪ್ರಕಟಣೆಗಳನ್ನು ಗಮನಿಸಬೇಕಾಗಿ ಜಿಲ್ಲಾಡಳಿತ ವಿನಂತಿಸಿದೆ.

# ನೆಹರು ಪ್ರಧಾನಿ ಆಸೆಗಾಗಿ ಭಾರತ ವಿಭಜನೆ ಆಯಿತು: ಬಸವರಾಜ ಬೊಮ್ಮಾಯಿ

• ಉದಯವಾಹಿನಿ ಹಾವೇರಿ:

ನೆಹರು ಪ್ರಧಾನಿ ಆಸೆಗಾಗಿ ಭಾರತ ವಿಭಜನೆ ಆಯಿತು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಶುಕ್ರವಾರ ಹೇಳಿದರು ಎಸ್.ಐ.ಆರ್ ಪ್ರಕ್ರಿಯೆ ಸಭೆಯಲ್ಲಿ ಮಾತನಾಡಿದ ಬಸವರಾಜ ಬೊಮ್ಮಾಯಿ, ಶ್ಯಾಮ್ ಪ್ರಸಾದ್ ಮುಖರ್ಜಿಯವರು ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಸಂಪೂರ್ಣವಾಗಿ ತಮ್ಮನ್ನು ತಾವು ತೊಡಗಿಸಿಕೊಂಡವರಾಗಿದ್ದರು. ನೆಹರೂ ಅವರ ಮೊದಲನೇ ರಾಷ್ಟ್ರೀಯ ಸರ್ಕಾರದಲ್ಲಿ ಕ್ಯಾಬಿನೆಟ್ ಸಚಿವರಾಗಿದ್ದರು ಎಂದು ತಿಳಿಸಿದರು.

1952 ರ ಪೂರ್ವದಲ್ಲಿ ರಾಷ್ಟ್ರೀಯ ಸರ್ಕಾರ ರಚನೆಯಾದಾಗ ಚುನಾಯಿತ ಸರ್ಕಾರ ಇರಲಿಲ್ಲ. ದೇಶದ ವಿವಿಧ ಭಾಗದಲ್ಲಿ ಇರುವಂತಹ ಅತ್ಯಂತ ಪ್ರಭಾವಿ ಚಿಂತಕರು ಮತ್ತು ದೇಶದ ಬಗ್ಗೆ ಸಂಪೂರ್ಣವಾಗಿ ಎಲ್ಲಾ ರೀತಿಯ ವಿಚಾರಗಳನ್ನು ತಿಳಿದುಕೊಂಡು ಹೋಗಿರುವಂತಹ ಮೇಧಾವಿಗಳಿಗೆ ಅಲ್ಲಿ ಕ್ಯಾಬಿನೆಟ್ ದರ್ಜೆ ಕೊಟ್ಟಿತ್ತು. ಅದರಲ್ಲಿ ಬಾಬಾಸಾಹೇಬ್ ಅಂಬೇಡ್ಕರ್ ಅವರು ಕೂಡ ಇದ್ದರು. ಸೋಶಿಯಲಿಸ್ಟ್ ಪಾರ್ಟಿಯ ಜನರು ಇದ್ದರು. ಕಮ್ಯುನಿಸ್ಟ್ ಪಾರ್ಟಿಯ ಡಾಂಗೆ ಅಂತಹ ಮೇಧಾವಿಗಳಿದ್ದ ಕ್ಯಾಬಿನೆಟ್‌ನಲ್ಲಿ ಬಂಗಾಳದ ಶ್ಯಾಮ್ ಪ್ರಸಾದ್ ಮುಖರ್ಜಿ ಅವರು ಇಡೀ ಭಾರತದ ಒಂದು ಕಲ್ಪನೆಯನ್ನು ಇಟ್ಟುಕೊಂಡು ಹೋರಾಟ ಮಾಡಿದ್ದರು ಎಂದು ಸ್ಮರಿಸಿದರು. ಶ್ರೀರಾಮಚಂದ್ರನ ಪೂಜೆ ಶ್ರೀಲಂಕಾದಲ್ಲೂ ಆಗುತ್ತೆ, ನೇಪಾಳದಲ್ಲೂ ಆಗುತ್ತದೆ, ಭೂತಾನದಲ್ಲೂ ಆಗುತ್ತದೆ. ಬುದ್ಧನ ಒಂದು ಪ್ರಾರ್ಥನೆ ಅಫ್ಘಾನಿಸ್ತಾನದಲ್ಲೂ ಆಗುತ್ತದೆ. ಪಾಕ್ ಆಕ್ರಮಿತ ಕಾಶ್ಮೀರದಲ್ಲಂತೂ ಸಾವಿರಾರು ಹಿಂದೂ ದೇವಸ್ಥಾನಗಳಿವೆ. ಆದರೆ



ಉದಯವಾಹಿನಿ ಚಿತ್ರ

> ಅಖಂಡ ಭಾರತ ಅಂತ ಅಂದರೆ ಈಗೇನು ಪಾಕ್ ಆಕ್ರಮಿತ ಕಾಶ್ಮೀರ ಅಂತ ಕರೆಯುತ್ತಾರೆ, ಅಲ್ಲಿಂದ ಹಿಡಿದು ಭೂತಾನ್ ಬರ್ಮಾವರೆಗೂ ದಕ್ಷಿಣದಲ್ಲಿ ಶ್ರೀಲಂಕಾವರೆಗೂ ಇತ್ತು. ಇವತ್ತಿಗೂ ಈ ಎಲ್ಲಾ ದೇಶದಲ್ಲಿ ನಮ್ಮ ಆದಿ ಸಂಸ್ಕೃತಿ ಮತ್ತು ದೇವರು ದೇವಸ್ಥಾನದ ಪೂಜೆ ಆಗುತ್ತಿದೆ ಎಂದು ಹೇಳಿದರು.
>
> -ಸಂಸದ ಬಸವರಾಜ ಬೊಮ್ಮಾಯಿ

ದೇಶ ವಿಭಜನೆ ವೇಳೆ ಕಾಂಗ್ರೆಸ್ಸಿನ ನಾಯಕರು ವಿಶೇಷವಾಗಿ ಜವಾಹರಲಾಲ್ ನೆಹರು ವಿಭಜಿತ ಭಾರತದ ಪ್ರಧಾನಮಂತ್ರಿಯಾಗುವಂತಹ ಒಂದು ಮಹದಾಸೆಯಿಂದ, ರಾಜಿ ಪಂಚಾಯಿತಿ ಮಾಡಿ ದೇಶ ವಿಭಜನೆ ಆಯಿತು, ಸ್ವತಂತ್ರ ಬಂತು ಎಂದು ಹೇಳಿದರು.

# ಮಳೆಗಾಗಿ ಕಪ್ಪೆ, ಕತ್ತೆ ಮದುವೆ

• ಉದಯವಾಹಿನಿ ನವಲಗುಂದ,:

ತಾಲ್ಲೂಕಿನ ಶಿರೂರು ಗ್ರಾಮದಲ್ಲಿನ ರೈತರು ಕಪ್ಪೆ ಹಾಗೂ ಕತ್ತೆಗಳಿಗೆ ಮದುವೆ ಮಾಡಿಸಿ, ವರುಣರಾಯ ಕೃಪೆ ತೋರಿ ಮಳೆ ಸುರಿಸುವಂತೆ ಪ್ರಾರ್ಥನೆ ಸಲ್ಲಿಸಿದರು.ಮಳೆ ಇಲ್ಲದೆ ತತ್ತರಿಸಿರುವ ರೈತರು ವರುಣರಾಯನ ಪ್ರಾರ್ಥನೆಗೆ ಈ ಪ್ರಯೋಗ ನಡೆಸಿದ್ದಾರೆ. ಮಳೆಇಲ್ಲದೆ ಬೆಳೆಗಳು ಒಣಗುತ್ತಿವೆ. ಯುಗಾದಿಗೆ ಹಿಂದೇಳು, ಮುಂದೇಳು ದಿನ ಮಳೆ ಬರುತ್ತದೆ ಎಂಬುದು ನಂಬಿಕೆ. ಈ ಬಾರಿ ಯುಗಾದಿ ತಡವಾಗಿ ಬಂದಿದ್ದರೂ ಮಳೆ ಬರದ ಕಾರಣ ಗ್ರಾಮಸ್ಥರು ಕಪ್ಪೆ, ಕತ್ತೆಗಳ ಮದುವೆಯೊಂದಿಗೆ ದೇವರ ಮೊರೆ ಹೋಗಿದ್ದಾರೆ. ಎರಡು ಕಪ್ಪೆಗಳಿಗೆ ಹಾಗೂ ಎರಡು ಕತ್ತೆಗಳಿಗೆ ಹೂವು ಮುಡಿಸಿ, ಜೊತೆಯಾಗಿ ಇರಿಸಿ ಅರಸಿನದ ಕೊಂಬು ಕಟ್ಟಿಸುವ ಮೂಲಕ ಮದುವೆ ಮಾಡಿಸಿದರು. ವರುಣ ದೇವನಿಗೆ ಪೂಜೆ ಸಲ್ಲಿಸಿ ಮಳೆಸುರಿಸಿ ಬೆಳೆ, ಜನ-ಜಾನುವಾರು, ಪ್ರಾಣಿ, ಪಕ್ಷಿ ಸಂಕುಲಗಳನ್ನು ಉಳಿಸುವಂತೆ ಗ್ರಾಮದ ಜನರು ಪ್ರಾರ್ಥಿಸಿದರು. ನಂತರ ಅನ್ನಸಂತರ್ಪಣೆ ನಡೆಸಿದರು. ಬರದ ಸಮಯದಲ್ಲಿ ಹಿರಿಯರು ಮಾಡುತ್ತಿದ್ದಂತೆ ಸಂಪ್ರದಾಯಬದ್ಧವಾಗಿ ಕಪ್ಪೆ, ಕತ್ತೆಗಳಿಗೆ ಮದುವೆ ಮಾಡಿಸಿ, ಮಳೆರಾಯನನ್ನು ಪ್ರಾರ್ಥಿಸಿದ್ದೇವೆ' ಎಂದು ಗ್ರಾಮಸ್ಥರು ತಿಳಿಸಿದರು. ಶಿರೂರು ಗ್ರಾಮಸ್ಥರಲ್ಲದೆ ಸುತ್ತಮುತ್ತಲಿನ ಗ್ರಾಮದ ಜನರು ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ

# ನಾಡಪ್ರಭು ಕೆಂಪೇಗೌಡರ ದೂರದೃಷ್ಟಿಯ ಯೋಜನೆಗಳು ಇಂದಿಗೂ ಪ್ರಸ್ತುತ

• ಉದಯವಾಹಿನಿ ಧಾರವಾಡ, :

ಕರ್ನಾಟಕ ಇತಿಹಾಸದಲ್ಲಿ ಬಹಳಷ್ಟು ರಾಜ-ಮಹಾರಾಜರು ಆಗಿಹೋಗಿದ್ದಾರೆ. ಆದರೆ ಕೆಂಪೇಗೌಡರು ಬೆಂಗಳೂರು ನಗರ ನಿರ್ಮಾಣ ಮಾಡುವ ಮೂಲಕ ಇಂದು ವಿಶ್ವದ ಭೂಪಟದಲ್ಲಿ ಬೆಂಗಳೂರು ಎದ್ದು ಕಾಣುವಂತೆ ಮಾಡಿದ ಕೀರ್ತಿ ಕೆಂಪೇಗೌಡರಿಗೆ ಸಲ್ಲುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು. ಅವರು ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು. ನಾಡಪ್ರಭು ಶ್ರೀ ಕೆಂಪೇಗೌಡ ಅವರು 500 ವರ್ಷಗಳ ಹಿಂದೆ ಹಾಕಿಕೊಟ್ಟ ದೂರದೃಷ್ಟಿಯ ಯೋಜನೆಗಳು ಕರ್ನಾಟಕಕ್ಕೆ ಇಂದಿಗೂ ಪ್ರಸ್ತುತವಾಗಿವೆ. ಕೆಂಪೇಗೌಡರ ಸರ್ವಧರ್ಮ ಸಮನ್ವಯತೆ, ಯೋಜನಾಬದ್ಧ ನಗರ ನಿರ್ಮಾಣ ಕಾರ್ಯ, ಕೃಷಿ ಪರಿಸರ ಬೆಳವಣಿಗೆಗೆ ಜಾರಿಗೆ ತಂದ ನೀತಿಗಳು, ವ್ಯಾಪಾರ, ವಾಣಿಜ್ಯ, ಉದ್ಯೋಗಕ್ಕಾಗಿ ಅವರು ಅಂದು ಹಾಕಿಕೊಟ್ಟ ಯೋಜನೆಗಳೇ


ಉದಯವಾಹಿನಿ ಚಿತ್ರ

ಇಂದಿಗೂ ಮಾದರಿಯಾಗಿವೆ. ಬೆಂಗಳೂರನ್ನು ಜಾಗತಿಕ ಮಟ್ಟದಲ್ಲಿ ಗುರುತಿಸಲು ಕಾರಣ ಕೆಂಪೇಗೌಡರ ಕೊಡುಗೆಗಳು ಎಂದರು. ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ವರದಶ್ರೀ ಫೌಂಡೇಶನ ಸಂಸ್ಥಾಪಕ ಮಲ್ಲಿಕಾರ್ಜುನ ರಡ್ಡೇರ, ಹಾಗೂ ಕಾರ್ಯದರ್ಶಿ ಸಿದ್ದು ಸಿರಸಂಗಿ ಅವರು ನಾಡಪ್ರಭು ಶ್ರೀ ಕೆಂಪೇಗೌಡರ ಕುರಿತು ವಿಶೇಷ ಉಪನ್ಯಾಸ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿದರು. ಜಯಲಕ್ಷ್ಮೀ ಹೆಚ್. ಅವರು ಕಾರ್ಯಕ್ರಮ ನಿರೂಪಿಸಿದರು.


ವಿವಿಧ ಕನ್ನಡಪರ ಸಂಘಟನೆಗಳ ಸದಸ್ಯರು, ಸಂಘ-ಸಮಾಜದ ಮುಖಂಡರು, ಕಲಾವಿದರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ವಾಣಿಜ್ಯ ಮಳಿಗೆಗಳ ಕಟ್ಟಡ ಕಾಮಗಾರಿಗೆ ನಿರ್ಮಾಣಕ್ಕೆ ಚಾಲನೆ

• ಉದಯವಾಹಿನಿ ನರೇಗಲ್ಲ, :

ನರೇಗಲ್ಲ ಪಟ್ಟಣದ ಬಸ್ ನಿಲ್ದಾಣದ ರಸ್ತೆಬದಿಯಲ್ಲಿ ನಿರ್ಮಿಸಲಾಗುತ್ತಿರುವ ವಾಣಿಜ್ಯ ಮಳಿಗೆಗಳ ಕಟ್ಟಡ ಕಾಮಗಾರಿಗೆ ಭೂಮಿಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಲಾಯಿತು. ರೋಣ ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ್ ಜಿ. ಪಾಟೀಲ, ಮಾತನಾಡಿ, ಕಾಮಗಾರಿಯನ್ನು ಗುಣಮಟ್ಟದೊಂದಿಗೆ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಬೇಕು ಎಂದು ಗುತ್ತಿಗೆದಾರರಿಗೆ ಸೂಚಿಸಿದರು.

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ ಹಾಗೂ ರೋಣದ ಮಹಾಲಕ್ಷ್ಮೀ ಕನ್‌ಸ್ಟ್ರಕ್ಷನ್ ಆಶ್ರಯದಲ್ಲಿ ಈ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಬಸ್ ನಿಲ್ದಾಣದ ಸುತ್ತಮುತ್ತ ವಾಣಿಜ್ಯ ಮಳಿಗೆಗಳು ನಿರ್ಮಾಣವಾಗುವುದರಿಂದ ಪಟ್ಟಣದ ವ್ಯಾಪಾರ ವಹಿವಾಟು ಮತ್ತಷ್ಟು ವೃದ್ಧಿಯಾಗಲಿದೆ. ವ್ಯಾಪಾರಿಗಳಿಗೆ ಸುರಕ್ಷಿತ ಹಾಗೂ ಸುಸಜ್ಜಿತ ಮಳಿಗೆಗಳು ದೊರೆಯುವುದರಿಂದ ಮಳೆ, ಗಾಳಿ ಹಾಗೂ ಬಿಸಿಲಿನ ತೊಂದರೆ ಇಲ್ಲದೆ ವ್ಯಾಪಾರ ನಡೆಸಲು ಅನುಕೂಲವಾಗಲಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

ನರೇಗಲ್ಲ ಪಟ್ಟಣ ವೇಗವಾಗಿ ಅಭಿವೃದ್ಧಿ ಹೊಂದುತ್ತಿದ್ದು, ವ್ಯಾಪಾರದ ವಿಸ್ತರಣೆ ಹಾಗೂ ಬಸ್ ನಿಲ್ದಾಣದ ಸುತ್ತಮುತ್ತ ವ್ಯವಸ್ಥಿತ ವಾಣಿಜ್ಯ ಚಟುವಟಿಕೆಗಳಿಗೆ ಮಳಿಗೆಗಳ ಅಗತ್ಯವಿತ್ತು. ಈ ಹಿನ್ನೆಲೆಯಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮವು ವಾಣಿಜ್ಯ ಮಳಿಗೆಗಳನ್ನು ನಿರ್ಮಿಸುತ್ತಿರುವುದು ಸ್ವಾಗತಾರ್ಹ ಬೆಳವಣಿಗೆಯಾಗಿದೆ. ಕಾಮಗಾರಿ ವೇಳೆ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು ಎಂದು ಅವರು ತಿಳಿಸಿದರು.ಕಾರ್ಯಕ್ರಮದಲ್ಲಿ ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಪ್ಪ ಬೆಟಗೇರಿ, ಸಂಜು ದೊಡ್ಡಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗ್ರಾಮೀಣ ವಿದ್ಯಾರ್ಥಿಗಳು ಆತ್ಮವಿಶ್ವಾಸ ಬೆಳೆಸಿಕೊಳ್ಳಲಿ : ಡಾ. ದೀಪಕ ಶಿಂಧೆ

• ಉದಯವಾಹಿನಿ ವಿಜಯಪುರ, :

ಪ್ರಪಂಚದಲ್ಲಿಯೇ ಭಾರತೀಯರು ಮಾತನಾಡುವ ಇಂಗ್ಲೀಷ್ ಭಾಷೆ ಪರಿಪೂರ್ಣ ಹಾಗೂ ಪರಿಶುದ್ಧವಾಗಿದೆ ಎಂದು ಪರಿಗಣಿಸಲಾಗುತ್ತದೆ ಎಂದು ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಇಂಗ್ಲೀಷ್ ವಿಭಾಗದ ಮುಖ್ಯಸ್ಥರು ಹಾಗೂ ಮೌಲ್ಯಮಾಪನ ಉಪಕುಲಸಚಿ ಡಾ. ದೀಪಕ ಶಿಂಧೆ ಹೇಳಿದರು.

ನಗರದ ಸಿಕ್ಯಾಬ್ ಶಿಕ್ಷಣ ಸಂಸ್ಥೆಯ ವ್ಯವಹಾರ ಅಧ್ಯಯನ (ಬಿಬಿಎ) ಕಾಲೇಜಿನ ಆಶ್ರಯದಲ್ಲಿ ಆಯೋಜಿಸಿದ್ದ 'ಇಂಗ್ಲೀಷ್ ವ್ಯಾಕರಣ ಶಾಲೆ' ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಇಂಗ್ಲೀಷ್ ಇಂದು ಅಂತರರಾಷ್ಟ್ರೀಯ ಭಾಷೆಯಾಗಿದ್ದು, ಶಿಕ್ಷಣ, ಉದ್ಯೋಗ ಹಾಗೂ ತಾಂತ್ರಿಕ ಕ್ಷೇತ್ರಗಳಲ್ಲಿ ಅದರ ಬಳಕೆ ಹೆಚ್ಚಾಗಿದೆ ಎಂದು ಹೇಳಿದರು. ಕನ್ನಡ, ಉರ್ದು, ಮರಾಠಿ ಸೇರಿದಂತೆ ಮಾತೃಭಾಷೆಯಲ್ಲಿ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಪರಿಶ್ರಮ ಮತ್ತು ಆತ್ಮವಿಶ್ವಾಸದಿಂದ ಇಂಗ್ಲೀಷ್ ಮಾಧ್ಯಮದ ವಿದ್ಯಾರ್ಥಿಗಳಿಗಿಂತಲೂ ಉತ್ತಮ ಸಾಧನೆ ಮಾಡಬಹುದು ಎಂದು ತಿಳಿಸಿದ ಅವರು, ಗ್ರಾಮೀಣ ವಿದ್ಯಾರ್ಥಿಗಳು ಕೀಳರಿಮೆ ಹಾಗೂ ಹಿಂಜರಿಕೆಯನ್ನು ತೊರೆದು ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಪ್ರತಿದಿನ ಇಂಗ್ಲೀಷ್ ಪತ್ರಿಕೆ ಮತ್ತು ಪುಸ್ತಕಗಳನ್ನು ಓದುವುದು, ಬರೆಯುವ ಅಭ್ಯಾಸ ಮಾಡುವುದು, ಉಪನ್ಯಾಸಗಳು ಹಾಗೂ ಸುದ್ದಿಗಳನ್ನು ಆಲಿಸುವುದರಿಂದ ಭಾಷಾ ಜ್ಞಾನ ಮತ್ತು ವ್ಯಾಕರಣ ಕೌಶಲ್ಯ ವೃದ್ಧಿಯಾಗುತ್ತದೆ ಎಂದು ಹೇಳಿದರು. ನಿವೃತ್ತ ಇಂಗ್ಲೀಷ್ ಪ್ರಾಧ್ಯಾಪಕರಾದ ಪ್ರೊ. ಮನೋಜ್ ಕೊಟ್ನಿಸ್ ಹಾಗೂ ಪ್ರೊ. ಸುಜಾತಾ ಕಟ್ಟಿಮನಿ ಇಂಗ್ಲೀಷ್ ಭಾಷೆಯ ಮಹತ್ವವನ್ನು ವಿವರಿಸಿದರು. ಸಿಕ್ಯಾಬ್ ಸಂಸ್ಥೆಯ ಕಾರ್ಯದರ್ಶಿ



ಉದಯವಾಹಿನಿ ಚಿತ್ರ

ಹಾಗೂ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಎ.ಎಸ್. ಪಾಟೀಲ ಮಾತನಾಡಿ, ತಾಂತ್ರಿಕ ಹಾಗೂ ವೈದ್ಯಕೀಯ ಶಿಕ್ಷಣದಲ್ಲಿ ಇಂಗ್ಲೀಷ್ ಭಾಷೆಯ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ವಿದ್ಯಾರ್ಥಿಗಳ ಭಾಷಾ ಕೌಶಲ್ಯ ವೃದ್ಧಿಗೆ ಶಿಕ್ಷಕರು ಹೆಚ್ಚಿನ ಗಮನ ಹರಿಸಬೇಕು ಎಂದು ಕರೆ ನೀಡಿದರು.

# ಅನುದಾನ ಕೊರತೆಯಿಂದ ಗ್ರಾಮೀಣ ಕಾಮಗಾರಿಗಳಿಗೆ ಅಡಚಣೆ

## ಕಲ್ಯಾಣ ಕರ್ನಾಟಕ ಭಾಗದಲ್ಲಿ 5 ಸಾವಿರ ಶಿಕ್ಷಕರ ನೇಮಕಾತಿ ನಡೆದರೆ ಕ್ಷೇತ್ರದಲ್ಲಿರುವ ಶಿಕ್ಷಕರ ಕೊರತೆ

• ಉದಯವಾಹಿನಿ ಗುರುಮಠಕಲ್ :

ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಗೋಪಾಳಪುರ, ಚಿನ್ನಾಕಾರ, ಬೆಟ್ಟದಳ್ಳಿ ತಾಂಡಾ ಹಾಗೂ ಧರ್ಮಾಪುರ ತಾಂಡಾಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಶರಣಗೌಡ ಕಂದಕೂರ ಶಂಕುಸ್ಥಾಪನೆ ನೆರವೇರಿಸಿ, ಸರ್ಕಾರದಿಂದ ಸಮರ್ಪಕ ಅನುದಾನ

1 : ವಿಶೇಷ ಅನುದಾನದ ಭರವಸೆ
2 : ಹೇಗಾದರೂ ಪಿಂಚಣಿ ಕೊಡಿಸಿ
3 : ನಿಮ್ಮ ಮಕ್ಕಳ ಭವಿಷ್ಯಕ್ಕಾಗಿ

ಬಿಡುಗಡೆಯಾಗದ ಕಾರಣ ಗ್ರಾಮೀಣ ಅಭಿವೃದ್ಧಿ ಕಾಮಗಾರಿಗಳಿಗೆ ತೀವ್ರ ಹಿನ್ನಡೆಯಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಗೋಪಾಳಪುರದಲ್ಲಿ ಕೆಕೆಆರ್‌ಡಿ ಬಿ ಅನುದಾನದಡಿ ಶಾಲಾ ತರಗತಿ ಕೊಠಡಿ ನಿರ್ಮಾಣ, ಚಿನ್ನಾಕಾರದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ, ಬೆಟ್ಟದಳ್ಳಿ ತಾಂಡಾದಲ್ಲಿ 15 ಲಕ್ಷ ವೆಚ್ಚದ ಅಂಗನವಾಡಿ ಕಟ್ಟಡ ಹಾಗೂ ಧರ್ಮಾಪುರ ತಾಂಡಾದಲ್ಲಿ 40 ಲಕ್ಷ ವೆಚ್ಚದಲ್ಲಿ ಸರ್ಕಾರಿ ಶಾಲೆಗೆ ಎರಡು ಕೊಠಡಿಗಳ ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ನಡುವೆ ಅಭಿವೃದ್ಧಿ ಕಾಮಗಾರಿಗಳಿಗೆ ಅಗತ್ಯ ಅನುದಾನ ಬಿಡುಗಡೆಯಾಗುತ್ತಿಲ್ಲ ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಕಲ್ಯಾಣ ಕರ್ನಾಟಕ ಭಾಗದಲ್ಲಿ 5 ಸಾವಿರ ಶಿಕ್ಷಕರ ನೇಮಕಾತಿ ನಡೆದರೆ ಕ್ಷೇತ್ರದಲ್ಲಿರುವ ಶಿಕ್ಷಕರ ಕೊರತೆ ನಿವಾರಣೆಯಾಗಲಿದೆ ಎಂದ ಅವರು, 2015-16ರಲ್ಲಿ ಕೆರೆಗಳ ಹೂಳೆತ್ತುವ ಕಾಮಗಾರಿಗೆ ಬಿಡುಗಡೆಯಾಗಿದ್ದ ಸುಮಾರು 5 ಕೋಟಿ ದುರುಪಯೋಗಗೊಂಡ ಕಾರಣ ನಂತರ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿಲ್ಲ ಎಂದು ಆರೋಪಿಸಿದರು. ಗ್ರಾಮದ ದೊಡ್ಡ ಬೆಟ್ಟಕ್ಕೆ ಸಂಪರ್ಕಿಸುವ ರಸ್ತೆ ಕಾಮಗಾರಿಗೆ ಸರ್ಕಾರ ಅನುಮೋದನೆ ನೀಡಿದ್ದು, ಹಿಂದಿನ ಅವಧಿಯಲ್ಲಿ ಮಂಜೂರಾಗಿದ್ದ 10 ಕೋಟಿಯಲ್ಲಿ 3 ಕೋಟಿ ಬಿಡುಗಡೆಯಾಗಿದೆ. ಒಂದು-ಎರಡು ವಾರಗಳಲ್ಲಿ ಕಾಮಗಾರಿ ಆರಂಭವಾಗಲಿದೆ

**ಚಿನ್ನಾಕಾರದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ**

> ಮುಖ್ಯಮಂತ್ರಿ ವಿಶೇಷ ಅನುದಾನದಡಿ ಗ್ರಾಮಕ್ಕೆ 10 ಲಕ್ಷ ಬಿಡುಗಡೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ತಿಳಿಸಿದರು. ನವಾಬುರ್ಜ್-ಗೋಪಾಳಪುರ ರಸ್ತೆ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದ ಅವರು, ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಟ್ರಸ್ಟ್ ರಚನೆಯಾದರೆ ಮಾತ್ರ ಸರ್ಕಾರದಿಂದ ಅನುದಾನ ದೊರೆಯಲಿದೆ ಎಂದು ವಿವರಿಸಿದರು.
>
> -ಶಾಸಕ ಕಂದಕೂರ

> ''ನೀವು ಹಲವು ಚುನಾವಣೆಗಳಲ್ಲಿ ನನಗೆ ಬೆಂಬಲ ನೀಡಿದ್ದೀರಿ. ಕಳೆದ ಚುನಾವಣೆಯಲ್ಲಿ ಕೆಲವರು ಅಸಮಾಧಾನ ವ್ಯಕ್ತಪಡಿಸಿದ್ದರೂ ಕ್ಷೇತ್ರದ ಅಭಿವೃದ್ಧಿಗಾಗಿ ನನ್ನ ಕೆಲಸ ನಿಂತಿಲ್ಲ. ಅಭಿವೃದ್ಧಿಯೇ ನನ್ನ ಪ್ರಮುಖ ಗುರಿ'' ಎಂದು ಹೇಳಿದರು.
>
> -ಶಾಸಕ ಕಂದಕೂರ

ಎಂದರು. ಗ್ರಾಮ ಪಂಚಾಯಿತಿಗಳಲ್ಲಿ ಸಣ್ಣಪುಟ್ಟ ಸಮಸ್ಯೆಗಳನ್ನು ಪಿಡಿಒಗಳು ತ್ವರಿತವಾಗಿ ಬಗೆಹರಿಸಬೇಕು. ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಕೆಕೆಆರ್‌ಡಿಬಿ ಅನುದಾನ ಬಿಡುಗಡೆಯಾದ ನಂತರ ಗ್ರಾಮಸ್ಥರ ಅಗತ್ಯಕ್ಕೆ ಅನುಗುಣವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

''ಐದು ವರ್ಷಗಳ ಕಾಲ ನಿಮ್ಮ ಸೇವೆ ಮಾಡಲು ಅವಕಾಶ

### ಕ್ಷೇತ್ರದಲ್ಲಿಯೇ ಮಾದರಿಯ ಕಟ್ಟಡ

ಚಿನ್ನಾಕಾರ ಗ್ರಾಮದಲ್ಲಿ ಮಾತನಾಡಿದ ಅವರು, ಗ್ರಾಮದ ಸರ್ಕಾರಿ ಶಾಲಾ ಕಟ್ಟಡವು ಕ್ಷೇತ್ರದಲ್ಲಿಯೇ ಮಾದರಿಯ ಕಟ್ಟಡವಾಗಿದ್ದು, ತಮ್ಮ ತಂದೆ ಶಾಸಕ ನಾಗನಗೌಡ ಅವರ ಅವಧಿಯಲ್ಲಿ ನಿರ್ಮಾಣಗೊಂಡಿದ್ದರೂ ಉದ್ಘಾಟನೆಗೆ ಅವರು ಭಾಗವಹಿಸಲು ಸಾಧ್ಯವಾಗಿರಲಿಲ್ಲ ಎಂದು ಸ್ಮರಿಸಿದರು.

ನೀಡಿದ್ದೀರಿ. ಅದಕ್ಕೂ ಮುನ್ನ ನನ್ನ ತಂದೆ ದಿವಂಗತ ನಾಗನಗೌಡ ಅವರಿಗೆ ಆಶೀರ್ವಾದ ಮಾಡಿದ್ದೀರಿ. ನಿಮ್ಮ ಸೇವಕನಾಗಿ ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಕೆಲಸ ಮಾಡುವುದು ನನ್ನ ಕರ್ತವ್ಯ. ತಾಂಡಾ ನಿವಾಸಿಗಳು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು. ಶಿಕ್ಷಣವೇ ಅಭಿವೃದ್ಧಿಯ ದಾರಿ. ನಿಮ್ಮ ಮಕ್ಕಳ ಭವಿಷ್ಯಕ್ಕಾಗಿ ಅಗತ್ಯ ಸೌಲಭ್ಯ ಕಲ್ಪಿಸಲು ನಾನು ಬದ್ಧನಿದ್ದೇನೆ.'' ಶರಣಗೌಡ ಕಂದಕೂರ, ಶಾಸಕ, ಗುರುಮಠಕಲ್.

ಜನಸಂಖ್ಯೆ ಹೆಚ್ಚಿರುವ ಗ್ರಾಮಗಳಲ್ಲಿ ಒಂದೇ ನ್ಯಾಯಬೆಲೆ ಅಂಗಡಿ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಅಗತ್ಯವಿರುವ ಕಡೆ ಹೊಸ ನ್ಯಾಯಬೆಲೆ ಅಂಗಡಿಗಳನ್ನು ಆರಂಭಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗುವುದು. ಫಲಾನುಭವಿಗಳ ಮಾಹಿತಿಯನ್ನು ಸಂಗ್ರಹಿಸಿ ಸಂಬಂಧಿತ ಸಚಿವರೊಂದಿಗೆ ಚರ್ಚೆ ನಡೆಸಿ ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ತಿಳಿಸಿದರು.

## ಮಿನಿ ನ್ಯೂಸ್

### ತಮ್ಮನ ಮದುವೆಯ ಖುಷಿಯಲ್ಲಿದ್ದಾಗಲೇ ಮನೆಗೆ ನುಗ್ಗಿ ಪುನೀತ್ ಕೆರೆಹಳ್ಳಿ ಬಂಧಿಸಿದ ಪೊಲೀಸರು!

• ಉದಯವಾಹಿನಿ ಹಾಸನ:

ಮುಸ್ಲಿಂ ಧರ್ಮಗುರುಗಳಿಗೆ ಅವಮಾನ ಮಾಡಿದ್ದಾರೆಂಬ ಆರೋಪದ ಹಿನ್ನೆಲೆಯಲ್ಲಿ ಹಿಂದೂಪರ ಹೋರಾಟಗಾರ, 'ರಾಷ್ಟ್ರಪಡೆ'ಯ ಸಂಘಟನೆ ಕಾರ್ಯಕರ್ತ ಪುನೀತ್ ಕೆರೆಹಳ್ಳಿಯನ್ನು ಕುಮಾರಸ್ವಾಮಿ ಲೇಔಟ್ ಪೊಲೀಸರು ಬಂಧಿಸಿದ್ದಾರೆ.ಅಬ್ದುಲ್ ರಜಾಕ್ ಎಂಬವರು ನೀಡಿದ ದೂರಿನ ಆಧಾರದ ಮೇಲೆ ಆಲೂರು ತಾಲ್ಲೂಕಿನ ಕೆರೆಹಳ್ಳಿ ಗ್ರಾಮದ ಅವರ ನಿವಾಸದ ಮೇಲೆ ಪೊಲೀಸರು ದಾಳಿ ಮಾಡಿ, ಬಂಧಿಸಿ ಕರೆದೊಯ್ದಿದ್ದಾರೆ. ನನಗೆ ಜೀವ ಬೆದರಿಕೆ ಇದೆ, ಅಬ್ದುಲ್ ರಜಾಕ್ ವಿರುದ್ಧ ನಾನು ದೂರು ಕೊಟ್ಟಿದ್ದೇನೆ. ಅವನನ್ನು ಬಂಧಿಸದೇ ನನ್ನನ್ನು ಬಂಧಿಸಿದ್ದಾರೆ. ಕಾಂಗ್ರೆಸ್ ಸರ್ಕಾರ ಅಧಿಕಾರ ದುರ್ಬಳಕೆ ಮಾಡಿಕೊಂಡಿದೆ. ನನ್ನ ವಿರುದ್ಧ ಷಡ್ಯಂತ್ರ ಮಾಡಿದ್ದಾರೆ ಎಂದು ಪುನೀತ್ ಕೆರೆಹಳ್ಳಿ ಆಕ್ರೋಶ ಹೊರಹಾಕಿದ್ದಾರೆ.

### ರಸ್ತೆ ಬದಿ ತರಕಾರಿ ವ್ಯಾಪಾರಸ್ಥರ ತೆರವಿಗೆ ಆಗ್ರಹಿಸಿ ಪ್ರತಿಭಟನೆ

• ಉದಯವಾಹಿನಿ ಜಮಖಂಡಿ, :

ನಗರದ ರಸ್ತೆ ಬದಿ ತರಕಾರಿ ವ್ಯಾಪಾರಸ್ಥರನ್ನು ತೆರವುಗೊಳಿಸಬೇಕೆಂದು ಆಗ್ರಹಿಸಿ ಶ್ರೀ ಬಸವೇಶ್ವರ ವ್ಯಾಪಾರಸ್ಥರ ಸಂಘಟನೆಯ ವತಿಯಿಂದ ಶುಕ್ರವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಕಿರಾಣಿ ಬಜಾರ್ ವ್ಯಾಪಾರಸ್ಥರು ತಮ್ಮ ಅಂಗಡಿಗಳನ್ನು ಬಂದ್ ಮಾಡಿ, ರಸ್ತೆ ಬದಿ ತರಕಾರಿ ವ್ಯಾಪಾರಸ್ಥರಿಂದ ವ್ಯಾಪಾರಕ್ಕೆ ತೊಂದರೆಯಾಗುತ್ತಿದೆ. ಆದ್ದರಿಂದ ಅವರನ್ನು ಸೂಕ್ತ ಸ್ಥಳಕ್ಕೆ ಸ್ಥಳಾಂತರಿಸಬೇಕು ಎಂದು ಒತ್ತಾಯಿಸಿ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಬಸವೇಶ್ವರ ವೃತ್ತದಲ್ಲಿ ಪ್ರತಿಭಟನೆ ನಡೆಸಿದ ಸಂಘದ ಅಧ್ಯಕ್ಷ ಶಿವಲಿಂಗಪ್ಪ ಮಾಳಿ ಮಾತನಾಡಿ, ರಸ್ತೆ ಬದಿ ತರಕಾರಿ ವ್ಯಾಪಾರಸ್ಥರಿಂದ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿದ್ದು, ವ್ಯಾಪಾರಕ್ಕೂ ಹಿನ್ನಡೆಯಾಗುತ್ತಿದೆ. ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಂಡು ಅವರನ್ನು ಬೇರೆಡೆಗೆ ಸ್ಥಳಾಂತರಿಸಬೇಕು ಎಂದು ಆಗ್ರಹಿಸಿದರು.ಪ್ರತಿಭಟನೆ ನಡೆಯುತ್ತಿದ್ದ ಸ್ಥಳಕ್ಕೆ ನಗರ ಪೊಲೀಸ್ ಠಾಣೆಯ ಪಿಎಸ್‌ಐ ಅನೀಲ ಕುಂಬಾರ ಭೇಟಿ ನೀಡಿ, ಪ್ರತಿಭಟನಾಕಾರರೊಂದಿಗೆ ಮಾತುಕತೆ ನಡೆಸಿ ಮನವೊಲಿಸಿದರು. ಬಳಿಕ ಪ್ರತಿಭಟನೆಯನ್ನು ಹಿಂಪಡೆಯಲಾಯಿತು. ಈ ಸಂದರ್ಭದಲ್ಲಿ ಶಿವಾನಂದ ದಡ್ಡಿಮನಿ, ಅಜೀತ ಮೈತ್ರಿ, ಅರೂಣ ಮರೆಗುದ್ದಿ, ವಿ.ಸಿ. ಬುದಿಹಾಳ, ಚಂದ್ರಶೇಖರ ಪಡಸಾಲಿ, ಮಹೇಶ್ ಗಣಾಚಾರಿ ಸೇರಿದಂತೆ ಅನೇಕ ವ್ಯಾಪಾರಸ್ಥರು ಉಪಸ್ಥಿತರಿದ್ದರು.

### ಸಮಗ್ರ ತನಿಖೆಗೆ ಆಗ್ರಹಿಸಿ ಮನವಿ

• ಉದಯವಾಹಿನಿ ವಿಜಯಪುರ, :

ಬಬಲೇಶ್ವರ ತಾಲ್ಲೂಕಿನ ಸಂಗಾಪುರ ಗ್ರಾಮದ ಮಹಿಳೆ ದುಂಡವ್ವ ಮಾದರ ಅವರ ಸಾವಿನ ಪ್ರಕರಣವನ್ನು ಸಮಗ್ರವಾಗಿ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಂಡು ನ್ಯಾಯ ಒದಗಿಸಬೇಕೆಂದು ಆಗ್ರಹಿಸಿ ಜನವಾದಿ ಮಹಿಳಾ ಸಂಘಟನೆ ಜಿಲ್ಲಾ ಸಮಿತಿಯವರು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಮೃತ ಮಹಿಳೆಯ ಸಹೋದರ ಪವಾಡೆಪ್ಪ ಪರಸಪ್ಪ ತಳಕಡೆ, ತಮ್ಮ ಸಹೋದರಿ ದುಂಡವ್ವ ಅವರನ್ನು ಸುಮಾರು 20 ವರ್ಷಗಳ ಹಿಂದೆ ಶ್ರೀಶೈಲ್ ಮಾದರ ಅವರೊಂದಿಗೆ ವಿವಾಹ ಮಾಡಿಕೊಡಲಾಗಿತ್ತು. ಕುಟುಂಬದಲ್ಲಿ ಕೆಲವೊಮ್ಮೆ ಸಣ್ಣಪುಟ್ಟ ಭಿನ್ನಾಭಿಪ್ರಾಯಗಳು ನಡೆದಿದ್ದರೂ ಯಾವುದೇ ಗಂಭೀರ ಸಮಸ್ಯೆ ಇರಲಿಲ್ಲ ಎಂದು ತಿಳಿಸಿದರು. 2026ರ ಜೂನ್ 13ರಂದು ದುಂಡವ್ವ ಅವರಿಗೆ ಪತಿ ಶ್ರೀಶೈಲ್ ಮಾದರ, ಪುತ್ರಿ ಸೌಜನ್ಯ ಮಾದರ ಹಾಗೂ ಕುಟುಂಬದ ಇತರ ಸದಸ್ಯರು ಹಲ್ಲೆ ನಡೆಸಿ, ರಾಡ್ ಹಾಗೂ ಸ್ಪ್ರಿಂಕ್ಲರ್ ಪೈಪ್‌ನಿಂದ ಥಳಿಸಿ ಕೊಲೆ ಮಾಡಿ ಬಳಿಕ ನೇಣು ಹಾಕಿರುವ ಶಂಕೆ ಇದೆ ಎಂದು ಆರೋಪಿಸಿದರು. ಘಟನೆ ನಡೆದ ಬಳಿಕ ತವರು ಮನೆಯವರು ಸ್ಥಳಕ್ಕೆ ತೆರಳಿದಾಗ ಮೃತದೇಹವನ್ನು ನೇಣಿನಿಂದ ಕೆಳಗಿಳಿಸಲಾಗಿತ್ತು. ಪ್ರಕರಣದ ಕುರಿತು ಸಮಗ್ರ ಮತ್ತು ನಿಷ್ಪಕ್ಷಪಾತ ತನಿಖೆ ನಡೆಸಿ ನ್ಯಾಯ ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

### ಹೊತಪೇಠ ರಸ್ತೆ ಅವ್ಯವಸ್ಥೆ

• ಉದಯವಾಹಿನಿ ಶಹಾಪುರ

ತಾಲ್ಲೂಕಿನ ಹೊತಪೇಠ ಗ್ರಾಮದಲ್ಲಿ ನಿರ್ಮಿತಿ ಕೇಂದ್ರದ ವತಿಯಿಂದ ಮುಖ್ಯ ರಸ್ತೆಯಿಂದ ಗ್ರಾಮ ಪಂಚಾಯಿತಿ ಕಚೇರಿವರೆಗೆ ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ಆರಂಭಿಸಿ ಕಂಕರ್ ಹಾಕಲಾಗಿದೆ. ಆದರೆ ಹಲವು ತಿಂಗಳುಗಳು ಕಳೆದರೂ ಡಾಂಬರೀಕರಣ ಕಾಮಗಾರಿ ಪೂರ್ಣಗೊಳ್ಳದ ಕಾರಣ ರಸ್ತೆ ಸಂಪೂರ್ಣ ಕಂಕರ್ಮಯವಾಗಿದ್ದು, ಸಾರ್ವಜನಿಕರು ನಿತ್ಯ ಸಂಚಾರಕ್ಕೆ ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ.

ಗ್ರಾಮದಿಂದ ಶಹಾಪುರ ಪಟ್ಟಣಕ್ಕೆ ಪ್ರತಿದಿನ ನೂರಾರು ಜನರು ಉದ್ಯೋಗ, ವ್ಯಾಪಾರ, ಶಿಕ್ಷಣ ಹಾಗೂ ಇತರೆ ಅಗತ್ಯ ಕೆಲಸಗಳಿಗಾಗಿ ಸಂಚರಿಸುತ್ತಾರೆ. ಆದರೆ ರಸ್ತೆಯ ದುಸ್ಥಿತಿಯಿಂದ ದ್ವಿಚಕ್ರ ವಾಹನ ಸವಾರರು ಜೀವಭಯದಲ್ಲೇ ಓಡಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಕಂಕರ್‌ನಿಂದಾಗಿ ಹಲವು ಬಾರಿ ವಾಹನಗಳು ಜಾರಿ ಬಿದ್ದು ಅಪಘಾತಗಳು ಸಂಭವಿಸಿರುವುದಾಗಿ ಗ್ರಾಮಸ್ಥರು ಆರೋಪಿಸಿದ್ದಾರೆ.

ಟಂಟಂ ಆಟೋ ಚಾಲಕರು ಹಾಗೂ ಮಾಲೀಕರು ರಸ್ತೆ ಹದಗೆಟ್ಟಿರುವುದರಿಂದ ವಾಹನಗಳ ಬಿಡಿಭಾಗಗಳು ಆಗಾಗ ಹಾಳಾಗುತ್ತಿದ್ದು, ಆದಾಯಕ್ಕಿಂತ ದುರಸ್ತಿ ವೆಚ್ಚವೇ ಹೆಚ್ಚಾಗುತ್ತಿದೆ ಎಂದು ಅಳಲು ತೋಡಿಕೊಂಡಿದ್ದಾರೆ. ಇದೇ ಕಾರಣದಿಂದ ಕೆಲವು ಬಸ್‌ಗಳ ಸಂಚಾರವೂ ಅಸ್ತವ್ಯಸ್ತಗೊಂಡಿದೆ ಎನ್ನಲಾಗಿದೆ. ರಾತ್ರಿ ವೇಳೆ ರಸ್ತೆ ಇನ್ನಷ್ಟು ಅಪಾಯಕಾರಿಯಾಗಿದ್ದು, ಗರ್ಭಿಣಿಯರು ಹಾಗೂ ತುರ್ತು ಚಿಕಿತ್ಸೆಗೆ ತೆರಳುವ ರೋಗಿಗಳು ತೀವ್ರ ತೊಂದರೆ ಅನುಭವಿಸುವಂತಾಗಿದೆ. ಈ ಕುರಿತು ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಸ್ಪಂದನೆ ಸಿಗುತ್ತಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ನಿರ್ಮಿತಿ ಕೇಂದ್ರದ ಅಧಿಕಾರಿಗಳಿಗೆ ಕರೆ ಮಾಡಿದರೂ ಕರೆ ಸ್ವೀಕರಿಸುತ್ತಿಲ್ಲ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

### ಡೆಂಗ್ಯು ಸಮಸ್ಯೆ - ಕಟ್ಟೆಚ್ಚರಕ್ಕೆ ಶಾಸಕರ ಸೂಚನೆ

• ಉದಯವಾಹಿನಿ ಪುತ್ತೂರು:


ಉದಯವಾಹಿನಿ ಚಿತ್ರ

ಮಳೆಗಾಲ ಆರಂಭದೊಂದಿಗೆ ಜನತೆಯನ್ನು ಕಾಡುವ ಡೆಂಗ್ಯು ಪ್ರಕರಣ ಪತ್ತೆಯಾಗಿದೆ. ಈ ಬಗ್ಗೆ ಆರೋಗ್ಯ ಇಲಾಖೆ ಕಟ್ಟೆಚ್ಚರದಲ್ಲಿರುವಂತೆ ಶಾಸಕ ಅಶೋಕ್ ರೈ ಸೂಚನೆ ನೀಡಿದ್ದಾರೆ.

ಪುತ್ತೂರು ವಿಧಾನಸಭಾ ಕ್ಷೇತ್ರದಾದ್ಯಂತ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಉಚಿತ ರಕ್ತ ತಪಾಸಣಾ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಪಟ್ಟಣ ಹಾಗೂ ಗ್ರಾಮೀಣ ಭಾಗದ ಜನರು ಜ್ವರ ಕಂಡುಬಂದಲ್ಲಿ ಅದನ್ನು ನಿರ್ಲಕ್ಷ್ಯ ಮಾಡದೆ ರಕ್ತ ಪರೀಕ್ಷೆ ಮಾಡಿಸಿಕೊಳ್ಳಬೇಕು. ಜನರ ಆರೋಗ್ಯದ ಹಿತ ದೃಷ್ಟಿಯಿಂದ ಸರ್ಕಾರ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ರಕ್ತ ತಪಾಸಣಾ ವ್ಯವಸ್ಥೆಯನ್ನು ಮಾಡಿದ್ದು ಇದನ್ನು ಬಳಸಿಕೊಳ್ಳುವಂತೆ ಸೂಚನೆ ನೀಡಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ನೀವು ಇಂದು ಆರಾಮವಾಗಿ ವಿಶ್ರಾಂತಿ ಪಡೆಯಬೇಕು ನೀವು ಆನಂದಿಸುವ ಮತ್ತು ಆಸಕ್ತಿಗಳು ಮತ್ತು ವಿಷಯಗಳಲ್ಲಿ ತೊಡಗಿಕೊಳ್ಳಿ. ಇಂದು ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಹೊಂದಿರುವ ಸಾಧ್ಯತೆ ಇದೆ ಆದರೆ ನಿಮ್ಮ ಬುದ್ಧಿವಂತಿಕೆಯಿಂದ ಈ ಹಾನಿಯನ್ನು ಲಾಭದಲ್ಲಿ ಪರಿವರ್ತಿಸಬಹುದು.

**ವೃಷಭ** ಹಣಕಾಸು ಖಂಡಿತವಾಗಿಯೂ ವೃದ್ಧಿಯಾಗುತ್ತದೆ ಆದರೆ ಅದೇ ಸಮಯದಲ್ಲಿ ಖರ್ಚು ತುಂಬಾ ಹೆಚ್ಚಾಗುತ್ತದೆ. ಮಕ್ಕಳ ಜೊತೆಗಿನ ನಿಮ್ಮ ಕಠಿಣ ವರ್ತನೆ ನಿಮಗೆ ಸಿಟ್ಟುಬರಿಸಬಹುದು. ನಿಮ್ಮ ನಡುವೆ ಕೇವಲ ಒಂದು ತಡೆಗೋಡೆಯನ್ನು ಮಾತ್ರ ಸೃಷ್ಟಿಸುವುದರಿಂದ ನಿಮ್ಮ ಮೇಲೆ ನಿಯಂತ್ರಣ ಹೊಂದಿರಬೇಕು.

**ಮಿಥುನ** ನಿಮ್ಮ ಪ್ರೇಮ ಜೀವನವಾಗಿ ಮದುವೆಯ ಪ್ರಸ್ತಾಪ ಜೀವನಪೂರ್ಣದ ಬಂಧದಲ್ಲಿ ಬದಲಾಗಬಹುದು. ನೀವು ಇಂದು ಸಂಬಂಧಗಳ ಮಹತ್ವವನ್ನು ಅನುಭವಿಸಬಹುದು. ಏಕೆಂದರೆ ದಿನದ ಹೆಚ್ಚಿನ ಸಮಯ ನೀವು ನಿಮ್ಮ ಕುಟುಂಬದ ಸದಸ್ಯರೊಂದಿಗೆ ಕಳೆಯುತ್ತೀರಿ.

**ಕರ್ಕಾಟಕ** ನಿರಾಶಾದಾಯಕ ಮನೋಭಾವವು ಕೇವಲ ನಿಮ್ಮ ಅವಕಾಶಗಳನ್ನು ಸೀಮಿತಗೊಳಿಸುವುದಷ್ಟೇ ಅಲ್ಲದೇ ದೇಹದ ಸಾಮರಸ್ಯವನ್ನೂ ಭಂಗಪಡಿಸುವುದರಿಂದ ಅವುಗಳನ್ನು ತಡೆಯಬೇಕು. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು, ಎಂದು ನಿಮಗೆ ನನ್ನ ಸಲಹೆ ನೀಡಲಾಗಿದೆ,

**ಸಿಂಹ** ಇತರರ ವ್ಯವಹಾರಗಳಲ್ಲಿ ನಿಮ್ಮ ಮೂಗುತೂರಿಸುವಿಕೆಯನ್ನು ಇಂದು ತಡೆಯಬೇಕು. ಪ್ರೇಮ ಜೀವನ ರೋಮಾಂಚಕವಾಗಿರುತ್ತದೆ. ಮನೆಯ ಕೆಲಸಗಳನ್ನು ಮುಗುಸಿದ ಈ ರಾಶಿಚಕ್ರದ ಗೃಹಿಣಿಯರು ಇಂದು ಉಚಿತ ಸಮಯದಲ್ಲಿ ಟಿವಿ ಅಥವಾ ಮೊಬೈಲ್‌ನಲ್ಲಿ ಚಲನಚಿತ್ರವನ್ನು ವೀಕ್ಷಿಸಬಹುದು.

**ಕನ್ಯಾ** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಒಂದು ಪಾರ್ಟಿಯಲ್ಲಿ ನೀವು ಆರ್ಥಿಕ ಭಾಗವನ್ನು ಬಲಪಡಿಸಲು ಪ್ರಮುಖ ಸಲಹೆಯನ್ನು ನೀಡುವ ವ್ಯಕ್ತಿಯನ್ನು ಭೇಟಿ ಮಾಡಬಹುದು.

**ತುಲಾ** ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ.

**ವೃಶ್ಚಿಕ** ನಿಮ್ಮನ್ನು ನೀವೇ ಅನಗತ್ಯವಾಗಿ ದೂಷಿಸುವುದು ನಿಮ್ಮ ಚೈತನ್ಯವನ್ನು ಕುಗ್ಗಿಸಬಹುದು. ಮನೆಯ ಅಗತ್ಯಗಳನ್ನು ನೋಡುತ್ತಾ, ಇಂದು ನೀವು ನಿಮ್ಮ ಜೀವನ ಸಂಗಾತಿಯೊಂದಿಗೆ ಯಾವುದೇ ಅಮೂಲ್ಯ ವಸ್ತುವನ್ನು ಖರೀದಿಸಬಹುದು, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು.

**ಧನಸ್ಸು** ಇದು ಹೃದಯ ರೋಗಿಗಳಿಗೆ ಕಾಫಿ ಬಿಡಲು ಸರಿಯಾದ ಸಮಯ. ಯಾವುದೇ ಮುಂದುವರಿದ ಬಳಕೆ ನಿಮ್ಮ ಹೃದಯದ ಮೇಲೆ ಅನವಶ್ಯಕ ಒತ್ತಡ ತರುತ್ತದೆ. ಹೂಡಿಕೆ ಮಾಡುವುದು ಅನೇಕ ಬಾರಿ ನಿಮಗೆ ಪ್ರಯೋಜನಕಾರಿಯೆಂದು ಸಾಬೀತುಪಡಿಸುತ್ತದೆ, ಇಂದು ನಿಮಗೆ ಈ ಮಾತು ಅರ್ಥವಾಗಬಹುದು.

**ಮಕರ** ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು. ಮಕ್ಕಳು ನೀವು ಅವರೆಡೆಗೆ ಗಮನ ಹರಿಸಬೇಕೆಂಬ ಬೇಡಿಕೆಯಿಟ್ಟರೂ ಅವರು ನಿಮಗೆ ಸಂತೋಷ ತರುತ್ತಾರೆ.

**ಕುಂಭ** ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಸ್ನೇಹಿತರು ಮತ್ತು ಅಪರಿಚಿತರಿಬ್ಬರ ಬಗೆಗೂ ಎಚ್ಚರದಿಂದಿರಿ. ಸ್ಪಷ್ಟವಾಗಿ ಅರ್ಥಮಾಡಿಕೊಳ್ಳುವ ಮೂಲಕ ಮಾತ್ರ ನೀವು ನಿಮ್ಮ ಪತ್ನಿಗೆ ಭಾವನಾತ್ಮಕ ಬೆಂಬಲ ನೀಡಬಹುದು.


**ಮೀನ** ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ಯಾವುದೇ ಅನುಭವದ ವ್ಯಕ್ತಿಯ ಸಲಹೆ ಇಲ್ಲದೆ, ನಿಮಗೆ ಆರ್ಥಿಕ ನಷ್ಟವಾಗುವ ಯಾವುದೇ ಕೆಲಸವನ್ನು ಮಾಡಬೇಡಿ. ನಿಮ್ಮ ವೈಯಕ್ತಿಕ ರಂಗದಲ್ಲಿ ಮುಖ್ಯ ಬೆಳವಣಿಗೆಯಾಗುತ್ತಿದ್ದು ಇದು ನೀವು ಮತ್ತು ನಿಮ್ಮ ಇಡೀ ಕುಟುಂಬಕ್ಕೆ ಸಂತೋಷ ತರುತ್ತದೆ.

## ರಾಜ್ಯದಲ್ಲಿ ಪೊಲೀಸ್ ಮೂಲಸೌಕರ್ಯ ಬಲವರ್ಧನೆಗೆ ಸಚಿವ ಸಂಪುಟದ ಮಹತ್ವದ ನಿರ್ಣಯ!

### ಪೊಲೀಸ್ ಠಾಣೆಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ

• ಉದಯವಾಹಿನಿ ಕಲಬುರಗಿ,

1. ಉಪ್ಪಿನಂಗಡಿ ಪೊಲೀಸ್ ಠಾಣೆ-ದಕ್ಷಿಣ ಕನ್ನಡ ಜಿಲ್ಲೆ,
2. ಕುಂದಗೋಳ ಪೊಲೀಸ್ ಠಾಣೆ-ಧಾರವಾಡ ಜಿಲ್ಲೆ,
3. ಅರಸೀಕೆರೆ ಗ್ರಾಮಾಂತರ ಪೊಲೀಸ್ ಠಾಣೆ-ಹಾಸನ ಜಿಲ್ಲೆ,
4. ಸುರಪುರ ಪೊಲೀಸ್ ಠಾಣೆ-ಯಾದಗಿರಿ ಜಿಲ್ಲೆ,
5. ಮುದ್ದೇಬಿಹಾಳ ಪೊಲೀಸ್ ಠಾಣೆ-ವಿಜಯಪುರ ಜಿಲ್ಲೆ,
6. ಕುಷ್ಟಗಿ ಪೊಲೀಸ್ ಠಾಣೆ-ಕೊಪ್ಪಳ ಜಿಲ್ಲೆ,
7. ಸಿರವಾರ ಪೊಲೀಸ್ ಠಾಣೆ-ರಾಯಚೂರು ಜಿಲ್ಲೆ,
8. ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆ-ಹಾಸನ ಜಿಲ್ಲೆ,
9. ಬಸವನಬಾಗೇವಾಡಿ ಪೊಲೀಸ್ ಠಾಣೆ-ವಿಜಯಪುರ ಜಿಲ್ಲೆ,
10. ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆ-ಮೈಸೂರು ಜಿಲ್ಲೆ.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಹಾಗೂ ಸಾರ್ವಜನಿಕರಿಗೆ ಪೊಲೀಸ್ ಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ತಲುಪಿಸುವ ಉದ್ದೇಶದಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 10 ಹೊಸ ಪೊಲೀಸ್ ಠಾಣೆಗಳ ಕಟ್ಟಡ ನಿರ್ಮಾಣಕ್ಕೆ ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ಅನುಮೋದನೆ ನೀಡಲಾಗಿದೆ ಎಂದು ಗೃಹ, ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

**ಪೊಲೀಸ್ ವ್ಯವಸ್ಥೆ ಮತ್ತಷ್ಟು ಜನಸ್ನೇಹಿ, ಪರಿಣಾಮಕಾರಿ**

> ರಾಜ್ಯ ಸರ್ಕಾರವು ನಾಗರಿಕರ ಸುರಕ್ಷತೆ ಮತ್ತು ಕಾನೂನು ಸುವ್ಯವಸ್ಥೆಯನ್ನು ಅತ್ಯುನ್ನತ ಆದ್ಯತೆಯಾಗಿ ಪರಿಗಣಿಸಿದ್ದು, ಪೊಲೀಸ್ ಇಲಾಖೆಯನ್ನು ತಂತ್ರಜ್ಞಾನ ಹಾಗೂ ಮೂಲಸೌಕರ್ಯದ ದೃಷ್ಟಿಯಿಂದ ಇನ್ನಷ್ಟು ಬಲಿಷ್ಠಗೊಳಿಸುವ ಕಾರ್ಯವನ್ನು ನಿರಂತರವಾಗಿ ಮುಂದುವರಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.
> ಸಚಿವ ಪ್ರಿಯಾಂಕ್ ಖರ್ಗೆ

> ಈ ಹೊಸ ಕಟ್ಟಡಗಳು ನಿರ್ಮಾಣವಾದ ನಂತರ ಪೊಲೀಸ್ ಸಿಬ್ಬಂದಿಗೆ ಉತ್ತಮ ಕಾರ್ಯಪರಿಸರ ದೊರೆಯಲಿದ್ದು, ಸಾರ್ವಜನಿಕರಿಗೆ ವೇಗವಾದ ಹಾಗೂ ಸುಲಭ ಪೊಲೀಸ್ ಸೇವೆ ಒದಗಿಸಲು ಸಾಧ್ಯವಾಗುತ್ತದೆ. ರಾಜ್ಯದಲ್ಲಿ ಬೆಳೆಯುತ್ತಿರುವ ಭದ್ರತಾ ಸವಾಲುಗಳನ್ನು ಎದುರಿಸಲು ಪೊಲೀಸ್ ಇಲಾಖೆಯ ಮೂಲಸೌಕರ್ಯವನ್ನು ಆಧುನೀಕರಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದು ಹೇಳಿದ್ದಾರೆ.
> ಸಚಿವ ಪ್ರಿಯಾಂಕ್ ಖರ್ಗೆ

> ಈ ನಿರ್ಧಾರದಿಂದ ರಾಜ್ಯದ ಪೊಲೀಸ್ ವ್ಯವಸ್ಥೆ ಮತ್ತಷ್ಟು ಜನಸ್ನೇಹಿ, ಪರಿಣಾಮಕಾರಿ ಮತ್ತು ಆಧುನಿಕವಾಗಲಿದ್ದು, ಸಾರ್ವಜನಿಕ ಸೇವಾ ವಿತರಣೆಯಲ್ಲಿ ಹೊಸ ಗುಣಮಟ್ಟವನ್ನು ನಿರ್ಮಿಸಲಿದೆ ಎಂದು ಗೃಹ ಸಚಿವರು ಹೇಳಿದ್ದಾರೆ.

2026-27ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಲಾಗಿದ್ದಂತೆ, ರಾಜ್ಯದ ವಿವಿಧ ಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಠಾಣೆಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ. ಈ ಯೋಜನೆಯಡಿ ಒಟ್ಟು 30 ಕೋಟಿ ಅನುದಾನವನ್ನು ಮಂಜೂರು ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಈ ಯೋಜನೆಯಡಿ ಕೆಳಕಂಡ 10 ಪೊಲೀಸ್ ಠಾಣೆಗಳಿಗೆ ಆಧುನಿಕ ಕಟ್ಟಡಗಳು ನಿರ್ಮಾಣವಾಗಲಿವೆ

## ಟಾಟಾ ಪವರ್ ಪರವಾನಗಿ ಪ್ರಸ್ತಾವಣೆಗೆ ಜೆಸ್ಕಾಂ ಆಕ್ಷೇಪ

• ಉದಯವಾಹಿನಿ ಕಲಬುರಗಿ,:

ವಿದ್ಯುತ್ ಕಾಯ್ದೆ-2003ರ 14 ಮತ್ತು 15 ಕಲಂ ಅಡಿಯಲ್ಲಿ ಟಾಟಾ ಪವರ್ ಕಂಪನಿಯು ಜೆಸ್ಕಾಂ ವ್ಯಾಪ್ತಿಯ ಬಳ್ಳಾರಿ, ಕಲಬುರಗಿ, ಯಾದಗಿರಿ, ರಾಯಚೂರು ಜಿಲ್ಲೆಗಳ ಮೂರು ಮಹಾನಗರ ಪಾಲಿಕೆಗಳು ಹಾಗೂ ಆರು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವಿದ್ಯುತ್ ವಿತರಣಾ ಪರವಾನಗಿ ನೀಡುವಂತೆ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗಕ್ಕೆ (ಕೆಇಆರ್‌ಸಿ) ಅರ್ಜಿ ಸಲ್ಲಿಸಿರುವ ಹಿನ್ನೆಲೆಯಲ್ಲಿ, ಈ ಪ್ರಸ್ತಾವನೆಯು ಸಾರ್ವಜನಿಕ ಹಿತಾಸಕ್ತಿಗೆ ಧಕ್ಕೆಯಾಗುವ ಸಾಧ್ಯತೆ ಇರುವುದರಿಂದ ಜೆಸ್ಕಾಂ ತನ್ನ ಆಕ್ಷೇಪಣೆಯನ್ನು ಕೆಇಆರ್ಸಿ ಮುಂದೆ ಸಲ್ಲಿಸಿದೆ.

ಪ್ರಸ್ತುತ ಜೆಸ್ಕಾಂ ಸಂಸ್ಥೆಯು ನಗರ, ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳನ್ನು ಒಳಗೊಂಡಂತೆ ಸಮಗ್ರವಾಗಿ ವಿದ್ಯುತ್ ವಿತರಣಾ ಸೇವೆ ಒದಗಿಸುತ್ತಿದೆ.

**ಆಕ್ಷೇಪಣೆಗಳು:** ಪ್ರಸ್ತಾವಿತ ಪ್ರದೇಶದಲ್ಲಿ ಸ್ವತಂತ್ರ ವಿದ್ಯುತ್ ವಿತರಣಾ ಜಾಲವನ್ನು ನಿರ್ಮಿಸುವ ಕುರಿತು ಟಾಟಾ ಪವರ್ ಸ್ಪಷ್ಟ ಯೋಜನೆ ಸಲ್ಲಿಸಿಲ್ಲ. ಬದಲಾಗಿ, ಜೆಸ್ಕಾಂನ ಈಗಿರುವ ಮೂಲ ಸೌಕರ್ಯವನ್ನು ಅವಲಂಬಿಸಿ ವಿದ್ಯುತ್ ಸರಬರಾಜು ಮಾಡಲು ಉದ್ದೇಶಿಸಿರುವುದಾಗಿ ಹೇಳಿದೆ. ವಿದ್ಯುತ್ ಖರೀದಿ ಯೋಜನೆಯ ಕುರಿತಾಗಿಯೂ ಜೆಸ್ಕಾಂ ಆಕ್ಷೇಪ ಸಲ್ಲಿಸಿದ್ದು, ಅಲ್ಪಾವಧಿ ವಿದ್ಯುತ್ ಖರೀದಿ ಅವಲಂಬನೆಯು ಗ್ರಾಹಕರಿಗೆ ಹೆಚ್ಚುವರಿ ವೆಚ್ಚದ ಭಾರ ಉಂಟುಮಾಡುವ ಸಾಧ್ಯತೆಯಿದೆ. ಕೈಗಾರಿಕಾ ಹಾಗೂ ವಾಣಿಜ್ಯ ವಲಯದ ಹೆಚ್ಚಿನ ಆದಾಯ ತರುವ ಗ್ರಾಹಕರನ್ನೇ ಗುರಿಯಾಗಿಸಿ ಕೊಂಡು ಟಾಟಾ ಸಂಸ್ಥೆ ಸೇವೆ ನೀಡುವ ಸಾಧ್ಯತೆ ಇರುವುದರಿಂದ, ಸಬ್ಸಿಡಿ ಪಡೆಯುವ ಸಾಮಾನ್ಯ ಗ್ರಾಹಕರಿಗೆ ತೊಂದರೆಯಾಗಬಹುದು. ಅಲ್ಲದೇ ಜೆಸ್ಕಾಂನ ಆರ್ಥಿಕ ಸ್ಥಿರತೆಗೆ ಧಕ್ಕೆ ಉಂಟಾಗಬಹುದು.

ಉದಯವಾಹಿನಿ ಚಿತ್ರ

**ಭವಿಷ್ಯದ ವಿದ್ಯುತ್ ಬೇಡಿಕೆ ಪೂರೈಸುವ ಉದ್ದೇಶ**

> ಜೆಸ್ಕಾಂ ಸಂಸ್ಥೆಯು ತನ್ನ ವ್ಯಾಪ್ತಿಯಲ್ಲಿನ ಪ್ರಸ್ತುತ ಹಾಗೂ ಭವಿಷ್ಯದ ವಿದ್ಯುತ್ ಬೇಡಿಕೆಯನ್ನು ಪೂರೈಸುವ ಉದ್ದೇಶದಿಂದ ವಿವಿಧ ವಿದ್ಯುತ್ ಉತ್ಪಾದನಾ ಸಂಸ್ಥೆಗಳೊಂದಿಗೆ ದೀರ್ಘಾವಧಿಯ ವಿದ್ಯುತ್ ಖರೀದಿ ಒಪ್ಪಂದಗಳನ್ನು ಮಾಡಿಕೊಂಡಿದ್ದು, ವಿದ್ಯುತ್ ವಿತರಣಾ ಜಾಲದ ವಿಸ್ತರಣೆ ಹಾಗೂ ಮೂಲಸೌಕರ್ಯ ಅಭಿವೃದ್ಧಿಗಾಗಿ ಗಣನೀಯ ಪ್ರಮಾಣದ ಸಾಲವನ್ನು ಸಹ ಪಡೆದಿದೆ.

## ಎಸ್. ಐ. ಆರ್ :ಉಡುಪಿ ಜಿಲ್ಲೆಯಲ್ಲಿ 107,614 ಗಣತಿ ನಮೂನೆ ವಿತರಣೆ

• ಉದಯವಾಹಿನಿ ಉಡುಪಿ

ಜಿಲ್ಲೆಯಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯು ವ್ಯವಸ್ಥಿತವಾಗಿ ನಡೆಯುತ್ತಿದ್ದು, ಮತದಾರರಿಗೆ ಎನ್ಯೂಮರೇಶನ್ ಫಾರ್ಮ್‌ಗಳನ್ನು ವಿತರಿಸಲು ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡುತ್ತಿದ್ದಾರೆ. ಜುಲೈ 2, 2026 ರ ಹೊತ್ತಿಗೆ ಉಡುಪಿ ಜಿಲ್ಲೆಯಲ್ಲಿನ ಎನ್ಯೂಮರೇಶನ್ **ಪ್ರಕ್ರಿಯೆಯ ವಿವರ :** ಜಿಲ್ಲೆಯಲ್ಲಿ ಒಟ್ಟು 10,63,876 ಎನ್ಯೂಮರೇಶನ್ ಫಾರ್ಮ್‌ಗಳನ್ನು ಮುದ್ರಿಸಲಾಗಿದ್ದು, ಈವರೆಗೆ 107,614 ಫಾರ್ಮ್‌ಗಳನ್ನು ಮತದಾರರಿಗೆ ವಿತರಿಸಿ, ಶೇ.10.12% ಪ್ರಗತಿಯನ್ನು ಸಾಧಿಸಲಾಗಿರುತ್ತದೆ ಪ್ರತಿ ಬೂತ್ ಮಟ್ಟದ ಅಧಿಕಾರಿಯು ಸರಾಸರಿ 97 ಫಾರ್ಮ್ಗಳನ್ನು ವಿತರಿಸಿದ್ದಾರೆ. ಒಟ್ಟು 8703 ಎನ್ಯೂಮರೇಶನ್ ಫಾರ್ಮ್ಗಳನ್ನು ಡಿಜಿಟಲೀಕರಣಗೊಳಿಸಲಾಗಿದ್ದು, ಇದು 0.82% ಸಾಧನೆಯಾಗಿದೆ. ಒಟ್ಟು 8,167 ಫಾರ್ಮ್ಗಳನ್ನು ಬೂತ್ ಮಟ್ಟದ ಅಧಿಕಾರಿಗಳು ಅಧಿಕೃತವಾಗಿ ಪರಿಶೀಲಿಸಿದ್ದಾರೆ.

ಹೆಚ್ಚುವರಿಯಾಗಿ, 4,354 ಫಾರ್ಮ್‌ಗಳನ್ನು 'ಸ್ವಯಂ' ಎಂದು ಮತ್ತು 3,789 ಫಾರ್ಮ್‌ಗಳನ್ನು ''ಸಂತತಿ'' ಎಂದು ಮ್ಯಾಪಿಂಗ್ ಮಾಡಲಾಗಿರುತ್ತದೆ. 535 ಎನ್ಯೂಮರೇಶನ್ ಫಾರ್ಮ್ಗಳನ್ನು ಮತದಾರರು ನೇರವಾಗಿ ಆನ್‌ಲೈನ್ ಮೂಲಕ ಸಲ್ಲಿಸಿದ್ದಾರೆ. ಮನೆ ಮನೆಗೆ ಭೇಟಿ ನೀಡುವ ಎನ್ಯೂಮರೇಶನ್ ಪ್ರಕ್ರಿಯೆ ಮತ್ತು ಡಿಜಿಟಲೀಕರಣವು ಜುಲೈ 29 ರಂದು ಪೂರ್ಣಗೊಳ್ಳಲಿದೆ. ಮತದಾರರ ಪಟ್ಟಿಯ ನಿಖರತೆ ಮತ್ತು ಸಮಗ್ರತೆಯನ್ನು ಕಾಪಾಡಿಕೊಳ್ಳಲು, ಬೂತ್ ಮಟ್ಟದ ಅಧಿಕಾರಿಗಳು ಮನೆಗೆ ಭೇಟಿ ನೀಡಿದಾಗ ಸಾರ್ವಜನಿಕರು ಸಹಕರಿಸಬೇಕೆಂದು ಜಿಲ್ಲಾಡಳಿತವು ಕೋರಿದೆ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (TMS-2026) ಕಾರ್ಯದಲ್ಲಿ ಪಾಲ್ಗೊಳ್ಳುತ್ತಿರುವ ಮತ್ತು ಕ್ಷೇತ್ರ ಮಟ್ಟದಲ್ಲಿ ವ್ಯಾಪಕವಾಗಿ ಮನೆ ಮನೆಗೆ ಭೇಟಿ ನೀಡುತ್ತಿರುವ ಬೂತ್ ಮಟ್ಟದ ಅಧಿಕಾರಿಗಳ ಕಲ್ಯಾಣ ಹಾಗೂ ಅನುಕೂಲಕ್ಕಾಗಿ ಸರ್ಕಾರವು ಸಿ.ಆ.ಸು.ಇ (ಇ-ಆಡಳಿತ) ಇಲಾಖೆಯು ಕರ್ತವ್ಯ ಮೊಬೈಲ್ ಅಪ್ಲಿಕೇಶನ್ ಅಡಿಯಲ್ಲಿ ಸೌಲಭ್ಯವನ್ನು ಒದಗಿಸಿದೆ. ಕ್ಷೇತ್ರ ಕರ್ತವ್ಯದಲ್ಲಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕೇವಲ ಹಾಜರಾತಿ ದಾಖಲಿಸುವ ಉದ್ದೇಶಕ್ಕಾಗಿ ತಮ್ಮ ನಿಯಮಿತ ಕಚೇರಿಗಳಿಗೆ ಭೌತಿಕವಾಗಿ ಹಾಜರಾಗುವ ಅಗತ್ಯವಿರುವುದಿಲ್ಲ.



> ಸಂಬಂಧಪಟ್ಟ ಅಧಿಕಾರಿಗಳು ಕರ್ತವ್ಯ ಆಪ್‌ನಲ್ಲಿ ಲಭ್ಯವಿರುವ OOD ಆಯ್ಕೆಯನ್ನು ಬಳಸಿಕೊಂಡು ತಮ್ಮ ಹಾಜರಾತಿಯನ್ನು ಸುಲಭವಾಗಿ ದಾಖಲಿಸಬಹುದಾಗಿದೆ. ಎಲ್ಲಾ ಬೂತ್ ಮಟ್ಟದ ಅಧಿಕಾರಿಗಳು ಇದರ ಸೌಲಭ್ಯವನ್ನು ಪಡೆದುಕೊಳ್ಳಲು ಮಾನ್ಯ ಮುಖ್ಯ ಚುನಾವಣಾಧಿಕಾರಿಗಳು ನಿರ್ದೇಶಿಸಿರುವುದಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.
> -ಜಿಲ್ಲಾಧಿಕಾರಿ ಸ್ವರೂಪ ಟಿ. ಕೆ

## ಜನಿವಾರ ಸಮಾಜದ ಮುಕ್ತಿದಾಮ ಮರು ನಿರ್ಮಾಣ ಕಾರ್ಯಕ್ಕೆ ಚಾಲನೆ

• ಉದಯವಾಹಿನಿ ಮುದ್ದೇಬಿಹಾಳ:

ಕಳೆದ ಹದಿನೈದು ದಿನಗಳಿಂದ ಪಟ್ಟಣದ ತಾಳಿಕೋಟೆ ರಸ್ತೆಯಲ್ಲಿರುವ ಶ್ರೀ ಸವಿತಾ ಮಹರ್ಷಿ ವೃತ್ತದ ಬಳಿಯ ಜನಿವಾರ ಸಮಾಜದ ಮುಕ್ತಿದಾಮದ (ಸ್ಮಶಾನ) ಮರು ನಿರ್ಮಾಣ ಕಾರ್ಯವು ಅತ್ಯಂತ ಶ್ರದ್ಧೆಯಿಂದ ಸಾಗಿದೆ.

ಜನಿವಾರ ಸಮಾಜದ ವ್ಯಾಪ್ತಿಗೆ ಬರುವ 23ಕ್ಕೂ ಹೆಚ್ಚು ಉಪ ಸಮಾಜಗಳ ಬಾಂಧವರ ಸಕ್ರಿಯ ನೆರವು ಹಾಗೂ ಶ್ರಮದಾನದೊಂದಿಗೆ ಸ್ಮಶಾನದ ಮೂಲ ಜಾಗೆಯ ಕಂಪೌಂಡ್ ಕಾಮಗಾರಿ ಭರದಿಂದ ಸಾಗುತ್ತಿದೆ.

ಮುಕ್ತಿದಾಮದ ಅಭಿವೃದ್ಧಿ ಕಾರ್ಯದ ಭಾಗವಾಗಿ ಶುಕ್ರವಾರದಂದು ದಿವಂಗತ ಭಗನಲಾಲ್ ಓಸ್ವಾಲ್ ಅವರ ಸ್ಮರಣಾರ್ಥ, ಅವರ ಸುಪುತ್ರರಾದ ಸಂಜಯ ಓಸ್ವಾಲ್ ಅವರು ತಮ್ಮ ಸ್ವಂತ ಖರ್ಚಿನಲ್ಲಿ ಮುಕ್ತಿದಾಮದ ಜಾಗೆಯಲ್ಲಿ ಬೋರವೆಲ್ ಕೊರೆಸಿದರು. ಕೇವಲ 40 ಅಡಿಯಲ್ಲೇ ಸಮೃದ್ಧವಾಗಿ ನೀರು ಬಿದ್ದಿರುವುದು ಸಮಾಜದ ಬಾಂಧವರಲ್ಲಿ ತೀವ್ರ ಹರ್ಷ ತಂದಿದೆ.


ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಸಮಾಜದ ಮುಖಂಡರಾದ ಮೋಹನ ಓಸ್ವಾಲ್ ಹಾಗೂ ನೇತಾಜಿ ನಲವಡೆ ಅವರು, ಜನಿವಾರ ಸಮಾಜದ ಮುಕ್ತಿದಾಮದ ಮರುಕಾಯಕಲ್ಪಕ್ಕೆ ದಾನಿಗಳು ಸ್ವಯಂಪ್ರೇರಿತರಾಗಿ ಮುಂದೆ ಬರಬೇಕಿದೆ. ಇಂದು ದಿವಂಗತ ಭಗನಲಾಲ್ ಓಸ್ವಾಲ್ ಅವರ ಸ್ಮರಣಾರ್ಥ ಸಂಜಯ ಓಸ್ವಾಲ್ ಅವರು ಬೋರವೆಲ್ ವೆಚ್ಚ ಭರಿಸಿ ಸೇವೆ ಸಲ್ಲಿಸಿದ್ದಾರೆ. ಮುಂದಿನ ದಿನಗಳಲ್ಲಿ ಮುಕ್ತಿವಾಹನ ಖರೀದಿ, ವಿದ್ಯುತ್ ಚಿತಾಗಾರ, ಸೌದೆ ಚಿತಾಗಾರ, ಮಳೆಗಾಲದಲ್ಲಿ ತೊಂದರೆಯಾಗದಂತೆ ಸೂಕ್ತ ಶೆಡ್ ನಿರ್ಮಾಣ, ಮುಡಿಕಟ್ಟೆ, ಹೆಚ್ಚುವರಿ ಚಿತಾಗಾರ ಕಟ್ಟೆ ನಿರ್ಮಾಣ, ಸುಂದರ ಉದ್ಯಾನವನ ಹಾಗೂ ಸೋಲಾರ್ ಲೈಟಿಂಗ್ ವ್ಯವಸ್ಥೆ ಮಾಡಬೇಕಿದೆ.

ಈಗಾಗಲೇ ಹಲವರು ಇದರ ಜವಾಬ್ದಾರಿ ವಹಿಸಿಕೊಳ್ಳುವ ಭರವಸೆ ನೀಡಿದ್ದಾರೆ. ಸಮಾಜದಲ್ಲಿ ಆರ್ಥಿಕವಾಗಿ ಸಬಲರಾಗಿರುವವರು ಈ ಪುಣ್ಯ ಕಾರ್ಯಕ್ಕೆ ಕೈಜೋಡಿಸಿದರೆ, ಇದು ಜಿಲ್ಲೆಯಲ್ಲೇ ಅತ್ಯಂತ ಅಭಿವೃದ್ಧಿ ಹೊಂದಿದ ಮಾದರಿ ಮುಕ್ತಿದಾಮವಾಗಲಿದೆ ಎಂದು ಆಶಯ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಜನಿವಾರ ಸಮಾಜದ ಪ್ರಮುಖ ಮುಖಂಡರುಗಳಾದ ವಾಸುದೇವ ಶಾಸ್ತ್ರೀ, ಪುಟ್ಟು ಕುಲಕರ್ಣಿ, ಮಹೇಂದ್ರ ಓಸ್ವಾಲ್, ಸಂಜಯ ಓಸ್ವಾಲ್, ಶ್ರೀನಿವಾಸ ಇಲ್ಲೂರ, ಸುನಿಲ್ ಇಲ್ಲೂರ, ಹಣಮಂತ ನಲವಡೆ, ರಾವಸಾಬ ದೇಸಾಯಿ, ಶ್ರೀನಿವಾಸ ಚಿತ್ರಗಾರ, ಮಂಜುನಾಥ ಪೇಟಕರ, ನಾರಾಯಣ ಮಿರಜಕರ, ಸಚಿನ್ ಸಾಳೂಂಖೆ, ಸುರೇಶ ಕುಲಕರ್ಣಿ, ಅನಿಲ್ ಕುಲಕರ್ಣಿ, ಉದಯಸಿಂಗ್ ರಾಯಚೂರು, ಅನಿಲ್ ತೇಲಂಗಿ, ಚಂದ್ರಶೇಖರ ಕಲಾಲ, ನಾಗೇಶ ಲಾತೂರಕರ, ಭರತ ಭೋಸಲೆ, ಜೋತ್ಸಾರಾಂ ಸಾಳೂಂಖೆ, ಮೋಹನಲಾಲ ಪಟೇಲ್, ನಾರಾಯಣ ದುರ್ವೆ, ಮಲ್ಲಣ್ಣ ಪತ್ತಾರ, ಅಜೇಯ ಭೋಸಲೆ, ವೀರುಪಾಕ್ಷಿ ಪತ್ತಾರ, ವಾಸುದೇವ ಸಾಲೋಡಗಿ, ಸಂತೋಷ ಚವ್ಹಾಣ ಸೇರಿದಂತೆ ವಿವಿಧ ಜನಿವಾರ ಸಮಾಜದ ನೂರಾರು ಬಂಧುಗಳು ಉಪಸ್ಥಿತರಿದ್ದು ಶ್ರಮದಾನ ಮಾಡಿದರು.

## ಪೊಲೀಸರಿಗೆ ಚಳ್ಳೆಹಣ್ಣು ತಿನ್ನಿಸಿ ಆರೋಪಿ ಪರಾರಿ

• ಉದಯವಾಹಿನಿ ಅಫಜಲಪುರ,

ಪೋಕ್ಸೊ ಪ್ರಕರಣದ ಆರೋಪಿಯೊಬ್ಬನನ್ನು ಪೊಲೀಸ್ ಠಾಣೆಗೆ ವಿಚಾರಣೆಗೆಂದು ಕರೆತಂದಿದ್ದ ವೇಳೆ ಪೊಲೀಸರ ಕಣ್ಣಿಗೆ ಮಣ್ಣೆರೆಚಿ ಠಾಣೆಯಿಂದಲೇ ಪರಾರಿಯಾಗಿದ್ದಾನೆ. ಅಫಜಲಪುರ ಠಾಣೆ ವ್ಯಾಪ್ತಿಯವ ಗ್ರಾಮವೊಂದರ 16 ವರ್ಷದ ಬಾಲಕಿ ನಾಪತ್ತೆಯಾಗಿರುವ ಬಗ್ಗೆ ಪಾಲಕರು ದೂರು ನೀಡಿದ್ದರು. ಪ್ರಕರಣದ ತನಿಖೆ ಕೈಗೆತ್ತಿಕೊಂಡ ಪೊಲೀಸರಿಗೆ, ಅದೇ ಗ್ರಾಮದ 24 ವರ್ಷದ ಯುವಕನೊಬ್ಬ ಬಾಲಕಿಯನ್ನು ಪ್ರೀತಿಯ ಬಲೆಗೆ ಬೀಳಿಸಿ ಬಾಲಕಿಯನ್ನು ಅಪಹರಿಸಿಕೊಂಡು ಹೋಗಿದ್ದನು.

ಅಫಜಲಪುರ ಪೊಲೀಸರು ಇಬ್ಬರೂ ಮಹಾರಾಷ್ಟ್ರದ ಪುಣೆಯಲ್ಲಿದ್ದಾರೆ ಎಂಬ ಖಚಿತ ಮಾಹಿತಿ ಮೇರೆಗೆ ಬಾಲಕಿಯ ಪಾಲಕರೊಂದಿಗೆ ಪುಣೆಗೆ ತೆರಳಿ ಆರೋಪಿಯನ್ನು ಬಂಧಿಸಿ ತಡರಾತ್ರಿ ಠಾಣೆಗೆ ಕರೆತಂದಿದ್ದರು. ಸಂತ್ರಸ್ತ ಬಾಲಕಿಯನ್ನು ವೈದ್ಯಕೀಯ ಪರೀಕ್ಷೆಗಾಗಿ ಕಲಬುರಗಿಯ ಸರಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಆರೋಪಿ ತನ್ನ ಬುದ್ಧಿವಂತಿಕೆಯಿಂದ ಕೈಕೋಳವನ್ನು ಬಿಚ್ಚಿಕೊಂಡು ಠಾಣೆಯ ಪಕ್ಕದ ಬೇವಿನ ಮರದ ಕೊಂಬೆಯನ್ನು ಹಿಡಿದುಕೊಂಡು ಕೆಳಗಿಳಿದು ಕತ್ತಲಲ್ಲಿ ಬುಧವಾರ ನಸುಕಿನ ಜಾವ ಠಾಣೆಯ ಸಿಬ್ಬಂದಿ ನಿದ್ರೆಗೆ ಜಾರಿದ್ದ ವೇಳೆ, ಆರೋಪಿ ಪರಾರಿಯಾಗಿದ್ದಾನೆ. ಆರೋಪಿ ಠಾಣೆಯಿಂದ ಪರಾರಿಯಗಿ ಓಡಿ ಹೋಗುವುದನ್ನು ಇಡೀ ದೃಶ್ಯಗಳನ್ನು ಸಿಸಿಟಿವಿಯಲ್ಲಿ ಸೆರೆಯಾಗಿದ್ದು ನೋಡಿದರೆ ಮೇಲ್ನೋಟಕ್ಕೆ ಪೊಲೀಸರ ನಿರ್ಲಕ್ಷ್ಯ ಎದ್ದು ಕಾಣುತ್ತದೆ.

## ದೇವದುರ್ಗ ದುರಂತ ಸ್ಥಳಕ್ಕೆ ಸಂಸದ ಜಿ. ಕುಮಾರ ನಾಯಕ ಭೇಟಿ

• ಉದಯವಾಹಿನಿ ದೇವದುರ್ಗ:

ದೇವದುರ್ಗ ಪಟ್ಟಣದಲ್ಲಿ ಕಟ್ಟಡದ ಮೇಲ್ಛಾವಣಿ ಕುಸಿದು ಮೂವರು ಯುವಕರು ಮೃತಪಟ್ಟ ದುರಂತ ಸ್ಥಳಕ್ಕೆ ಸಂಸದ ಜಿ. ಕುಮಾರ ನಾಯಕ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಘಟನಾ ಸ್ಥಳದಲ್ಲಿ ಅಧಿಕಾರಿಗಳಿಂದ ಸಂಪೂರ್ಣ ಮಾಹಿತಿ ಪಡೆದ ಅವರು, ದುರಂತಕ್ಕೆ ಕಾರಣವಾದ ಅಂಶಗಳ ಕುರಿತು ಸವಿಸ್ತಾರವಾಗಿ ವಿಚಾರಣೆ ನಡೆಸಿದರು. ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ ಸಂಸದರು, ಸರ್ಕಾರದಿಂದ ಸೂಕ್ತ ಪರಿಹಾರ ದೊರಕುವಂತೆ ಮುಖ್ಯಮಂತ್ರಿ ಅವರೊಂದಿಗೆ ವೈಯಕ್ತಿಕವಾಗಿ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ದುರಂತಕ್ಕೆ ಕಾರಣವಾದ ಕಟ್ಟಡದ ಮಾಲೀಕರು ಹಾಗೂ ಸಂಬಂಧಪಟ್ಟವರ ವಿರುದ್ಧ ಕಾನೂನುಬದ್ಧವಾಗಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ ಅವರು, ಘಟನೆಯ ಕುರಿತು ಸಮಗ್ರ ತನಿಖೆ ನಡೆಸಿ, ನಿರ್ಲಕ್ಷ್ಯ ಕಂಡುಬಂದರೆ ತಪ್ಪಿತಸ್ಥರ ವಿರುದ್ಧ ಯಾವುದೇ ಮುಲಾಜಿಲ್ಲದೆ ಕ್ರಮ ಜರುಗಿಸಬೇಕು ಎಂದು ನಿರ್ದೇಶನ ನೀಡಿದರು. ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಪಟ್ಟಣದಲ್ಲಿರುವ ಶಿಥಿಲಾವಸ್ಥೆಯ ಕಟ್ಟಡಗಳ ಸಮೀಕ್ಷೆ ನಡೆಸಿ, ಸಾರ್ವಜನಿಕರ ಸುರಕ್ಷತೆಗಾಗಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

## ಬಸ್‌ಗೆ ಕಾರು ಡಿಕ್ಕಿ; ತಪ್ಪಿದ ಅನಾಹುತ

• ಉದಯವಾಹಿನಿ ಜಮಖಂಡಿ, :

ತಾಲೂಕಿನ ಮದರಖಂಡಿ ಕ್ರಾಸ್‌ನಲ್ಲಿ ಸಾರಿಗೆ ಬಸ್‌ನ ಹಿಂಭಾಗಕ್ಕೆ ಕಾರು ಡಿಕ್ಕಿ ಹೊಡೆದ ಪರಿಣಾಮ ಕಾರಿನ ಮುಂಭಾಗ ಜಖಂಗೊಂಡಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಜಮಖಂಡಿ ವಿಭಾಗದ ಸಾರಿಗೆ ಬಸ್ ಜಮಖಂಡಿಯಿಂದ ವಿಜಯಪುರಕ್ಕೆ ತೆರಳಿ, ಮರಳಿ ಜಮಖಂಡಿ ಮಾರ್ಗವಾಗಿ ಗೋಕಾಕ ಕಡೆಗೆ ತೆರಳುತ್ತಿದ್ದ ವೇಳೆ ಮದರಖಂಡಿ ಕ್ರಾಸ್ ಸಮೀಪದ ರಸ್ತೆ ಹಂಪ್ಸ್ ಬಳಿ ಚಾಲಕ ಬಸ್‌ನ ವೇಗವನ್ನು ನಿಧಾನಗೊಳಿಸಿದ್ದಾನೆ. ಈ ಸಂದರ್ಭದಲ್ಲಿ ಹಿಂಬದಿಯಿಂದ ವೇಗವಾಗಿ ಬಂದ ಸ್ವಿಫ್ಟ್ ಕಾರಿನ ಚಾಲಕ ನಿಯಂತ್ರಣ ಕಳೆದುಕೊಂಡು ಬಸ್‌ಗೆ ಡಿಕ್ಕಿ ಹೊಡೆದಿದ್ದಾನೆ ಎಂದು ತಿಳಿದು ಬಂದಿದೆ. ಅಪಘಾತದ ಪರಿಣಾಮ ಕಾರಿನ ಮುಂಭಾಗ ಸಂಪೂರ್ಣ ನುಜ್ಜುಗುಜ್ಜಾಗಿದ್ದು, ಘಟನೆಯಲ್ಲಿ ಯಾರಿಗೂ ಗಂಭೀರ ಗಾಯಗಳಾಗಿಲ್ಲ. ಸ್ಥಳೀಯರ ಸಹಕಾರದಿಂದ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲಾಗಿದೆ. ಈ ಘಟನೆ ಜಮಖಂಡಿ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

## ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆಯಲ್ಲಿ ಅವ್ಯವಹಾರ ಆರೋಪ

• ಉದಯವಾಹಿನಿ ಬೀದರ್:

ಜಿಲ್ಲೆಯ 2025-26ನೇ ಸಾಲಿನ ಮುಖ್ಯಮಂತ್ರಿಗಳ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆಯಡಿ ರಸ್ತೆ ದುರಸ್ತಿ ಮತ್ತು ಒಗ್ಗೂಡಿಸುವಿಕೆ ಕಾಮಗಾರಿಗಳನ್ನು ಕೈಗೊಳ್ಳದೇ ಸರ್ಕಾರದ ಕೋಟ್ಯಂತರ ರೂಪಾಯಿ ಹಣವನ್ನು ದುರುಪಯೋಗಪಡಿಸಿಕೊಂಡಿರುವ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಂಡು ಸೇವೆಯಿಂದ ವಜಾಗೊಳಿಸುವಂತೆ ಆಗ್ರಹಿಸಿ ಕರ್ನಾಟಕ ಪ್ರಜಾ ಶಕ್ತಿ ಸಮಿತಿ ಜಿಲ್ಲಾ ಘಟಕದ ವತಿಯಿಂದ ಜಿ.ಪಂ ಕಚೇರಿ ಎದುರಿಗೆ ಇಂದು ಒಂದು ದಿನದ ಸಾಂಕೇತಿಕ ಸತ್ಯಾಗ್ರಹ ಧರಣಿ ನಡೆಸಿ ಮನವಿ ಸಲ್ಲಿಸಲಾಯಿತು.

**ಸಾಂಕೇತಿಕ ಸತ್ಯಾಗ್ರಹ ಧರಣಿ ನಡೆಸಿ ಮನವಿ**

ಜಿಲ್ಲೆಯ ವಿವಿಧ ಭಾಗಗಳಲ್ಲಿ ರಸ್ತೆ ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳದೇ ಯೋಜನೆಯ ಅನುದಾನವನ್ನು ದುರುಪಯೋಗ ಪಡಿಸಿಕೊಂಡಿರುವ ಆರೋಪವನ್ನು ಸಂಘಟನೆ ಮಾಡಿದೆ.



ಬೀದರ್ ತಾಲ್ಲೂಕಿನ ಅಲಿಯಾಬಾದ್-ಜನವಾಡ ರಸ್ತೆ, ಅಲಿಯಂಬರ್-ಯರನಳ್ಳಿ ರಸ್ತೆ, ಔರಾದ್ (ಬಿ) ತಾಲ್ಲೂಕಿನ ಸುಂಕನಾಳ ಕ್ರಾಸ್-ಸುಂಕನಾಳ ಗ್ರಾಮ ರಸ್ತೆ, ನಾಗೂರ ಭಾಬಜಿ ಕ್ರಾಸ್-ಚಂದರ್ ಮಹಾರಾಜ ತಾಂಡಾ ರಸ್ತೆ ಸೇರಿದಂತೆ ಹಲವೆಡೆ ಕಾಮಗಾರಿಗಳು ನಡೆದಿಲ್ಲ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಇದೇ ರೀತಿ ಔರಾದ್ (ಬಿ) ತಾಲ್ಲೂಕಿನ ಗೌಡಗಾಂವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ದುರಸ್ತಿ ಹಾಗೂ ಕಮಲನಗರ ತಾಲ್ಲೂಕಿನ ಡೋಣಗಾಂವ-ರಂಡ್ಯಾಳ ರಸ್ತೆ ದುರಸ್ತಿ ಕಾಮಗಾರಿಗಳೂ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಶಿವಾಜಿರಾವ ಡೋಣೆ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಕಲೀಮೊದ್ದಿನ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಸುನೀಲ ಚಿಲ್ಲರ್ಗೆ ಹಾಗೂ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಿರಿಯ ಅಭಿಯಂತರ ಕೀರಣ ರಾಠೋಡ್ ವಿರುದ್ಧ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳುವಂತೆ ಸಂಘಟನೆ ಒತ್ತಾಯಿಸಿದ್ದಾರೆ.

## ಜು.5ರಂದು ವಿವೇಕ ಲೀಲಾಮೃತ ಉಪನ್ಯಾಸ

• ಉದಯವಾಹಿನಿ ಬಳ್ಳಾರಿ,

ನಾಡಿನ ಪ್ರಸಿದ್ಧ ಆಧ್ಯಾತ್ಮಿಕ ಚಿಂತಕರು, ಪ್ರೇರಣದಾಯಿ ಭಾಷಣಕಾರರು ಹಾಗೂ ಗದಗ-ವಿಜಯಪುರದ ಶ್ರೀರಾಮಕೃಷ್ಣ-ವಿವೇಕಾನಂದ ಆಶ್ರಮದ ಅಧ್ಯಕ್ಷರೂ ಆಗಿರುವ ಸ್ವಾಮಿ ನಿರ್ಭಯಾನಂದ ಸರಸ್ವತಿ ಅವರು ಜುಲೈ 5 ರಂದು ಭಾನುವಾರ ಸಂಜೆ 6.15ಕ್ಕೆ ನಗರದ ಡಾ.ರಾಜ್ಕುಮಾರ್ ರಸ್ತೆಯಲ್ಲಿರುವ ಪಾಂಚಜನ್ಯ ಸಭಾಂಗಣದಲ್ಲಿ ವಿವೇಕಮಂಟ ಉಪನ್ಯಾಸ ಮಾಲಿಕೆಯಲ್ಲಿ ''ವಿವೇಕಲೀಲಾಮೃತ'' ಕುರಿತು ಉಪನ್ಯಾಸ ನೀಡಲಿದ್ದಾರೆ.

ಕಾರ್ಯಕ್ರಮ ಮುನ್ನ ಬೆಳಗಲ್ಲು ಹನುಮಂತ ಹಾಗೂ ಬೆಳಗಲ್ಲು ರೇಖಾ ಅವರಿಂದ ಭಕ್ತಿಸಂಗೀತ ಕಾರ್ಯಕ್ರಮ ಜರುಗಲಿದ್ದು, ಮುದ್ದಟನೂರು ತಿಪ್ಪೇಸ್ವಾಮಿ ಹಾರ್ಮೋನಿಯಂ ಹಾಗೂ ಎಂ.ವೀರೇಶ್ ಕುರುಗೋಡು ತಬಲಾ ಸಾಥ್ ನೀಡುವರು. ಯುವಜನರಲ್ಲಿ ಧನಾತ್ಮಕ ಚಿಂತನೆ, ಮಾನವೀಯ ಮೌಲ್ಯಗಳು ಮತ್ತು ಭಾರತೀಯ ಸಂಸ್ಕೃತಿಯನ್ನು ಬಿತ್ತುವ ಕಾರ್ಯದಲ್ಲಿ ನಿರತರಾಗಿರುವ ಶ್ರೀ ಸ್ವಾಮಿ ನಿರ್ಭಯಾನಂದ ಸರಸ್ವತಿ ಅವರು ಬಳ್ಳಾರಿ ಭಾಗದ ಭಕ್ತರ ಒತ್ತಾಸೆಯಂತೆ ಪ್ರತಿ ತಿಂಗಳ ಮೊದಲ ಭಾನುವಾರ ನಗರದ ಡಾ.ರಾಜ್ಕುಮಾರ್ ರಸ್ತೆಯಲ್ಲಿರುವ (ಕೆ.ಎಂ ಟ್ರೇಡರ್ಸ್ ಹಿಂಭಾಗ) ಪಾಂಚಜನ್ಯ ಸಭಾಂಗಣದಲ್ಲಿ ವಿವೇಕಾನಂದರ ಜೀವನ ಚರಿತ್ರೆ ಕುರಿತು ಉಪನ್ಯಾಸ ನೀಡುತ್ತಿರುವುದು ವಿಶೇಷವಾಗಿದೆ.

## ಭಾಲ್ಕಿ ತಾಲೂಕಿನಲ್ಲಿ 24/7 ಕುಡಿಯುವ ನೀರಿನ ಸಮಸ್ಯೆಗೆ ಸ್ಪಂದನೆ

### ಲಭ್ಯ ಇರದ 4 ಕಡೆಗಳಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ.

• ಉದಯವಾಹಿನಿ ಭಾಲ್ಕಿ:

ತಾಲ್ಲೂಕಿನ ಗ್ರಾಮೀಣ ಭಾಗಗಳಲ್ಲಿ ಕುಡಿಯುವ ನೀರು ಪೂರೈಕೆಗೆ ಅಗತ್ಯ ಕ್ರಮ ಕೈಗೊಂಡಿದ್ದು ಹಾಗಾಗಿ ಸಾರ್ವಜನಿಕರು ಯಾವುದೇ ಕಾರಣಕ್ಕೂ ಆತಂಕ ಪಡುವ ಅವಶ್ಯಕತೆ ಇಲ್ಲ ಎಂದು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್ ಅಭಯ ನೀಡಿದ್ದಾರೆ.

**1 : ನೀರಿಗೆ 1 ಕೋಟಿ ರೂ ಅನುದಾನ**
**2 : ನಿರೀಕ್ಷಿತ ಪ್ರಮಾಣದಲ್ಲಿ ಮಳೆ ಸುರಿದಿಲ್ಲ**
**3 : ಕುಡಿಯುವ ನೀರಿಗೆ ಶಾಶ್ವತ ಪರಿಹಾರ**

ತಾಲ್ಲೂಕಿನ ಮೋರಂಬಿ ಗ್ರಾಮದ ಬಸವಕಲ್ಯಾಣ ರಸ್ತೆಯ ಹೊಸ ಬಡಾವಣೆಯಲ್ಲಿ ಹೊಸದಾಗಿ ಕೊರೆಯುತ್ತಿದ್ದ ಕೊಳವೆ ಬಾವಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಅವರು ಮಾತನಾಡಿದರು. ಜೂನ್ ತಿಂಗಳಿನಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆ ಸುರಿದಿಲ್ಲ. ಹಾಗಾಗಿ ಅಲ್ಲಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರುವ ಸಾಧ್ಯತೆಯಿದೆ. ಹಾಗಾಗಿ ಗ್ರಾಮೀಣ ಭಾಗಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿ ಪರಿಗಣಿಸುವಂತೆ ಈಗಾಗಲೇ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. 24/7 ಕುಡಿಯುವ ನೀರಿನ ಬಗ್ಗೆ ದೂರು ಸ್ವೀಕರಿಸಲು ಪಂಚಾಯತಿ ಅಧಿಕಾರಿಗಳು ಸಿದ್ಧರಿದ್ದಾರೆ.



> ಯಾವುದೇ ಕಾರಣಕ್ಕೂ ಸಾರ್ವಜನಿಕರು ಶಾಂತಿ, ಸುವ್ಯವಸ್ಥೆಗೆ ಧಕ್ಕೆ ಆಗದಂತೆ ನೋಡಿಕೊಳ್ಳಬೇಕು ಎಂದು ಮನವಿ ಮಾಡಿದರು. ಈ ಗ್ರಾಮದಲ್ಲಿ ಮತ್ತೊಂದು ಹೊಸದಾಗಿ ಕೊಳವೆ ಬಾವಿ ಕೊರೆಸಿರುವುದಾಗಿ ತಿಳಿಸಿದರು.
> -ಸೂರ್ಯಕಾಂತ ಬಿರಾದಾರ್

ಆದ್ದರಿಂದ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಸಾರ್ವಜನಿಕರು ಅನಗತ್ಯವಾಗಿ ಪಂಚಾಯಿತಿಗೆ ಬೀಗ ಹಾಕುವುದು, ರಸ್ತೆ ತಡೆ ಮತ್ತು ಪ್ರತಿಭಟನೆ ಮಾಡುವಂತಹದ್ದು ಯಾವುದೇ ಕಾರಣಕ್ಕೂ ಮಾಡಬಾರದು.

> ಸಚಿವ ಈಶ್ವರ ಖಂಡ್ರೆ ಅವರ ನಿರಂತರ ಪ್ರಯತ್ನದಿಂದ ಮುಂದಿನ ಬೇಸಿಗೆಯೊಳಗೆ 160 ಜನವಸತಿಗಳ ಪೈಕಿ 132 ಜನವಸತಿಗಳಿಗೆ ಬಹುಗ್ರಾಮ ನೀರು ಸರಬರಾಜು ಯೋಜನೆಯಡಿ ಕುಡಿಯುವ ನೀರಿನ ಪೂರೈಕೆಗೆ ಶಾಶ್ವತ ಪರಿಹಾರ ಸಿಗಲಿದೆ ಎಂದು ಭರವಸೆ ನೀಡಿದರು.
> -ಸೂರ್ಯಕಾಂತ ಬಿರಾದಾರ್

ಸಾರ್ವಜನಿಕರ ದೂರಿಗೆ ಒಂದು ವೇಳೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸ್ಪಂದಿಸಿದ್ದರೇ ತಕ್ಷಣ ತಾಲ್ಲೂಕು ಪಂಚಾಯತಿ ಅಂತವರ ವಿರುದ್ಧ ಸೂಕ್ತ ಕ್ರಮ ಜರುಗಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದರು.

ತಾಲ್ಲೂಕಿನ ಗ್ರಾಮೀಣ ಭಾಗಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದ 24 ಗಂಟೆಯೊಳಗೆ ಸ್ಪಂದಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು ಆಗಿರುವ ಈಶ್ವರ ಖಂಡ್ರೆ ಅವರು ತಾಲ್ಲೂಕು ಆಡಳಿತಕ್ಕೆ ಕಟ್ಟುನಿಟ್ಟಿನ ಸೂಚನೆ ನೀಡಿ ಕುಡಿಯುವ ನೀರು ಪೂರೈಕೆಗೆ 1 ಕೋಟಿ ರೂ ಅನುದಾನ ಬಿಡುಗಡೆಗೊಳಿಸಿದ್ದಾರೆ. ಈಗಾಗಲೇ ನೀರಿನ ಸಮಸ್ಯೆ ಕಂಡು ಬಂದ ಕಡೆಗಳಲ್ಲಿ 26 ಕೊಳವೆ ಬಾವಿ ಕೊರೆಸಲಾಗಿದೆ. ಜತೆಗೆ ನೀರಿನ ಮೂಲ ಲಭ್ಯ ಇರದ 4 ಕಡೆಗಳಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. 17 ಕಡೆಗಳಲ್ಲಿ ಖಾಸಗಿ ಜಲಮೂಲ ಬಳಸಿಕೊಂಡು ಸಾರ್ವಜನಿಕರಿಗೆ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ ಎಂದು ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್ ತಿಳಿಸಿದರು. ಕಳೆದ ಮೇ ತಿಂಗಳಿನಲ್ಲಿ ಮೋರಂಬಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದ ಕೂಡಲೇ ಸ್ಪಂದಿಸಿ ಹೊಸ ಕೊಳವೆ ಬಾವಿ ಕೊರೆಸಿ ಅದಕ್ಕೆ ಮೋಟಾರ್ ಅಳವಡಿಸಲಾಗಿತ್ತು.

ಆದರೆ ಈ ಕೊಳವೆ ಬಾವಿಗೆ ನೀರಿನ ಮೂಲ ಕಡಿಮೆ ಇರುವ ಕಾರಣಕ್ಕೆ ಟ್ಯಾಂಕರ್ ಮೂಲಕ ನೀರು ಸರಬರಾಜು ವ್ಯವಸ್ಥೆ ಮಾಡಲಾಗಿತ್ತು. ಆದರೆ ಬಡಾವಣೆಯ ನಾಗರಿಕರು ಕುಡಿಯುವ ನೀರಿಗೆ ಶಾಶ್ವತ ಪರಿಹಾರ ಒದಗಿಸುವಂತೆ ಆಗ್ರಹಿಸಿ ಕಳೆದ ಎರಡು ದಿನಗಳ ಹಿಂದೆ ರಸ್ತೆ ತಡೆ ಮಾಡಿದ್ದರು.

**ತಾತ್ಕಾಲಿಕ ಟ್ಯಾಂಕರ್ ನೀರು,**

> ಅಂತರ್ಜಲ ಮಟ್ಟ ಕುಸಿಯುತ್ತಿರುವುದರಿಂದ ಎಷ್ಟೇ ಕೊಳವೆ ಬಾವಿ ಕೊರೆದರು ಕಡಿಮೆ ನೀರಿನ ಅಭಾವವಿರುವುದರಿಂದ ನೀರು ದೊರೆಯುತ್ತಿಲ್ಲ. ತಾಲ್ಲೂಕು ಆಡಳಿತ ಮಾಡುವ ತಾತ್ಕಾಲಿಕ ಟ್ಯಾಂಕರ್ ನೀರು, ಖಾಸಗಿ ನೀರು ಹೀಗೆ ಕೆಲವು ಪರ್ಯಾಯ ವ್ಯವಸ್ಥೆಗೆ ಸಾರ್ವಜನಿಕರು ಸಹಕರಿಸಬೇಕು.